# ಪೌಲನು ರೋಮನರಿಗೆ ಬರೆದ ಪತ್ರ

## ಮುನ್ನುಡಿ

"ರೋಮನರಿಗೆ ಬರೆದ ಪತ್ರ"ವನ್ನು ಪೌಲನು ತಾನು ರೋಮಿನಲ್ಲಿರುವ ಧರ್ಮಸಭೆಯನ್ನು ಸಂದರ್ಶಿಸುವ ಮುನ್ನ ಅಲ್ಲಿಯ ಭಕ್ತಾದಿಗಳನ್ನು ಸಿದ್ಧಗೊಳಿಸುವ ಉದ್ದೇಶದಿಂದ ಬರೆದನು. ರೋಮಿನಲ್ಲಿ ಕೆಲಕಾಲ ಇದ್ದು ಅಲ್ಲಿ ಶುಭಸಂದೇಶವನ್ನು ಸಾರಿದ ಬಳಿಕ, ಅಲ್ಲಿನ ಕ್ರೈಸ್ತ ಜನರ ನೆರವಿನಿಂದ ಸ್ಪೈಯಿನ್ ನಾಡಿಗೆ ಹೋಗುವ ಯೋಜನೆಯನ್ನು ಪೌಲನು ಹಾಕಿಕೊಂಡಿದ್ದನು. ಕ್ರೈಸ್ತಧರ್ಮದ ತತ್ವಗಳನ್ನು ಧ್ಯಾನಿಸಿ ಚೆನ್ನಾಗಿ ಗ್ರಹಿಸಿಕೊಂಡಿದ್ದ ಪೌಲನು, ಆ ಧರ್ಮವು ನಮ್ಮ ದಿನನಿತ್ಯ ಜೀವನದಲ್ಲಿ ಬೀರಬೇಕಾದ ಪರಿಣಾಮಗಳನ್ನು ವಿವರಿಸುತ್ತಾನೆ. ಪೌಲನ ಕ್ರೈಸ್ತಾಭಿಪ್ರಾಯಗಳು ಪೂರ್ಣವಾಗಿ ಲಿಖಿತವಾಗಿರುವುದು ಈ ಪತ್ರದಲ್ಲೇ.

ಪ್ರಾರಂಭದಲ್ಲಿ ಪೌಲನು ರೋಮಿನ ಕ್ರೈಸ್ತಸಭೆಯ ದೇವಜನರಿಗೆ ಶುಭಾಶಯಗಳನ್ನು ಕೋರಿ, ಅವರಿಗಾಗಿ ತಾನು ದೇವರಲ್ಲಿ ಪ್ರಾರ್ಥಿಸುವುದಾಗಿ ತಿಳಿಸುತ್ತಾನೆ. ಅನಂತರ ತನ್ನ ಪತ್ರದ ಮುಖ್ಯ ವಿಷಯವನ್ನು ಕುರಿತು ಹೀಗೆ ಪ್ರಸ್ತಾಪಿಸುತ್ತಾನೆ: "ದೇವರು ಜನರನ್ನು ತಮ್ಮೊಡನೆ ಸತ್ಸಂಬಂಧದಲ್ಲಿ ಹೇಗೆ ಇರಿಸಿಕೊಳ್ಳುತ್ತಾರೆ ಎಂಬುದು ಶುಭಸಂದೇಶದಿಂದ ವ್ಯಕ್ತವಾಗುತ್ತದೆ. ಪ್ರಾರಂಭದಿಂದ ಕೊನೆಯವರೆಗೂ ವಿಶ್ವಾಸವೇ ಈ ಸತ್ಸಂಬಂಧಕ್ಕೆ ಆಧಾರ" (1.17).

ಯೆಹೂದ್ಯರು–ಯೆಹೂದ್ಯರಲ್ಲದವರು ಎಂಬ ತಾರತಮ್ಯ ಇಲ್ಲದೆ ಇಡೀ ಮಾನವ ಕೋಟಿಯೇ ಪಾಪಕ್ಕೆ ಅಧೀನವಾಗಿದೆ. ಆದ್ದರಿಂದ ಸರ್ವರೂ ದೇವರೊಂದಿಗೆ ಸತ್ಸಂಬಂಧ ಹೊಂದಬೇಕಾದುದು ಅತ್ಯಗತ್ಯ. ಕ್ರಿಸ್ತಯೇಸುವಿನಲ್ಲಿ ವಿಶ್ವಾಸವಿಡುವುದರಿಂದ ಈ ಸತ್ಸಂಬಂಧ ದೊರಕುತ್ತದೆ. ಈ ಸತ್ಸಂಬಂಧದ ಪರಿಣಾಮವಾಗಿ ಮಾನವನು ಕ್ರಿಸ್ತಯೇಸುವಿನ ಅನ್ಯೋನ್ಯತೆಯಲ್ಲಿ ಹೊಸ ಜೀವವನ್ನು ಪಡೆಯುತ್ತಾನೆ. ಪವಿತ್ರಾತ್ಮ ಅವರ ಸಹಾಯದಿಂದ ಅವನು ಪಾಪ ಹಾಗೂ ಮರಣದ ಸಂಕೋಲೆಗಳಿಂದ ಬಿಡುಗಡೆಯಾಗುತ್ತಾನೆ; ದೇವರೊಂದಿಗೆ ಶಾಂತಿಸಮಾಧಾನದಿಂದಿರುತ್ತಾನೆ. ಪತ್ರದ ಮೊದಲಿನ ನಾಲ್ಕು ಅಧ್ಯಾಯಗಳಲ್ಲಿ ಇದೆಲ್ಲವನ್ನು ಸ್ವಾರಸ್ಯವಾಗಿ ಬಣ್ಣಿಸಲಾಗಿದೆ.

ದೇವರು ಯೆಹೂದ್ಯರಿಗೆ ನೀಡಿದ ಧರ್ಮಶಾಸ್ತ್ರದ ಉದ್ದೇಶವೇನು? ಕ್ರೈಸ್ತವಿಶ್ವಾಸಿಯ ಜೀವನದಲ್ಲಿ ದೇವರ ಪಾತ್ರವೇನು? ಎಂಬ ಪ್ರಶ್ನೆಗಳಿಗೆ ಉತ್ತರ ಬೇಕಾದರೆ 5ರಿಂದ 8ನೇ ಅಧ್ಯಾಯದವರೆಗೆ ಓದಬೇಕು. ಮಾನವಕುಲದ ಬಗ್ಗೆ ದೇವರು ಮಾಡಿದ ಯೋಜನೆಯಲ್ಲಿ ಯೆಹೂದ್ಯರೂ ಯೆಹೂದ್ಯೇತರರೂ ಯಾವ ರೀತಿಯಲ್ಲಿ ಹೊಂದಿಕೆಯಾಗುತ್ತಾರೆ ಎಂಬ ಸಮಸ್ಯೆಯನ್ನು ಪೌಲನು ಬಗೆಹರಿಸುತ್ತಾನೆ. ಯೆಹೂದ್ಯರು ಲೋಕೋದ್ಧಾರಕನಾದ ಯೇಸುಕ್ರಿಸ್ತರನ್ನು ನಿರಾಕರಿಸಿದರು. ಇದು ಆಕಸ್ಮಿಕವೇನೂ ಅಲ್ಲ. ಬೇರೆಲ್ಲಾ ಮಾನವರು ದೇವಾನುಗ್ರಹದ ಸುಧೆಯನ್ನು ಸ್ವಾಮಿಯೇಸುವಿನಲ್ಲಿ ಸವಿಯಬೇಕೆಂಬುದು ದೇವರ ಸಂಕಲ್ಪವಾಗಿತ್ತು. ಎಂದಾದರೂ ಯೆಹೂದ್ಯರು ಕೂಡ ಉದ್ಧಾರಕ ಯೇಸುವಿನ ಬಳಿಗೆ ಮರಳಿ ಬರುವರು ಎಂಬುದು ಪೌಲನ ದೃಢವಾದ ನಂಬಿಕೆ.

ಕ್ರೈಸ್ತವಿಶ್ವಾಸಿ ಹೇಗೆ ಬಾಳಬೇಕು? ಮುಖ್ಯವಾಗಿ ಇತರರೊಂದಿಗೆ ಎಷ್ಟು ಸ್ನೇಹ ಸೌಹಾರ್ದದಿಂದಿರಬೇಕು? ದೇವರ ಸೇವೆ, ಸರ್ಕಾರದ ಸೇವೆ, ಪರಸ್ಪರ ಸೇವೆ, ಶುದ್ಧ ಮನಸ್ಸಾಕ್ಷಿ ಇವೇ ಮುಂತಾದ ವಿಚಾರಗಳನ್ನು ಪೌಲನು ತನ್ನದೇ ಆದ ಶೈಲಿಯಲ್ಲಿ, ಓದುಗರಿಗೆ ಮನವರಿಕೆಯಾಗುವ ರೀತಿಯಲ್ಲಿ ವರ್ಣಿಸುತ್ತಾನೆ.

ಕೊನೆಯದಾಗಿ ವೈಯಕ್ತಿಕ ಶುಭಾಶಯ ಹಾಗೂ ದೈವಸ್ತುತಿಯೊಂದಿಗೆ ಈ ಪತ್ರ ಮುಕ್ತಾಯಗೊಳ್ಳುತ್ತದೆ.

**ಪರಿವಿಡಿ**


| | | |
|---|---|---|
| ಪೀಠಿಕೆ | : | 1.1 – 1.17 |
| ಮಾನವರಿಗೆ ಜೀವೋದ್ಧಾರದ ಅವಶ್ಯಕತೆ | : | 1.18 – 3.20 |
| ಲೋಕೋದ್ಧಾರದ ರೀತಿನೀತಿ | : | 3.21 – 4.25 |
| ಕ್ರಿಸ್ತ ಯೇಸುವಿನಲ್ಲಿ ಹೊಸ ಬಾಳ್ವೆ | : | 5.1 – 8.39 |
| ದೈವಯೋಜನೆಯಲ್ಲಿ ಯೆಹೂದ್ಯರ ಪಾತ್ರ | : | 9.1 – 11.36 |
| ಕ್ರೈಸ್ತಜನರ ಸನ್ನಡತೆ | : | 12.1 – 15.13 |
| ವೈಯಕ್ತಿಕ ಶುಭಾಶಯಗಳು | : | 15.14 – 16.27 |


## ಪೀಠಿಕೆ

**1** 1,7 ದೇವರಿಗೆ ಅತ್ಯಂತ ಪ್ರಿಯರು ಹಾಗು ದೇವಜನರಾಗಲು ಕರೆಹೊಂದಿದವರು ಆದ ರೋಮ್‌ನಗರ
ನಿವಾಸಿಗಳೆಲ್ಲರಿಗೆ: ಕ್ರಿಸ್ತ ಯೇಸುವಿನ ದಾಸನೂ ಪ್ರೇಷಿತನಾಗಲು ಕರೆ ಹೊಂದಿದವನೂ ದೇವರ ಶುಭಸಂದೇಶವನ್ನು ಸಾರಲು ನೇಮಕಗೊಂಡವನೂ ಆದ ಪೌಲನು ಬರೆಯುವ ಪತ್ರ:

ನಮ್ಮ ತಂದೆಯಾದ ದೇವರು ಹಾಗು ಪ್ರಭುವಾದ ಯೇಸುಕ್ರಿಸ್ತರು ನಿಮಗೆ ಕೃಪಾಶೀರ್ವಾದವನ್ನೂ
ಶಾಂತಿಸಮಾಧಾನವನ್ನೂ ಅನುಗ್ರಹಿಸಲಿ. 2ದೇವರು ತಮ್ಮ ಶುಭಸಂದೇಶವನ್ನು ನೀಡುವುದಾಗಿ ಪ್ರವಾದಿಗಳ
ಮುಖಾಂತರ ಮುಂಚಿತವಾಗಿಯೇ ಪವಿತ್ರಗ್ರಂಥದಲ್ಲಿ ವಾಗ್ದಾನಮಾಡಿದ್ದರು. 3–4ಈ ಸಂದೇಶ ದೇವರ
ಪುತ್ರನೂ ನಮ್ಮ ಪ್ರಭುವೂ ಆದ ಯೇಸುಕ್ರಿಸ್ತರನ್ನು ಕುರಿತಾದುದು. ಮನುಷ್ಯತ್ವದ ಮಟ್ಟಿಗೆ ಯೇಸು ದಾವೀದನ ವಂಶಜರು; ದೈವಿಕ ಪರಿಶುದ್ಧತೆಯ ಮಟ್ಟಿಗೆ ಇವರು ದೇವರ ಶಕ್ತಿಯನ್ನು ವ್ಯಕ್ತಪಡಿಸುವ ದೇವರ ಪುತ್ರ.
ಸತ್ತು ಪುನರುತ್ಥಾನ ಹೊಂದಿ ಇದನ್ನು ಖಚಿತಪಡಿಸಿದವರು. 5ಇವರ ನಾಮ ಮಹಿಮೆಗೋಸ್ಕರವಾಗಿಯೇ
ಸರ್ವಜನಾಂಗಗಳೂ ಇವರನ್ನು ವಿಶ್ವಾಸಿಸಿ, ವಿಧೇಯರಾಗಿ ನಡೆಯುವಂತೆ ಮಾಡಲು ಪ್ರೇಷಿತನಾಗುವ ಸೌಭಾಗ್ಯ ನನ್ನದಾಯಿತು. ಆ ಯೇಸುಕ್ರಿಸ್ತರ ಮುಖಾಂತರವೇ ದೇವರು ಈ ಭಾಗ್ಯವನ್ನು ನನಗೆ
ಅನುಗ್ರಹಿಸಿದರು. 6ಯೇಸುಕ್ರಿಸ್ತರಿಗೆ ಸ್ವಂತದವರಾಗಲು ಕರೆ ಹೊಂದಿರುವ ನೀವು ಕೂಡ ಸರ್ವ
ಜನಾಂಗಗಳಲ್ಲಿ ಸೇರಿದ್ದೀರಿ.

### ರೋಮ್ ನಗರಕ್ಕೆ ಹೋಗುವ ಹಂಬಲ

8 ಮೊಟ್ಟ ಮೊದಲನೆಯದಾಗಿ, ನಿಮ್ಮೆಲ್ಲರ ಪರವಾಗಿ ಯೇಸುಕ್ರಿಸ್ತರ ಮುಖಾಂತರ ನಾನು ನನ್ನ
ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. ಏಕೆಂದರೆ, ನಿಮ್ಮ ವಿಶ್ವಾಸ ಹಾಗು ವಿಧೇಯತೆ ಇಡೀ ಜಗತ್ತಿನಲ್ಲಿ
ಪ್ರಖ್ಯಾತವಾಗಿದೆ. 9–10ನಾನು ಪ್ರಾರ್ಥನೆ ಮಾಡುವಾಗಲೆಲ್ಲ ತಪ್ಪದೆ, ನಿಮ್ಮ ಪರವಾಗಿ ವಿಜ್ಞಾಪನೆ ಮಾಡುತ್ತೇನೆ.
ದೈವಚಿತ್ತದಿಂದ ನಾನು ನಿಮ್ಮಲ್ಲಿಗೆ ಬರಲು ಈಗಲಾದರೂ ಅನುಕೂಲವಾಗಲೆಂದು ಬೇಡಿಕೊಳ್ಳುತ್ತೇನೆ. ಇದಕ್ಕೆ ದೇವರೇ ಸಾಕ್ಷಿ. ಅವರ ಪುತ್ರನನ್ನೇ ಕುರಿತಾದ ಶುಭಸಂದೇಶವನ್ನು ಸಾರುತ್ತಾ ದೈವಸೇವೆಯನ್ನು
ಮನಃಪೂರ್ವಕವಾಗಿ ಮಾಡಿಕೊಂಡು ಬರುತ್ತಿದ್ದೇನೆ. 11ನಾನು ನಿಮ್ಮನ್ನು ಕಂಡು, ನಿಮ್ಮೊಡನೆ ಆಧ್ಯಾತ್ಮಿಕ
ವರಗಳನ್ನು ಹಂಚಿಕೊಂಡು, ನಿಮ್ಮನ್ನು ದೃಢಪಡಿಸಲು ಅತ್ಯಾಸಕ್ತಿಯಿಂದಿದ್ದೇನೆ. 12ಅಂದರೆ, ನನ್ನ
ವಿಶ್ವಾಸದಿಂದ ನೀವೂ ನಿಮ್ಮ ವಿಶ್ವಾಸದಿಂದ ನಾನೂ – ಪರಸ್ಪರ ಪ್ರಯೋಜನವನ್ನು ಪಡೆಯಬೇಕೆಂಬುದೇ
ನನ್ನ ಆಶಯ. 13ಸಹೋದರರೇ, ಈ ವಿಷಯ ನಿಮಗೆ ತಿಳಿದಿರಲಿ: ನನ್ನ ಸೇವೆ ಇತರ ಜನರಲ್ಲಿ

ಫಲಪ್ರದವಾದಂತೆ ನಿಮ್ಮಲ್ಲೂ ಫಲಪ್ರದವಾಗಬೇಕೆಂಬ ಉದ್ದೇಶದಿಂದ ನಿಮ್ಮ ಬಳಿಗೆ ಬರಲು ನಾನು ಅನೇಕ
ಸಾರಿ ಪ್ರಯತ್ನಿಸಿದೆನು. ಆದರೆ, ಕಾರಣಾಂತರಗಳಿಂದ ಇದುವರೆವಿಗೂ ಬರಲು ಸಾಧ್ಯವಾಗಲಿಲ್ಲ. 14ಜನರು
ನಾಗರಿಕರೇ ಆಗಿರಲಿ, ಅನಾಗರಿಕರೇ ಆಗಿರಲಿ, ವಿದ್ಯಾವಂತರೇ ಆಗಿರಲಿ, ಅವಿದ್ಯಾವಂತರೇ ಆಗಿರಲಿ,
ಅವರೆಲ್ಲರಿಗೂ ನಾನು ಕರ್ತವ್ಯಬದ್ಧನಾಗಿದ್ದೇನೆ. 15ಆದುದರಿಂದಲೇ ರೋಮ್ ನಗರದಲ್ಲಿರುವ ನಿಮಗೂ
ಶುಭಸಂದೇಶವನ್ನು ಸಾರಲು ನಾನು ಆತುರದಿಂದ ಎದುರುನೋಡುತ್ತಿದ್ದೇನೆ.

## ಶುಭಸಂದೇಶದ ಶಕ್ತಿ

16 ಶುಭಸಂದೇಶದ ವಿಷಯದಲ್ಲಿ ನಾನು ನಾಚಿಕೆಪಡುವವನೇ ಅಲ್ಲ. ಯೆಹೂದ್ಯರನ್ನು
ಮೊದಲ್ಗೊಂಡು ಇತರರಿಗೂ ವಿಶ್ವಾಸಿಸುವ ಪ್ರತಿಯೊಬ್ಬನಿಗೂ ಈ ಶುಭಸಂದೇಶವು ಜೀವೋದ್ಧಾರವನ್ನು
ತರುವ ದೇವರ ಶಕ್ತಿಯಾಗಿದೆ. 17ದೇವರು ಮಾನವನನ್ನು ಹೇಗೆ ತಮ್ಮೊಡನೆ ಸತ್ಸಂಬಂಧದಲ್ಲಿ
ಇರಿಸಿಕೊಳ್ಳುತ್ತಾರೆ ಎಂಬುದನ್ನು ಶುಭಸಂದೇಶವು ಪ್ರಕಟಿಸುತ್ತದೆ. ಇಂಥ ಸಂಬಂಧವು ಆದಿಯಿಂದ
ಅಂತ್ಯದವರೆಗೂ ವಿಶ್ವಾಸದಿಂದ ಮಾತ್ರ ಸಾಧ್ಯ. “ಯಾರು ದೇವರೊಡನೆ ಸತ್ಸಂಬಂಧ ಹೊಂದಿರುತ್ತಾರೋ
ಅವರು ವಿಸ್ವಾಸದಿಂದಲೇ ಸಜ್ಜೀವವನ್ನು ಪಡೆಯುತ್ತಾರೆ,” ಎಂದು ಪವಿತ್ರ ಗ್ರಂಥದಲ್ಲಿ ಲಿಖಿತವಾಗಿದೆ.

## ಮಾನವ ಕುಲದ ಮಲಿನತೆ

18 ಮಾನವರ ಎಲ್ಲಾ ಪಾಪಾಕ್ರಮಗಳ ಮೇಲೆ ದೇವರ ಕೋಪಾಗ್ನಿ ಸ್ವರ್ಗದಿಂದ ಎರಗುವುದೆಂದು
ಪ್ರಕಟವಾಗುತ್ತಿದೆ. ಏಕೆಂದರೆ, ಅವರ ಅಕ್ರಮ ನಡತೆ ಸತ್ಯವನ್ನು ಅಡಗಿಸುತ್ತಿದೆ. 19ದೇವರ ವಿಷಯವಾಗಿ
ಮಾನವರು ಏನನ್ನು ಅರಿತುಕೊಳ್ಳಲು ಸಾಧ್ಯವೋ ಅದು ಅವರಿಗೆ ಚೆನ್ನಾಗಿ ತಿಳಿದಿದೆ. ದೇವರೇ ಅದನ್ನು
ಅವರಿಗೆ ಸ್ಪಷ್ಟಪಡಿಸಿದ್ದಾರೆ. 20ದೇವರು ಲೋಕವನ್ನು ಸೃಷ್ಟಿಸಿದಂದಿನಿಂದ ಅವರ ಅಗೋಚರ
ಗುಣಲಕ್ಷಣಗಳು, ಅವರ ಅನಂತ ಶಕ್ತಿ ಮತ್ತು ದೈವಸ್ವಭಾವ ಮನುಷ್ಯರಿಗೆ ಸೃಷ್ಟಿಗಳ ಮೂಲಕವೇ
ವೇದ್ಯವಾಗುತ್ತಿವೆ. ಆದುದರಿಂದ ಮಾನವರು ತಮ್ಮ ಅಜ್ಞಾನಕ್ಕೆ ಯಾವ ನೆಪವನ್ನು ಒಡ್ಡಲೂ ಸಾಧ್ಯವಿಲ್ಲ.
21ದೇವರನ್ನು ಅವರು ಅರಿತಿದ್ದರೂ ದೇವರೆಂದು ಗೌರವಿಸಲಿಲ್ಲ; ದೇವರಿಗೆ ಉಪಕಾರ ಸ್ಮರಣೆಯನ್ನು
ಮಾಡಲಿಲ್ಲ. ಬದಲಾಗಿ ಅವರು ವ್ಯರ್ಥ ಆಲೋಚನೆಗಳಲ್ಲಿ ಮಗ್ನರಾದರು. ಅವರ ವಿವೇಕರಹಿತ ಮನಸ್ಸು
ಅಂಧಕಾರಮಯ ಆಯಿತು. 22ತಾವೇ ಜ್ಞಾನಿಗಳೆಂದು ಕೊಚ್ಚಿಕೊಳ್ಳುತ್ತ ಅವರು ನಿಜವಾಗಿಯೂ
ಮೂರ್ಖರಾದರು. 23ಅಮರದೇವರನ್ನು ಆರಾಧಿಸುವುದನ್ನು ಬಿಟ್ಟು ಅಳಿದುಹೋಗುವಂಥ ನರಮಾನವರ
ಪ್ರಾಣಿಪಕ್ಷಿಗಳ, ಸರ್ಪಾದಿಗಳ ವಿಗ್ರಹಗಳನ್ನು ಮಾಡಿ ಆರಾಧಿಸತೊಡಗಿದರು.

24 ಆದುದರಿಂದ, ಮಾನವರು ಮನಸ್ಸಿನ ಆಶಾಪಾಶಗಳಿಗೆ ಬಲಿಯಾಗಿ ತಮ್ಮ ದೇಹಗಳಿಂದ
ತಮ್ಮತಮ್ಮಲ್ಲೇ ಅಶ್ಲೀಲ ಕೃತ್ಯಗಳೆಸಗಲೆಂದು ದೇವರು ಅವರನ್ನು ಅಶುದ್ಧ ನಡತೆಗೆ ಬಿಟ್ಟುಬಿಟ್ಟರು. 25ಅವರು
ದೇವರ ಸತ್ಯವನ್ನು ಬಿಟ್ಟು ಅಸತ್ಯವಾದುದನ್ನು ಅಂಗೀಕರಿಸಿದರು; ಸೃಷ್ಟಿಕರ್ತನನ್ನು ಆರಾಧಿಸದೆ, ಸೃಷ್ಟಿಯಾದ
ವಸ್ತುಗಳನ್ನೇ ಆರಾಧಿಸಿ, ಸೇವೆ ಸಲ್ಲಿಸಿದರು. ಸರ್ವಕಾಲಕ್ಕೂ ಸೃಷ್ಟಿಕರ್ತರೊಬ್ಬರಿಗೇ ಸ್ತುತಿಸ್ತೋತ್ರ ಸಲ್ಲತಕ್ಕದ್ದು.
ಆಮೆನ್.

26 ಮಾನವರು ಈ ರೀತಿ ವರ್ತಿಸಿದ್ದರಿಂದಲೇ ದೇವರು ಅವರನ್ನು ತುಚ್ಛವಾದ
ಕಾಮಾಭಿಲಾಷೆಗಳಿಗೆ ಬಿಟ್ಟುಬಿಟ್ಟರು. ಅವರ ಸ್ತ್ರೀಯರು, ಸ್ವಾಭಾವಿಕವಾದ ಭೋಗವನ್ನು ತೊರೆದು ಸ್ವಭಾವಕ್ಕೆ
ವಿರುದ್ಧವಾದ ಕಾಮಕೃತ್ಯಗಳನ್ನು ಮಾಡಿದರು. 27ಅಂತೆಯೇ ಪುರುಷರು ಸಹ ಸ್ವಾಭಾವಿಕವಾದ
ಸ್ತ್ರೀಸಂಗವನ್ನು ತೊರೆದು ತಮ್ಮತಮ್ಮಲ್ಲಿಯೇ ಕಾಮೋದ್ರೇಕಗೊಂಡರು; ಸಲಿಂಗಕಾಮಿಗಳಾದರು;
ಲಜ್ಜಾಹೀನರಾಗಿ ವರ್ತಿಸಿದರು; ತಮ್ಮ ದುರ್ನಡತೆಗೆ ತಕ್ಕ ಶಿಕ್ಷೆಯನ್ನು ತಮ್ಮ ಮೇಲೆ ಬರಮಾಡಿಕೊಂಡರು.

28 ಅವರು ತಮಗಿದ್ದ ದೇವರ ಜ್ಞಾನವನ್ನು ತಿರಸ್ಕರಿಸಿದ್ದರಿಂದ, ದೇವರು ಅವರನ್ನು ಅಶ್ಲೀಲ
ನಡವಳಿಕೆಗೆ ಬಿಟ್ಟುಬಿಟ್ಟರು. 29ಸಕಲ ವಿಧವಾದ ಅನ್ಯಾಯ, ಅಕ್ರಮ, ದುರಾಶೆ, ದುರ್ನಡತೆ ಅವರಲ್ಲಿ
ತುಂಬಿಕೊಂಡವು. ಮತ್ಸರ, ಕೊಲೆ, ಕಲಹ, ಕಪಟತನ, ಹಗೆತನ, ಇವೆಲ್ಲವೂ ಅವರಲ್ಲಿ ತುಂಬಿಹೋಗಿವೆ.
30ಅವರು ಹರಟೆಮಲ್ಲರು, ಚಾಡಿಕೋರರು, ದೇವದ್ರೋಹಿಗಳು, ಗರ್ವಿಗಳು, ಅಹಂಕಾರಿಗಳು,

ಜಂಭಕೊಚ್ಚಿಕೊಳ್ಳುವವರು, ಕೇಡುಬಗೆಯುವವರು, ತಂದೆತಾಯಿಗಳಿಗೆ ಅವಿಧೇಯರು ಆಗಿದ್ದಾರೆ. [31]ಮಾತ್ರವಲ್ಲ, ಅವರು ಅವಿವೇಕಿಗಳು, ಅಪ್ರಾಮಾಣಿಕರು, ನಿಷ್ಕರುಣಿಗಳು ಮತ್ತು ನಿರ್ದಯಿಗಳು. [32]ಇಂಥವುಗಳನ್ನು ಮಾಡುವವರು ಮರಣದಂಡನೆಗೆ ಪಾತ್ರರು ಎಂಬ ದೈವನಿಯಮವನ್ನು ಅರಿತಿದ್ದರೂ ಇಂಥ ಹೀನ ಕೃತ್ಯಗಳನ್ನು ಮಾಡುತ್ತಾರೆ. ತಾವು ಮಾಡುವುದೇ ಅಲ್ಲದೆ ಹಾಗೆಮಾಡುವ ಇತರರನ್ನೂ ಪ್ರೋತ್ಸಾಹಿಸುತ್ತಾರೆ.

## ದೇವರ ನ್ಯಾಯತೀರ್ಪು

**2** ಇತರರು ದೋಷಿಗಳೆಂದು ತೀರ್ಪುನೀಡುವ ಮಾನವನೇ, ನೀನು ಯಾರೇ ಆಗಿರು, ನೀನು ಮಾತ್ರ ನಿರ್ದೋಷಿಯೆಂದು ಸಮರ್ಥಿಸಿಕೊಳ್ಳಲು ಸಾಧ್ಯವಿಲ್ಲ. ಇತರರಿಗೆ ತೀರ್ಪು ನೀಡುವ ನೀನು ಅವರು ಮಾಡುವ ತಪ್ಪುಗಳನ್ನು ನೀನೂ ಮಾಡಿದೆಯಾದರೆ, ನಿನ್ನನ್ನು ನೀನೇ ದೋಷಿಯೆಂದು ತೀರ್ಪು ಮಾಡಿಕೊಂಡ ಹಾಗಾಯಿತು. [2]ಇಂಥ ಅಪರಾಧಗಳನ್ನು ಮಾಡುವವರ ಬಗ್ಗೆ ದೇವರು ನೀಡುವ ತೀರ್ಪು ನ್ಯಾಯಬದ್ಧವಾದುದು ಎಂಬುದನ್ನು ನಾವು ಬಲ್ಲೆವು. [3]ಹೀಗಿರುವಾಗ, ಇತರರಿಗೆ ಯಾವ ಅಪರಾಧಕ್ಕಾಗಿ ತೀರ್ಪುನೀಡಿದೆಯೋ ಅಂಥ ಅಪರಾಧವನ್ನೇ ನೀನೂ ಮಾಡುತ್ತಿರುವೆಯಲ್ಲಾ! ದೇವರು ಕೊಡುವ ನ್ಯಾಯತೀರ್ಪಿನಿಂದ ನೀನು ಮಾತ್ರ ತಪ್ಪಿಸಿಕೊಳ್ಳುವಿಯೆಂದು ನೆನೆಸುತ್ತೀಯೋ? [4]ಅಥವಾ ದೇವರ ಅಪಾರ ದಯೆಯನ್ನೂ ಶಾಂತಿಸಹನೆಯನ್ನೂ ಉಪೇಕ್ಷಿಸುತ್ತೀಯೋ? ನೀನು ದೇವರಿಗೆ ಅಭಿಮುಖನಾಗಬೇಕೆಂಬ ಉದ್ದೇಶದಿಂದಲೇ ಅವರು ನಿನ್ನ ಮೇಲೆ ಅಷ್ಟು ದಯೆದಾಕ್ಷಿಣ್ಯದಿಂದ ಇದ್ದಾರೆ ಎಂಬುದು ನಿನಗೆ ತಿಳಿಯದೋ? [5]ಆದರೆ ನಿನ್ನದು ಕಠಿಣ ಹೃದಯ, ಮೊಂಡುಸ್ವಭಾವ. ಆದ್ದರಿಂದ ದೇವರ ಕೋಪ ಹಾಗು ನ್ಯಾಯವಾದ ತೀರ್ಪು ವ್ಯಕ್ತವಾಗುವ ದಿನದಂದು ನಿನಗೆ ವಿಧಿಸಲಾಗುವ ಶಿಕ್ಷೆಯನ್ನು ನೀನಾಗಿಯೇ ಸಂಗ್ರಹಿಸಿಕೊಳ್ಳುತ್ತಿದ್ದೀಯೆ. [6]ಪ್ರತಿಯೊಬ್ಬನಿಗೂ ದೇವರು ಅವನವನ ಕೃತ್ಯಗಳಿಗೆ ತಕ್ಕ ಪ್ರತಿಫಲವನ್ನು ಕೊಡುತ್ತಾರೆ. [7]ಸತ್ಕಾರ್ಯಗಳಲ್ಲಿ ನಿರತರಾಗಿದ್ದು, ಮಹಿಮೆಯನ್ನು, ಗೌರವವನ್ನು, ಅಮರತ್ವವನ್ನು ಅರಸುತ್ತಾ ಬಾಳುವವರಿಗೆ ದೇವರು ನಿತ್ಯಜೀವವನ್ನು ದಯಪಾಲಿಸುತ್ತಾರೆ. [8]ಸ್ವಾರ್ಥಸಾಧಕರಾಗಿದ್ದು, ಸತ್ಯಕ್ಕೆ ಮಣಿಯದೆ, ದುರ್ಮಾರ್ಗವನ್ನೇ ಅವಲಂಬಿಸಿ ನಡೆಯುವವರ ಮೇಲೆ ದೇವರ ಕೋಪವೂ ಆಕ್ರೋಶವೂ ಎರಗುತ್ತವೆ. [9]ಯೆಹೂದ್ಯರನ್ನು ಮೊದಲ್ಗೊಂಡು, ಇತರರಿಗೂ ಪಾಪಕೃತ್ಯಗಳನ್ನು ಮಾಡುವ ಪ್ರತಿಯೊಬ್ಬರಿಗೂ ಕಷ್ಟಸಂಕಟಗಳು ಕಾದಿರುತ್ತವೆ. [10]ಅಂತೆಯೇ, ಯೆಹೂದ್ಯರನ್ನು ಮೊದಲ್ಗೊಂಡು ಇತರರಿಗೂ ಸತ್ಕಾರ್ಯಗಳನ್ನು ಮಾಡುವ ಪ್ರತಿಯೊಬ್ಬರಿಗೂ ಮಹಿಮೆ, ಗೌರವ, ಶಾಂತಿ ಲಭಿಸುತ್ತವೆ. [11]ದೇವರು ಪಕ್ಷಪಾತಿ ಅಲ್ಲ.

12 ಮೋಶೆಯ ಧರ್ಮಶಾಸ್ತ್ರದ ಅರಿವಿಲ್ಲದೆ ಪಾಪಮಾಡುವವರು ಆ ಶಾಸ್ತ್ರದ ತೀರ್ಪಿಗೆ ಒಳಗಾಗದೆಯೇ ನಾಶವಾಗುತ್ತಾರೆ. ಆ ಧರ್ಮಶಾಸ್ತ್ರದ ಅರಿವಿದ್ದೂ ಪಾಪಮಾಡುವವರು ಆ ಶಾಸ್ತ್ರದ ತೀರ್ಪಿಗೆ ಗುರಿಯಾಗುತ್ತಾರೆ. [13]ಧರ್ಮಶಾಸ್ತ್ರವನ್ನು ಆಲಿಸಿದ ಮಾತ್ರಕ್ಕೆ ಯಾರೂ ದೇವರೊಡನೆ ಸತ್ಸಂಬಂಧವನ್ನು ಪಡೆಯಲು ಸಾಧ್ಯವಿಲ್ಲ. ಅದನ್ನು ಆಲಿಸುವುದರ ಜೊತೆಗೆ ಪಾಲಿಸಲೂ ಬೇಕು. [14]ಯೆಹೂದ್ಯರಲ್ಲದವರಿಗೆ, ಮೋಶೆಯ ಧರ್ಮಶಾಸ್ತ್ರ ಇರುವುದಿಲ್ಲ. ಅವರು ಅದರ ವಿಧಿನಿಯಮಗಳನ್ನು ಸ್ವಾಭಾವಿಕವಾಗಿ ಅನುಸರಿಸಿದ್ದೇ ಆದರೆ, ಅವರಿಗೆ ಧರ್ಮಶಾಸ್ತ್ರವಿಲ್ಲದಿದ್ದರೂ ಅವರ ಅಂತರಂಗವೇ ಅವರಿಗೆ ಧರ್ಮಶಾಸ್ತ್ರವಾಗುತ್ತದೆ. [15]ಧರ್ಮಶಾಸ್ತ್ರದ ವಿಧಿನಿಯಮಗಳು ಅವರ ಹೃದಯಗಳಲ್ಲಿ ಲಿಖಿತವಾಗಿವೆಯೆಂದು ಅವರ ನಡತೆಯಿಂದಲೇ ವೇದ್ಯವಾಗುತ್ತದೆ. ಇದು ಸತ್ಯವೆಂಬುದನ್ನು ಅವರ ಮನಸ್ಸಾಕ್ಷಿಯು ಖಚಿತಪಡಿಸುತ್ತದೆ. ಅವರ ಅಂತಃಪ್ರಜ್ಞೆಯೇ ಅವರನ್ನು ದೋಷಿಗಳೆಂದೋ ಇಲ್ಲವೆ ನಿರ್ದೋಷಿಗಳೆಂದೋ ತೀರ್ಮಾನಿಸುತ್ತದೆ. [16]ನಾನು ಬೋಧಿಸುವ ಶುಭಸಂದೇಶದ ಪ್ರಕಾರ, ದೇವರು ಯೇಸುಕ್ರಿಸ್ತರ ಮುಖಾಂತರ ಮಾನವನ ಗುಟ್ಟುಗಳನ್ನು ರಟ್ಟುಮಾಡಿ, ತೀರ್ಪುಕೊಡುವ ದಿನ ಬಂದೇ ಬರುತ್ತದೆ. ಆ ದಿನ ಇದೆಲ್ಲಾ ಸಂಭವಿಸುತ್ತದೆ.

**ಧರ್ಮಶಾಸ್ತ್ರಜ್ಞರು ದೋಷರಹಿತರೇ?**

17 “ನಾನು ಯೆಹೂದ್ಯನು” ಎಂದು ಹೇಳಿಕೊಳ್ಳುತ್ತಿರುವ ನಿನ್ನ ವಿಷಯವಾದರೂ ಏನು? ಧರ್ಮಶಾಸ್ತ್ರವನ್ನು ಆಧಾರವಾಗಿಟ್ಟುಕೊಂಡು ದೇವರಿಗೆ ಸೇರಿದವನೆಂದು ಕೊಚ್ಚಿಕೊಳ್ಳುತ್ತೀಯೆ; 18ದೇವರ ಚಿತ್ತವನ್ನು ಅರಿತಿರುವುದಾಗಿ ನೆನೆಸುತ್ತೀಯೆ; ಉತ್ತಮವಾದುದನ್ನು ಆರಿಸಿಕೊಳ್ಳಲು ಧರ್ಮಶಾಸ್ತ್ರದಿಂದ ಕಲಿತುಕೊಂಡಿರುವುದಾಗಿ ಹೇಳಿಕೊಳ್ಳುತ್ತೀಯೆ; 19ನೀನು ಕುರುಡರಿಗೆ ದಾರಿತೋರಿಸುವವನೂ ಕತ್ತಲೆಯಲ್ಲಿರುವವರಿಗೆ ಬೆಳಕೂ ಬುದ್ಧಿಹೀನರಿಗೆ ಬೋಧಕನೂ 20ಮಕ್ಕಳಿಗೆ ಶಿಕ್ಷಕನೂ ಆಗಿರುವುದಾಗಿ ದೃಢವಾಗಿ ನಂಬಿಕೊಂಡಿದ್ದೀಯೆ; ಧರ್ಮಶಾಸ್ತ್ರದಲ್ಲಿ ಜ್ಞಾನ ಮತ್ತು ಸತ್ಯ ಮೇಳೈಸಿರುವುದಾಗಿ ಭಾವಿಸುತ್ತೀಯೆ. 21ಹೀಗೆ, ಇತರರಿಗೆ ಉಪದೇಶಿಸುವ ನೀನು, ನಿನಗೆ ನೀನೇ ಉಪದೇಶ ಮಾಡಿಕೊಳ್ಳಬಾರದೇನು? “ಕದಿಯಬಾರದು” ಎಂದು ಬೋಧಿಸುವ ನೀನೇ ಕಳ್ಳತನ ಮಾಡುತ್ತೀಯೇನು? 22“ವ್ಯಭಿಚಾರ ಮಾಡಬಾರದು” ಎಂದು ಹೇಳುವ ನೀನೇ ವ್ಯಭಿಚಾರ ಮಾಡುತ್ತೀಯೇನು? ವಿಗ್ರಹಗಳನ್ನು ವಿರೋಧಿಸುವ ನೀನು ದೇವಾಲಯವನ್ನೇ ದೋಚುತ್ತೀಯೇನು? 23ದೇವರಿಂದಲೇ ನಿಯಮಗಳನ್ನು ಪಡೆದಿರುವುದಾಗಿ ಕೊಚ್ಚಿಕೊಳ್ಳುವ ನೀನು ಆ ನಿಯಮಗಳನ್ನೇ ಉಲ್ಲಂಘಿಸಿ ದೇವರಿಗೆ ದ್ರೋಹ ಬಗೆಯುತ್ತೀಯೇನು? 24ಈ ಕಾರಣದಿಂದ,

“ನಿಮ್ಮ ದೆಸೆಯಿಂದಲೇ
ಯೆಹೂದ್ಯರಲ್ಲದವರು
ದೇವರ ಹೆಸರನ್ನು ದೂಷಿಸುತ್ತಾರೆ,”

ಎಂದು ಪವಿತ್ರ ಗ್ರಂಥದಲ್ಲಿ ಬರೆದಿದೆ.

25 ನೀನು ಧರ್ಮಶಾಸ್ತ್ರಕ್ಕೆ ವಿಧೇಯನಾಗಿ ನಡೆದರೆ, ನೀನು ಮಾಡಿಸಿಕೊಂಡಿರುವ ಸುನ್ನತಿಗೆ ಅರ್ಥವಿದೆ. ಆದರೆ ನಿನ್ನ ನಡತೆ ಧರ್ಮಶಾಸ್ತ್ರಕ್ಕೆ ವ್ಯತಿರಿಕ್ತವಾಗಿದ್ದರೆ ನೀನು ಸುನ್ನತಿ ಮಾಡಿಸಿಕೊಂಡಿದ್ದರೂ ಮಾಡಿಸಿಕೊಳ್ಳದಂತೆಯೇ ಸರಿ. 26ಸುನ್ನತಿ ಮಾಡಿಸಿಕೊಳ್ಳದ ಮತ್ತೊಬ್ಬನು ಧರ್ಮಶಾಸ್ತ್ರದ ವಿಧಿಗಳನ್ನು ಪಾಲಿಸಿಕೊಂಡು ಬಂದವನಾಗಿದ್ದರೆ, ದೇವರು ಅವನನ್ನು ಸುನ್ನತಿ ಮಾಡಿಸಿಕೊಂಡವನಂತೆ ಪರಿಗಣಿಸುವುದಿಲ್ಲವೆ? 27ನೀವು ಸುನ್ನತಿ ಮಾಡಿಸಿಕೊಂಡಿದ್ದೀರಿ; ಲಿಖಿತ ಧರ್ಮಶಾಸ್ತ್ರವನ್ನು ಇಟ್ಟುಕೊಂಡಿದ್ದೀರಿ; ಆದರೂ ಅದನ್ನು ಮೀರಿನಡೆಯುತ್ತೀರಿ. ಹೀಗಿರಲಾಗಿ, ಶಾರೀರಿಕವಾಗಿ ಸುನ್ನತಿಯನ್ನು ಮಾಡಿಸಿಕೊಳ್ಳದಿದ್ದರೂ ಸ್ವಾಭಾವಿಕವಾಗಿ ಧರ್ಮಶಾಸ್ತ್ರವನ್ನು ಅನುಸರಿಸಿ ನಡೆಯುವವರು ಸುನ್ನತಿ ಮಾಡಿಸಿಕೊಂಡಿರುವ ನಿಮಗೆ ತೀರ್ಪುಕೊಡುತ್ತಾರೆ. 28ಬಾಹ್ಯಾಚರಣೆಯಲ್ಲಿ ಮಾತ್ರ ಯೆಹೂದ್ಯನಾಗಿರುವವನು ನಿಜವಾದ ಯೆಹೂದ್ಯನಲ್ಲ. ಅಂತೆಯೇ, ನಿಜವಾದ ಸುನ್ನತಿಯು ಕೇವಲ ಬಾಹ್ಯ ಲಕ್ಷಣವುಳ್ಳ ಶಾರೀರಿಕ ಪದ್ಧತಿಯಲ್ಲ. 29ಯಾರು ಅಂತರಂಗದಲ್ಲಿ ಯೆಹೂದ್ಯನಾಗಿರುತ್ತಾನೋ ಅವನೇ ನಿಜವಾದ ಯೆಹೂದ್ಯನು. ಅಂಥವನಿಗೆ ಅಂತರ್ಯದಲ್ಲಿ ಸುನ್ನತಿಯಾಗಿರುತ್ತದೆ. ಇದು ಲಿಖಿತ ಧರ್ಮಶಾಸ್ತ್ರದಿಂದ ಆದದ್ದಲ್ಲ, ದೇವರಾತ್ಮ ಅವರಿಂದ ಆದ ಕಾರ್ಯ; ಇಂಥವನು ಮೆಚ್ಚುಗೆಯನ್ನು ಪಡೆಯುವುದು ಮನುಷ್ಯನಿಂದಲ್ಲ, ದೇವರಿಂದ.

**3** ಹಾಗಾದರೆ ಯೆಹೂದ್ಯರ ವೈಶಿಷ್ಟ್ಯವೇನು? ಅವರು ಸುನ್ನತಿ ಮಾಡಿಸಿಕೊಂಡುದರಿಂದ ಪಡೆದ ಪ್ರಯೋಜನವೇನು? 2ಹೌದು, ಎಲ್ಲಾ ವಿಧದಲ್ಲಿಯೂ ಹೆಚ್ಚು ಪ್ರಯೋಜನವಿದೆ. ಮೊದಲನೆಯದಾಗಿ, ದೇವರು ತಮ್ಮ ಸಂದೇಶವನ್ನು ವಹಿಸಿಕೊಟ್ಟದ್ದು ಯೆಹೂದ್ಯರಿಗೆ ತಾನೆ? 3ಅವರಲ್ಲಿ ಕೆಲವರು ಅಪ್ರಾಮಾಣಿಕರಾಗಿ ನಡೆದುಕೊಂಡಿದ್ದರೆ ಏನಾಯಿತು? ದೇವರ ಪ್ರಾಮಾಣಿಕತನಕ್ಕೆ ಭಂಗಬರಲು ಸಾಧ್ಯವೇ? 4ಎಂದಿಗೂ ಇಲ್ಲ. ಮಾನವರೆಲ್ಲರೂ ಸುಳ್ಳುಗಾರರಾದರೂ ದೇವರು ಮಾತ್ರ ಸತ್ಯವಂತರೇ ಸರಿ. ಪವಿತ್ರ ಗ್ರಂಥದಲ್ಲಿ ಹೀಗೆಂದು ಬರೆದಿದೆ:

“ನಿನ್ನ ಮಾತಿನಲ್ಲೇ ನೀನು

ನೀತಿವಂತನೆಂದು ವ್ಯಕ್ತವಾಗಬೇಕು,
ವ್ಯಾಜ್ಯವೆದ್ದಾಗ ನೀನು ವಿಜಯಶಾಲಿ
ಆಗಬೇಕು."

5 ನಮ್ಮ ಅಕ್ರಮ ನಡತೆ ದೇವರ ನ್ಯಾಯ ನೀತಿಯನ್ನು ಮತ್ತಷ್ಟು ಸ್ಪಷ್ಟವಾಗಿ ತೋರಿಸುವ
ಸಾಧನವಾದರೆ ಆಗ ಏನು ಹೇಳುವುದು? ಆ ಅಕ್ರಮಕ್ಕಾಗಿ ದೇವರು ನಮ್ಮ ಮೇಲೆ ಕೋಪ ಕಾರಿದರೆ ಅದು
ಅನ್ಯಾಯವೆಂದು ನಾವು ಹೇಳಬಹುದೆ? (ಮನುಷ್ಯನಿಗೆ ಸಹಜವಾಗಿ ಏಳುವ ಪ್ರಶ್ನೆಯಿದು) [6]ಎಂದಿಗೂ ಇಲ್ಲ!
ದೇವರು ನ್ಯಾಯವಂತರಲ್ಲದಿದ್ದರೆ ಲೋಕಕ್ಕೆ ನ್ಯಾಯತೀರ್ಪು ಕೊಡಲು ಹೇಗೆ ತಾನೆ ಸಾಧ್ಯ?

7 ನಮ್ಮ ಅಸತ್ಯತೆಯಿಂದ ದೇವರ ಸತ್ಯತೆ ವ್ಯಕ್ತವಾಗಿ ಅವರ ಮಹಿಮೆ ಬೆಳಗುವುದಾದರೆ ನನಗೇಕೆ
ಪಾಪಿಯೆಂದು ತೀರ್ಪಾಗಬೇಕು? [8]"ಒಳ್ಳೆಯದಾಗುವಂತೆ, ಕೆಟ್ಟದ್ದನ್ನೇ ಏಕೆ ಮಾಡಬಾರದು?" – ಈ ರೀತಿ
ಸ್ವತಃ ನಾನೇ ಬೋಧಿಸುತ್ತಿರುವುದಾಗಿ ಕೆಲವರು ನನ್ನನ್ನು ದೂಷಿಸಿ ನನ್ನ ಮೇಲೆ ಅಪಪ್ರಚಾರ ಮಾಡುತ್ತಿದ್ದಾರೆ.
ಅಂಥವರಿಗೆ ತಕ್ಕ ಶಿಕ್ಷೆಯಾಗುವುದು ನ್ಯಾಯ ಸಮ್ಮತವಾದುದು.

## ದೇವರೊಡನೆ ಸತ್ಸಂಬಂಧಿತರು ಯಾರು?

9 ಹಾಗಾದರೆ, ಯೆಹೂದ್ಯರಾದ ನಾವು ಇತರರಿಗಿಂತಲೂ ಶ್ರೇಷ್ಠರೋ? ಎಷ್ಟು ಮಾತ್ರಕ್ಕೂ ಇಲ್ಲ.
ಯೆಹೂದ್ಯರೇ ಆಗಲಿ, ಇತರರೇ ಆಗಲಿ, ಎಲ್ಲರೂ ಪಾಪದ ಆಳ್ವಿಕೆಗೆ ಅಧೀನರು. ಇದನ್ನು ನಾನು ಈಗಾಗಲೇ
ಸ್ಪಷ್ಟೀಕರಿಸಿದ್ದೇನೆ. [10]ಪವಿತ್ರ ಗ್ರಂಥದಲ್ಲಿ ಹೀಗಿದೆ:

[11] ದೇವರೊಡನೆ ಸತ್ಸಂಬಂಧಿತರಾರೂ ಇಲ್ಲ,
ಸನ್ಮತಿಗಳು ಒರ್ವರೂ ಇಲ್ಲ
ಆತನನ್ನು ಅರಸುವವರಂತೂ ಇಲ್ಲವೇ ಇಲ್ಲ.
[12] ಸರಿದರು ದೂರ, ದೇವರಿಂದ ದೂರ
ದಾರಿತಪ್ಪಿ ನಡೆದರೆಲ್ಲರೂ ಬಲುದೂರ
ಒಳಿತನು ಮಾಳ್ಪರೊರ್ವನೂ ಇಲ್ಲ.
[13] ಅವರ ಗಂಟಲೇ ತೆರೆದ ಸಮಾಧಿಯಾಗಿದೆ
ನಾಲಗೆಗಳಲಿ ಮರೆಮೋಸ ತುಂಬಿತುಳುಕುತಿದೆ.
ತುಟಿಯ ಕಂಪನದಲಿ ಘೋರ ವಿಷವಿದೆ.
[14] ಶಾಪಕೋಪ ಅವರ ಬಾಯಲಿ ತುಂಬಿದೆ
[15] ಕಾಲುಕೆರೆದು ನಿಂತಿಹರು ರಕುತ ಪಾತಕೆ
[16] ನಾಶಪರಿವಿನಾಶ ಅವರು ಹೋದೆಡೆ.
[17] ಶಾಂತಿಪಥವನು ಅರಿಯರವರು
[18] ಅವರೆದೆಯಲಿಲ್ಲ ದೇವಭಯವು.

19 ಧರ್ಮಶಾಸ್ತ್ರದ ನೇಮನಿಯಮಗಳು ಆ ಶಾಸ್ತ್ರಕ್ಕೆ ಅಧೀನರಾದವರಿಗೆ ಮಾತ್ರ ಅನ್ವಯಿಸುತ್ತವೆಂದು
ನಾವು ಬಲ್ಲೆವು. ಆದ್ದರಿಂದ ಯಾರೂ ಯಾವ ನೆಪವನ್ನು ಹೇಳಲೂ ಬಾಯಿ ತೆರೆಯುವಂತಿಲ್ಲ. ಜಗತ್ತೆಲ್ಲವೂ
ದೇವರ ನ್ಯಾಯತೀರ್ಪಿಗೆ ಗುರಿಯಾಗಿದೆ. [20]ಏಕೆಂದರೆ, ಈ ನೇಮನಿಯಮಗಳನ್ನು ಅನುಸರಿಸಿದ ಮಾತ್ರಕ್ಕೇ
ಯಾರೂ ದೇವರೊಡನೆ ಸತ್ಸಂಬಂಧವನ್ನು ಪಡೆಯುವುದಿಲ್ಲ. ಧರ್ಮಶಾಸ್ತ್ರ ಮಾನವನಿಗೆ ಪಾಪ ಪ್ರಜ್ಞೆಯನ್ನು
ಉಂಟುಮಾಡುತ್ತದೆ, ಅಷ್ಟೆ.

## ವಿಶ್ವಾಸದ ಮೂಲಕ ಸತ್ಸಂಬಂಧ

21 ಈಗಲಾದರೋ ಧರ್ಮಶಾಸ್ತ್ರದ ನೆರವಿಲ್ಲದೆಯೇ ದೇವರಿಂದ ದೊರಕುವ ಸತ್ಸಂಬಂಧವು
ಪ್ರಕಟವಾಗಿದೆ. ಇದಕ್ಕೆ ಧರ್ಮಶಾಸ್ತ್ರವೂ ಪ್ರವಾದನಾಗ್ರಂಥವೂ ಸಾಕ್ಷಿಯಾಗಿವೆ. [22]ಯೇಸುಕ್ರಿಸ್ತರಲ್ಲಿ
ವಿಶ್ವಾಸವಿಡುವುದರ ಮೂಲಕವೇ ವಿಶ್ವಾಸಿಗಳೆಲ್ಲರನ್ನೂ ದೇವರು ತಮ್ಮೊಡನೆ ಸತ್ಸಂಬಂಧದಲ್ಲಿ

ಇರಿಸಿಕೊಳ್ಳುತ್ತಾರೆ. ಇದರಲ್ಲಿ ಯಾವ ತಾರತಮ್ಯವನ್ನು ಮಾಡುವುದಿಲ್ಲ. [23]ಮಾನವರೆಲ್ಲರೂ ಪಾಪಿಗಳೇ, ಎಲ್ಲರೂ ದೇವದತ್ತ ಮಹಿಮೆಯನ್ನು ಕಳೆದುಕೊಂಡವರೇ. [24]ಆದರೆ ದೇವರು ಯೇಸುಕ್ರಿಸ್ತರ ಮುಖಾಂತರ ಅವರಿಗೆ ಪಾಪವಿಮೋಚನೆಯನ್ನು ದಯಪಾಲಿಸಿ, ತಮ್ಮ ಉಚಿತಾರ್ಥ ಅನುಗ್ರಹದಿಂದ ಅವರನ್ನು ತಮ್ಮ ಸತ್ಸಂಬಂಧದಲ್ಲಿ ಇರಿಸಿಕೊಳ್ಳುತ್ತಾರೆ. [25]ಪೂರ್ವಕಾಲದಲ್ಲಿ ಮಾನವರ ಪಾಪವನ್ನು ದಂಡಿಸದೆ ತಾಳ್ಮೆಯಿಂದಿದ್ದ ದೇವರು, ವಿಸ್ವಾಸವುಳ್ಳವರಿಗೆ ಪಾಪಕ್ಷಮೆಯನ್ನು ತರುವ ಸಲುವಾಗಿ ಯೇಸುಕ್ರಿಸ್ತರು ರಕ್ತಧಾರೆ ಎರೆಯುವಂತೆ ಮಾಡಿದರು. ತಾವು ನೀತಿ ಸ್ವರೂಪರೆಂದು ತೋರಿಸುವುದಕ್ಕಾಗಿ ಹೀಗೆ ಮಾಡಿದರು. [26]ಯೇಸುಕ್ರಿಸ್ತರಲ್ಲಿ ವಿಶ್ವಾಸ ಇಡುವವರನ್ನು ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಳ್ಳುವುದಕ್ಕಾಗಿಯೂ ತಾವು ಸತ್ಯ ಸ್ವರೂಪರು ಮತ್ತು ನ್ಯಾಯವಂತರು ಎಂದು ವ್ಯಕ್ತಪಡಿಸುವ ಸಲುವಾಗಿಯೂ ಪ್ರಸ್ತುತ ಕಾಲದಲ್ಲಿ ದೇವರು ಈ ರೀತಿ ಮಾಡಿದರು.

27 ಹೀಗಿರುಲ್ಲಿ ಮಾನವನು ಕೊಚ್ಚಿಕೊಳ್ಳುವುದಕ್ಕೆ ಆಸ್ಪದವಿದೆಯೇ? ಇಲ್ಲವೇ ಇಲ್ಲ. ಹಾಗಾದರೆ ಸತ್ಸಂಬಂಧಕ್ಕೆ ಆಧಾರವೇನು? ಸತ್ಕಾರ್ಯಗಳ ಸಾಧನೆಯೇ? ಇಲ್ಲ. ವಿಶ್ವಾಸವೇ? ಹೌದು. [28]ಮಾನವನಿಗೆ ದೇವರೊಡನೆ ಸತ್ಸಂಬಂಧ ದೊರಕುವುದು ಧರ್ಮಶಾಸ್ತ್ರಗಳ ನೇಮನಿಯಮಗಳನ್ನು ಪಾಲಿಸುವುದರಿಂದ ಅಲ್ಲ, ವಿಶ್ವಾಸದಿಂದಲೇ ಎಂಬುದು ನಮ್ಮ ಸಿದ್ಧಾಂತ. [29]ದೇವರು ಕೇವಲ ಯೆಹೂದ್ಯರಿಗೆ ಮಾತ್ರ ದೇವರೋ ಅಥವಾ ಇತರರಿಗೂ ದೇವರೋ? ಹೌದು, ಇತರರಿಗೂ ದೇವರೇ. [30]ಯೆಹೂದ್ಯರನ್ನು ಅವರ ವಿಶ್ವಾಸದ ಆಧಾರದ ಮೇಲೂ ಇತರರನ್ನು ಅವರ ವಿಶ್ವಾಸದ ಮೂಲಕವೂ ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಳ್ಳುವ ದೇವರು ಒಬ್ಬರೇ. [31]'ವಿಶ್ವಾಸದ ಮೂಲಕ' ಎಂದು ಒತ್ತಿ ಹೇಳುವಾಗ ಧರ್ಮಶಾಸ್ತ್ರವನ್ನು ನಾವು ಅಲ್ಲಗಳೆಯುತ್ತೇವೆಂದು ಅರ್ಥವೆ? ಎಂದಿಗೂ ಇಲ್ಲ. ಬದಲಿಗೆ ಧರ್ಮಶಾಸ್ತ್ರದ ನಿಲುವನ್ನು ಸಮರ್ಥಿಸುತ್ತೇವೆ.

## ಅಬ್ರಹಾಮನ ವಿಶ್ವಾಸ

**4** ಹಾಗಾದರೆ, ವಂಶಾನುಕ್ರಮವಾಗಿ ನಮ್ಮ ಮೂಲಪಿತನಾದ ಅಬ್ರಹಾಮನ ಅನುಭವವನ್ನು ಕುರಿತು ಏನು ಹೇಳೋಣ? [2]ಆತನು ತನ್ನ ಸತ್ಕಾರ್ಯಗಳಿಂದ ದೇವರೊಡನೆ ಸತ್ಸಂಬಂಧವನ್ನು ಹೊಂದಿದ್ದರೆ ಆಗ ಹೊಗಳಿಕೊಳ್ಳುವುದಕ್ಕೆ ಆತನಿಗೆ ಆಸ್ಪದವಿರುತ್ತಿತ್ತು; ಆದರೆ ಅದು ದೇವರ ಸಾನ್ನಿಧ್ಯದಲ್ಲಿ ಅಲ್ಲ. [3]ಏಕೆಂದರೆ, ಪವಿತ್ರ ಗ್ರಂಥದಲ್ಲಿ ಹೀಗೆ ಹೇಳಿದೆ:

"ಅಬ್ರಹಾಮನು ದೇವರಲ್ಲಿ ವಿಶ್ವಾಸವಿಟ್ಟನು;
ಆತನು ತಮ್ಮ ಸತ್ಸಂಬಂಧದಲ್ಲಿ
ಇರುವುದಾಗಿ ದೇವರು ಪರಿಗಣಿಸಿದರು."

[4]ದುಡಿಯುವವನಿಗೆ ದೊರಕುವ ಕೂಲಿ ಉಚಿತ ದಾನವಲ್ಲ; ಅದು ಅವನ ಕಷ್ಟಾರ್ಜಿತ ಸಂಪಾದನೆ. [5]ಆದರೆ ಸತ್ಕಾರ್ಯಸಂಪಾದನೆ ಇಲ್ಲದಿದ್ದರೂ ಯಾರು, ಅಧರ್ಮಿಗಳನ್ನು ಸದ್ಧರ್ಮಿಗಳನ್ನಾಗಿಸುವ ದೇವರಲ್ಲಿ ವಿಸ್ವಾಸವಿಡುತ್ತಾರೋ, ಅಂಥವರ ವಿಶ್ವಾಸವನ್ನು ದೇವರು ಅಂಗೀಕರಿಸಿ ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಳ್ಳುತ್ತಾರೆ. [6]ಅಂತೆಯೇ ಸತ್ಕಾರ್ಯಸಂಪಾದನೆ ಇಲ್ಲದಿದ್ದರೂ ಯಾರು ದೇವರೊಡನೆ ಸತ್ಸಂಬಂಧದಲ್ಲಿ ಇರುತ್ತಾರೋ ಅಂಥವರು ಭಾಗ್ಯವಂತರು! ಇದನ್ನು ಕುರಿತು ದಾವೀದನು ಹೀಗೆನ್ನುತ್ತಾನೆ:

[7] "ಯಾರ ಅಪರಾಧಗಳು ಪರಿಹರಿಸ
ಲಾಗಿವೆಯೋ
ಯಾರ ಪಾಪಗಳು ಕ್ಷಮಿಸಲಾಗಿವೆಯೋ
ಅವರು ಭಾಗ್ಯವಂತರು!
[8] ಯಾರ ಪಾಪವನ್ನು ಸರ್ವೇಶ್ವರ
ಲೆಕ್ಕಿಸುವುದಿಲ್ಲವೋ
ಆತನು ಭಾಗ್ಯವಂತನು!"

9 ಈ ಆಶೀರ್ವಚನವು ಸುನ್ನತಿ ಮಾಡಿಸಿಕೊಂಡವರಿಗೆ ಮಾತ್ರ ಅನ್ವಯಿಸುತ್ತದೆಯೇ? ಇಲ್ಲ, ಸುನ್ನತಿ ಮಾಡಿಸಿಕೊಳ್ಳದವರಿಗೂ ಅನ್ವಯಿಸುತ್ತದೆ. ಪವಿತ್ರಗ್ರಂಥದಲ್ಲಿ ಹೇಳಿರುವಂತೆ: "ಅಬ್ರಹಾಮನು ದೇವರಲ್ಲಿ ವಿಶ್ವಾಸವಿಟ್ಟನು; ದೇವರು ಆತನನ್ನು ತಮ್ಮ ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿಸಿದರು." [10]ಹೀಗೆ ಪರಿಗಣಿಸಿದ್ದು ಯಾವಾಗ? ಅಬ್ರಹಾಮನಿಗೆ ಸುನ್ನತಿ ಆಗುವುದಕ್ಕೆ ಮೊದಲೋ ಅಥವಾ ಅನಂತರವೊ? ಆತನು ಸುನ್ನತಿ ಮಾಡಿಸಿಕೊಳ್ಳುವ ಮೊದಲೇ ಹೀಗೆ ಕರುಣಿಸಲಾಯಿತು; ಸುನ್ನತಿ ಮಾಡಿಸಿಕೊಂಡ ನಂತರವಲ್ಲ. [11]ತಾನು ಸುನ್ನತಿ ಮಾಡಿಸಿಕೊಳ್ಳುವ ಮೊದಲೇ ಅಬ್ರಹಾಮನು ಇಟ್ಟ ವಿಶ್ವಾಸದಿಂದಾಗಿ ದೇವರು ಆತನನ್ನು ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಂಡರು. ಅನಂತರವೇ ಆತನು ಸುನ್ನತಿಯನ್ನು ಗುರುತಾಗಿಯೂ ಮುದ್ರೆಯನ್ನಾಗಿಯೂ ಪಡೆದನು. ಹೀಗೆ, ಸುನ್ನತಿ ಮಾಡಿಸಿಕೊಳ್ಳದಿದ್ದರೂ ವಿಶ್ವಾಸಿಸುವ ಎಲ್ಲರಿಗೆ ದೇವರೊಡನೆ ಸತ್ಸಂಬಂಧ ದೊರಕುವಂತೆ ಅಬ್ರಹಾಮನು ಮೂಲಪಿತನಾದನು. [12]ಸುನ್ನತಿ ಮಾಡಿಸಿಕೊಂಡವರಿಗೆ ಅಬ್ರಹಾಮನು ಮೂಲಪಿತನಾಗಿರುವುದು ಕೇವಲ ಸುನ್ನತಿ ಪಡೆದುದರ ಕಾರಣದಿಂದಲ್ಲ. ಆದರೆ ಅವರು ಸುನ್ನತಿ ಮಾಡಿಸಿಕೊಳ್ಳುವ ಮೊದಲೇ ಆತನು ಕೈಗೊಂಡ ವಿಶ್ವಾಸಮಾರ್ಗವನ್ನು ಅನುಸರಿಸಿದ್ದರಿಂದ.

## ದೈವವಾಗ್ದಾನಕ್ಕೆ ವಿಶ್ವಾಸವೇ ಆಧಾರ

13 ಅಬ್ರಹಾಮನಿಗೂ ಆತನ ಸಂತತಿಗೂ ಜಗತ್ತನ್ನೇ ಕೊಡುವುದಾಗಿ ದೇವರು ವಾಗ್ದಾನ ಮಾಡಿದರು. ಈ ವಾಗ್ದಾನವನ್ನು ಅಬ್ರಹಾಮನು ಪಡೆದದ್ದು ಧರ್ಮಶಾಸ್ತ್ರದ ಪಾಲನೆಯಿಂದ ಅಲ್ಲ, ಆದರೆ ವಿಶ್ವಾಸದ ಮೂಲಕ ದೇವರೊಡನೆ ಸತ್ಸಂಬಂಧವನ್ನು ಹೊಂದಿದ್ದರಿಂದ. [14]ಧರ್ಮಶಾಸ್ತ್ರವನ್ನು ಪಾಲಿಸುವುದರಿಂದ ಮಾತ್ರ ದೇವರ ವಾಗ್ದಾನಕ್ಕೆ ಬಾಧ್ಯತೆ ದೊರಕುವುದಾದರೆ, ಮಾನವನ ವಿಶ್ವಾಸವೂ ವ್ಯರ್ಥ; ದೇವರ ವಾಗ್ದಾನವೂ ನಿರರ್ಥಕ. [15]ಧರ್ಮಶಾಸ್ತ್ರವು ದೇವರ ಕೋಪವನ್ನು ಬರಮಾಡುತ್ತದೆ. ಧರ್ಮಶಾಸ್ತ್ರವೇ ಇಲ್ಲದೆ ಹೋಗಿದ್ದರೆ ಅದರ ಉಲ್ಲಂಘನೆಯೂ ಇರುತ್ತಿರಲಿಲ್ಲ.

16 ದೈವವಾಗ್ದಾನಕ್ಕೆ ವಿಶ್ವಾಸವೇ ಆಧಾರ. ಇವೆಲ್ಲಕ್ಕೂ ದೈವಾನುಗ್ರಹವೇ ಮೂಲ. ಇವು ಅಬ್ರಹಾಮನ ಸಂತತಿಯವರಿಗೆ, ಅಂದರೆ ಧರ್ಮಶಾಸ್ತ್ರವನ್ನು ಅನುಸರಿಸಿ ನಡೆಯುವವರಿಗೆ ಮಾತ್ರವಲ್ಲ, ಅಬ್ರಹಾಮನಂತೆ ದೇವರಲ್ಲಿ ವಿಶ್ವಾಸ ಇಟ್ಟವರೆಲ್ಲರಿಗೂ ಖಚಿತವಾಗಿ ದೊರೆಯುತ್ತದೆ. ಏಕೆಂದರೆ, ಅಬ್ರಹಾಮನೇ ನಮ್ಮೆಲ್ಲರಿಗೂ ಮೂಲಪಿತ. [17]"ನಾನು ನಿನ್ನನ್ನು ಅನೇಕ ಜನಾಂಗಗಳಿಗೆ ಮೂಲಪಿತನನ್ನಾಗಿ ನೇಮಿಸಿದ್ದೇನೆ," ಎಂದು ಪವಿತ್ರಗ್ರಂಥದಲ್ಲೇ ಬರೆದಿದೆ. ಹೌದು, ಮೃತರನ್ನು ಜೀವಂತಗೊಳಿಸುವವರೂ ಅಸ್ತಿತ್ವದಲ್ಲಿ ಇಲ್ಲದ್ದನ್ನು ಅಸ್ತಿತ್ವಕ್ಕೆ ತರುವಂಥವರೂ ಆದ ದೇವರಲ್ಲಿ ಆತನು ವಿಸ್ವಾಸವಿಟ್ಟನು. ಆದ್ದರಿಂದ ಈ ವಾಗ್ದಾನವನ್ನು ಸಾಕ್ಷಾತ್ ದೇವರಿಂದಲೇ ಪಡೆದನು. [18]ಆತನ ವಿಶ್ವಾಸ ಮತ್ತು ಭರವಸೆ ಎಷ್ಟರಮಟ್ಟಿಗೆ ಇತ್ತೆಂದರೆ, ಈ ದೈವವಾಗ್ದಾನವು ನೆರವೇರುವ ನಿರೀಕ್ಷೆ ಇಲ್ಲದಿದ್ದರೂ ಆತನು ದೇವರನ್ನು ನಂಬಿದನು. ಆದುದರಿಂದಲೇ "ನಿನ್ನ ಸಂತಾನವು ನಕ್ಷತ್ರಗಳಷ್ಟು ಅಸಂಖ್ಯಾತ ಆಗುವುದು," ಎಂಬ ಹೇಳಿಕೆಯಂತೆ ಆತನು ಅನೇಕ ಜನಾಂಗಗಳಿಗೆ ಮೂಲಪಿತನಾದನು. [19]ಆಗ ಆತನಿಗೆ ಹೆಚ್ಚುಕಡಿಮೆ ನೂರು ವರ್ಷ ಪ್ರಾಯವಾಗಿತ್ತು. ಆತನ ದೇಹವು ದುರ್ಬಲವಾಗಿತ್ತು. ಸಾರಳಿಗೆ ಗರ್ಭಕಾಲವು ಕಳೆದುಹೋಗಿತ್ತು. ಆದರೂ ಆತನ ವಿಶ್ವಾಸ ಕುಂದಲೇ ಇಲ್ಲ. [20]ದೇವರ ವಾಗ್ದಾನದಲ್ಲಿ ಆತನು ಸಂಶಯಪಡಲಿಲ್ಲ. ಅಪನಂಬಿಕೆಯಿಂದ ಚಂಚಲಚಿತ್ತನಾಗಲೂ ಇಲ್ಲ. ಬದಲಾಗಿ ಆತನ ವಿಶ್ವಾಸ ವೃದ್ಧಿಯಾಯಿತು. ಆತನು ದೇವರನ್ನು ಹೊಗಳಿ ಕೊಂಡಾಡಿದನು. [21]ದೇವರು ತಾವು ವಾಗ್ದಾನ ಮಾಡಿದ್ದನ್ನು ಖಂಡಿತವಾಗಿಯೂ ನೆರವೇರಿಸಬಲ್ಲರೆಂದು ದೃಢವಾಗಿ ನಂಬಿದನು. [22]ಆದ್ದರಿಂದಲೇ, "ದೇವರು ಆತನನ್ನು ತಮ್ಮೊಂದಿಗೆ ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿಸಿದರು," ಎಂದು ಲಿಖಿತವಾಗಿದೆ. [23]'ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿಸಿದರು' ಎಂಬ ಮಾತು ಆತನಿಗೆ ಮಾತ್ರವಲ್ಲ, ನಮಗೂ ಅನ್ವಯಿಸುತ್ತದೆ. [24]ನಮ್ಮ ಪ್ರಭುವಾದ ಯೇಸುವನ್ನು ಮರಣದಿಂದ ಎಬ್ಬಿಸಿದ ದೇವರನ್ನು ವಿಶ್ವಾಸಿಸುವ ನಾವು ಸಹ ಅವರೊಂದಿಗೆ ಸತ್ಸಂಬಂಧದಲ್ಲಿ ಇರುವುದಾಗಿ ಪರಿಗಣಿತರಾಗುತ್ತೇವೆ. [25]ನಮ್ಮ ಪಾಪಗಳ ನಿಮಿತ್ತ ಯೇಸುವನ್ನು ಮರಣಕ್ಕೆ ಗುರಿಪಡಿಸಲಾಯಿತು. ನಮ್ಮನ್ನು ದೇವರೊಡನೆ ಸತ್ಸಂಬಂಧದಲ್ಲಿ ಇರಿಸುವುದಕ್ಕಾಗಿ ಅವರು ಪುನರುತ್ಥಾನ ಹೊಂದಿದರು.

## ದೇವರೊಡನೆ ಸಂಧಾನ

**5** ಹೀಗಿರಲಾಗಿ, ವಿಶ್ವಾಸದ ಮೂಲಕ ದೇವರೊಡನೆ ಸತ್ಸಂಬಂಧದಲ್ಲಿರುವ ನಾವು ನಮ್ಮ ಪ್ರಭು
ಯೇಸುಕ್ರಿಸ್ತರ ಮುಖಾಂತರ ದೇವರೊಡನೆ ಶಾಂತಿಸಮಾಧಾನದಿಂದಿರುತ್ತೇವೆ. 2ವಿಶ್ವಾಸದ ಮೂಲಕ ನಾವು
ದೈವಾನುಗ್ರಹವನ್ನು ಸವಿಯುವಂತೆ ಯೇಸುಕ್ರಿಸ್ತರು ದಾರಿ ತೋರಿಸಿದರು. ನಾವೀಗ ನೆಲೆಗೊಂಡಿರುವುದು ಆ
ಅನುಗ್ರಹದಲ್ಲಿಯೇ. ಆದ್ದರಿಂದಲೇ, ದೇವರ ಮಹಿಮೆಯಲ್ಲಿ ನಾವೂ ಪಾಳುಗೊಳ್ಳುತ್ತೇವೆಂಬ ಭರವಸೆಯಿಂದ
ಹೆಮ್ಮೆಪಡುತ್ತೇವೆ. 3ಅಷ್ಟೇ ಅಲ್ಲ, ನಮಗೆ ಬಂದೊದಗುವ ಕಷ್ಟಸಂಕಟಗಳಲ್ಲೂ ಹೆಮ್ಮೆಪಡುತ್ತೇವೆ. ಏಕೆಂದರೆ,
ಕಷ್ಟಸಂಕಟಗಳು ಸಹನೆಯನ್ನು, 4ಸಹನೆಯು ಸದ್ಗುಣವನ್ನು, ಸದ್ಗುಣವು ನಂಬಿಕೆನಿರೀಕ್ಷೆಯನ್ನು
ಬೆಳೆಸುತ್ತವೆಂದು ನಾವು ಬಲ್ಲೆವು. 5ಈ ನಂಬಿಕೆ ನಿರೀಕ್ಷೆಯು ನಮಗಿರುವುದರಿಂದ ನಮಗೆ
ಆಶಾಭಂಗವಾಗುವುದಿಲ್ಲ. ಏಕೆಂದರೆ, ನಮಗೆ ದಾನವಾಗಿ ದಯಪಾಲಿಸಿರುವ ಪವಿತ್ರಾತ್ಮ ಅವರ
ಮುಖಾಂತರ ದೇವರು ತಮ್ಮ ಪ್ರೀತಿಯನ್ನು ನಮ್ಮ ಹೃದಯಗಳಲ್ಲಿ ಧಾರಾಳವಾಗಿ ಸುರಿಸಿದ್ದಾರೆ.
6 ನಾವು ಪಾಪದಿಂದ ದುರ್ಬಲರಾಗಿದ್ದಾಗಲೇ ನಿಯಮಿತ ಕಾಲದಲ್ಲಿ ಕ್ರಿಸ್ತಯೇಸು
ಪಾಪಿಗಳಿಗೋಸ್ಕರ ಪ್ರಾಣತ್ಯಾಗಮಾಡಿದರು. 7ನೀತಿವಂತನಿಗಾಗಿ ಒಬ್ಬನು ತನ್ನ ಪ್ರಾಣಕೊಡುವುದು ವಿರಳ.
ಸತ್ಪುರುಷನಿಗಾಗಿ ಒಬ್ಬನು ತನ್ನ ಪ್ರಾಣವನ್ನು ಕೊಟ್ಟರೂ ಕೊಟ್ಟಾನು. 8ಆದರೆ ನಾವಿನ್ನೂ
ಪಾಪಿಗಳಾಗಿರುವಾಗಲೇ ಕ್ರಿಸ್ತಯೇಸು ನಮಗೋಸ್ಕರ ಪ್ರಾಣತ್ಯಾಗ ಮಾಡಿದರು. ಇದರಿಂದ ನಮ್ಮ ಮೇಲೆ
ದೇವರಿಗಿರುವ ಪ್ರೀತಿ ಎಷ್ಟೆಂದು ವ್ಯಕ್ತವಾಗುತ್ತದೆ. 9ಕ್ರಿಸ್ತಯೇಸುವಿನ ರಕ್ತಧಾರೆಯಿಂದ ನಾವೀಗ ದೇವರೊಡನೆ
ಸತ್ಸಂಬಂಧದಲ್ಲಿದ್ದೇವೆ. ಹೀಗಿರಲಾಗಿ, ಬರಲಿರುವ ದೈವಕೋಪಾಗ್ನಿಯಿಂದ ಯೇಸುಕ್ರಿಸ್ತರ ಮುಖಾಂತರವೇ
ಪಾರಾಗುತ್ತೇವೆ ಎಂಬುದು ಮತ್ತಷ್ಟು ನಿಶ್ಚಯವಲ್ಲವೆ? 10ನಾವು ದೇವರಿಗೆ ಶತ್ರುಗಳಾಗಿದ್ದರೂ ಅವರು ತಮ್ಮ
ಮಗನ ಮರಣದ ಮೂಲಕ ನಮ್ಮನ್ನು ತಮ್ಮೊಡನೆ ಸಂಧಾನಗೊಳಿಸಿ ಮಿತ್ರರನ್ನಾಗಿ ಮಾಡಿಕೊಂಡರು.
ನಾವೀಗ ದೇವರ ಮಿತ್ರರಾಗಿರುವುದರಿಂದ, ಕ್ರಿಸ್ತಯೇಸುವಿನ ಜೀವದ ಮೂಲಕ ಉದ್ಧಾರ ಹೊಂದುತ್ತೇವೆ
ಎಂಬುದು ಮತ್ತಷ್ಟು ಖಚಿತವಲ್ಲವೆ? 11ಅಷ್ಟೇ ಅಲ್ಲದೆ, ನಮ್ಮ ಪ್ರಭು ಯೇಸುಕ್ರಿಸ್ತರ ಮುಖಾಂತರ ದೇವರು
ನಮ್ಮನ್ನು ಮಿತ್ರರನ್ನಾಗಿಸಿರುವುದರಿಂದ ಅವರ ಮೂಲಕವೇ ನಾವು ದೇವರಲ್ಲಿ ಹೆಮ್ಮೆ ಪಡುತ್ತೇವೆ.

## ಆದಾಮನ ಅವಿಧೇಯತೆ; ಕ್ರಿಸ್ತೇಸುವಿನ ವಿಧೇಯತೆ

12 ಒಬ್ಬ ಮನುಷ್ಯನಿಂದಲೇ ಪಾಪ, ಪಾಪದಿಂದ ಮರಣ, ಈ ಲೋಕವನ್ನು ಪ್ರವೇಶಿಸಿದವು.
ಎಲ್ಲರೂ ಪಾಪ ಮಾಡಿದ್ದರಿಂದ ಮರಣವು ಎಲ್ಲರಿಗೂ ಪ್ರಾಪ್ತಿಯಾಯಿತು. 13ಧರ್ಮಶಾಸ್ತ್ರವನ್ನು
ಕೊಡುವುದಕ್ಕೆ ಮೊದಲೇ ಪಾಪವು ಲೋಕದಲ್ಲಿತ್ತು. ಆದರೆ ಧರ್ಮಶಾಸ್ತ್ರ ಇಲ್ಲದೆ ಇದ್ದುದರಿಂದ ಪಾಪವನ್ನು
ಗಣನೆಗೆ ತಂದುಕೊಳ್ಳಲಾಗಲಿಲ್ಲ. 14ಆದರೂ, ಆದಾಮನ ಕಾಲದಿಂದ ಮೋಶೆಯ ಕಾಲದವರೆಗೂ ಮರಣವು
ದಬ್ಬಾಳಿಕೆ ನಡೆಸುತ್ತಿತ್ತು. ದೇವರ ಆಜ್ಞಾವಿಧಿಗಳನ್ನು ಮೀರಿ ಆದಾಮನು ಮಾಡಿದ ಪಾಪಕ್ಕೆ ಸಮನಾದ
ಪಾಪವನ್ನು ಮಾಡದೆ ಇದ್ದವರ ಮೇಲೆಯೂ, ಮರಣದ ಆಳ್ವಿಕೆ ನಡೆಯುತ್ತಿತ್ತು.
ಆದಾಮನು ಮುಂಬರಲಿದ್ದ ಮಹಾತ್ಮನ ಮುನ್ಸೂಚನೆಯಾಗಿದ್ದಾನೆ. 15ಆದರೆ ಆದಾಮನ ಪಾಪಕ್ಕೂ
ದೇವರ ಅನುಗ್ರಹಕ್ಕೂ ವ್ಯತ್ಯಾಸವಿದೆ. ಒಬ್ಬ ಮನುಷ್ಯನ ಅಪರಾಧದಿಂದ ಎಲ್ಲರೂ ಮರಣಕ್ಕೊಳಗಾದರು
ಎಂಬುದೇನೋ ನಿಜ. ಆದರೆ ದೇವರ ಅನುಗ್ರಹವು ಅದಕ್ಕಿಂತಲೂ ಅತ್ಯಧಿಕವಾದುದು. ಅಂತೆಯೇ,
ಯೇಸುಕ್ರಿಸ್ತ ಎಂಬ ಒಬ್ಬ ಮಹಾತ್ಮನ ಅನುಗ್ರಹದಿಂದ ಲಭಿಸುವ ಉಚಿತಾರ್ಥ ವರಗಳು ಇನ್ನೂ
ಅಧಿಕಾಧಿಕವಾದುವು ಎಂಬುದೂ ನಿಜ. 16ದೇವರ ಉಚಿತಾರ್ಥ ವರಕ್ಕೂ ಒಬ್ಬ ಮನುಷ್ಯನ ಪಾಪದ
ಪರಿಣಾಮಕ್ಕೂ ಎಷ್ಟೋ ವ್ಯತ್ಯಾಸವಿದೆ. ಆ ಒಂದು ಪಾಪದ ಪರಿಣಾಮವಾಗಿ ಮನುಷ್ಯನು ಅಪರಾಧಿಯೆಂದು
ನಿರ್ಣಯಿಸಲ್ಪಟ್ಟನು. ಆದರೆ ಅನೇಕರು ಅಪರಾಧಿಗಳಾದ ಮೇಲೂ ಕೊಡಲಾಗುವ ಉಚಿತಾರ್ಥ ವರವು
ದೇವರೊಡನೆ ಸತ್ಸಂಬಂಧವನ್ನು ಉಂಟುಮಾಡುತ್ತದೆ. 17ಒಬ್ಬ ಮನುಷ್ಯನ ಅಪರಾಧದ ಕಾರಣ, ಒಬ್ಬ
ವ್ಯಕ್ತಿಯ ಮುಖಾಂತರ ಮರಣವು ಎಲ್ಲಾ ಮಾನವರ ಮೇಲೆ ದಬ್ಬಾಳಿಕೆ ನಡೆಸಿತು. ಆದರೆ, ಹೇರಳವಾದ

ದೈವಾನುಗ್ರಹವನ್ನೂ ದೇವರೊಡನೆ ಸತ್ಸಂಬಂಧವೆಂಬ ಉಚಿತಾರ್ಥ ವರವನ್ನೂ ಪಡೆದವರಾದರೋ
ಯೇಸುಕ್ರಿಸ್ತ ಎಂಬ ಮಹಾತ್ಮನ ಮುಖಾಂತರ ಮತ್ತಷ್ಟು ವಿಪುಲವಾಗಿ ಸಜ್ಜೀವವನ್ನು ಪಡೆದು
ರಾಜ್ಯವಾಳುತ್ತಾರೆ.

18 ಒಬ್ಬನ ಅಪರಾಧದಿಂದ ಎಲ್ಲಾ ಮಾನವರು ದಂಡನೆಯ ತೀರ್ಪಿಗೆ ಗುರಿಯಾಗುತ್ತಾರೆ.
ಹಾಗೆಯೇ ಒಬ್ಬನ ಸತ್ಕಾರ್ಯದಿಂದ ಎಲ್ಲಾ ಮಾನವರು ವಿಮೋಚನೆಯನ್ನೂ ಸಜ್ಜೀವವನ್ನೂ
ಪಡೆಯುತ್ತಾರೆ. [19]ಹೇಗೆ ಒಬ್ಬ ಮನುಷ್ಯನ ಅವಿಧೇಯತೆಯಿಂದ ಎಲ್ಲರೂ ಪಾಪಿಗಳಾದರೋ, ಹಾಗೆಯೇ
ಒಬ್ಬ ಮನುಷ್ಯನ ವಿಧೇಯತೆಯಿಂದ ಎಲ್ಲರೂ ದೇವರೊಡನೆ ಸತ್ಸಂಬಂಧವನ್ನು ಹೊಂದುತ್ತಾರೆ.

20 ಧರ್ಮಶಾಸ್ತ್ರದ ಪ್ರವೇಶ ಆದಂತೆ, ಅಪರಾಧಗಳು ಹೆಚ್ಚಿದವು. ಅಪರಾಧಗಳು ಹೆಚ್ಚಿದಂತೆ ದೇವರ
ಅನುಗ್ರಹವು ಹೆಚ್ಚುಹೆಚ್ಚು ಆಯಿತು. [21]ಹೀಗೆ ಪಾಪವು ಮರಣದ ಮೂಲಕ ಆಳ್ವಿಕೆ ನಡೆಸಿದಂತೆ,
ದೈವಾನುಗ್ರಹವು ನಮ್ಮ ಪ್ರಭು ಯೇಸುಕ್ರಿಸ್ತರ ಮುಖಾಂತರ ನಮ್ಮನ್ನು ದೇವರೊಡನೆ ಸತ್ಸಂಬಂಧದಲ್ಲಿರಿಸಿ,
ಅಮರಜೀವದತ್ತ ಒಯ್ದು, ಆಳ್ವಿಕೆ ನಡೆಸುತ್ತದೆ.

### ಪಾಪದ ಪಾಲಿಗೆ ಮರಣ–ಯೇಸುಕ್ರಿಸ್ತರಿಗೆ ಶರಣ

**6** ಹಾಗಾದರೆ ನಾವು ಏನು ಹೇಳೋಣ? ದೈವಾನುಗ್ರಹವು ಹೆಚ್ಚುವಂತೆ ನಾವು ಪಾಪದಲ್ಲೇ ನೆಲೆಗೊಂಡು
ಇರೋಣವೇ? [2]ಖಂಡಿತವಾಗಿಯೂ ಕೂಡದು. ಪಾಪದ ಪಾಲಿಗೆ ಸತ್ತಿರುವ ನಾವು ಅದರಲ್ಲೇ ಜೀವಿಸುವುದು
ಹೇಗೆ ತಾನೆ ಸಾಧ್ಯ? [3]ಕ್ರಿಸ್ತಯೇಸುವಿನವರಾಗಲು ದೀಕ್ಷಾಸ್ನಾನ ಹೊಂದಿರುವ ನಾವು, ಅವರ ಮರಣದಲ್ಲಿ
ಪಾಲುಗಾರರಾಗಲು ದೀಕ್ಷಾಸ್ನಾನ ಪಡೆದೆವು ಎಂಬುದು ನಿಮಗೆ ತಿಳಿಯದೆ? [4]ಹೀಗಿರಲಾಗಿ, ದೀಕ್ಷಾಸ್ನಾನ
ಮಾಡಿಸಿಕೊಂಡಾಗ ಅವರ ಮರಣದಲ್ಲಿ ಪಾಲುಗಾರರಾದ ನಮಗೆ ಅವರೊಡನೆ ಸಮಾಧಿಯೂ ಆಯಿತು.
ಆದುದರಿಂದ ತಂದೆಯ ಮಹಿಮಾಶಕ್ತಿಯಿಂದ ಕ್ರಿಸ್ತಯೇಸು ಮರಣದಿಂದ ಪುನರುತ್ಥಾನ ಹೊಂದಿದಂತೆಯೇ
ನಾವು ಸಹ ಹೊಸ ಜೀವವನ್ನು ಹೊಂದಿ ಬಾಳುತ್ತೇವೆ.

5 ಅವರು ಮರಣ ಹೊಂದಿದಂತೆ ನಾವೂ ಅವರೊಂದಿಗೆ ಐಕ್ಯವಾಗಿ ಮರಣವನ್ನು ಹೊಂದುತ್ತೇವೆ.
ಅಂತೆಯೇ, ಅವರು ಪುನರುತ್ಥಾನ ಆದಂತೆ ನಾವೂ ಅವರೊಡನೆ ಐಕ್ಯವಾಗಿ ಪುನರುತ್ಥಾನ ಹೊಂದುತ್ತೇವೆ.
[6]ನಮಗೆ ತಿಳಿದಿರುವಂತೆ ಪಾಪಾಧೀನವಾದ ನಮ್ಮ ಸ್ವಭಾವವು ನಾಶವಾಗುವಂತೆಯೂ ಇನ್ನು ಮುಂದೆ ನಾವು
ಪಾಪಕ್ಕೆ ದಾಸರಾಗಿರದಂತೆಯೂ ಯೇಸುಕ್ರಿಸ್ತರೊಡನೆ ನಮ್ಮ ಹಳೆಯ ಸ್ವಭಾವವನ್ನು ಶಿಲುಬೆಗೆ
ಜಡಿಯಲಾಗಿದೆ. [7]ಹೀಗೆ ಸತ್ತವನು ಪಾಪಬಂಧದಿಂದ ಬಿಡುಗಡೆ ಹೊಂದಿದವನು. [8]ಕ್ರಿಸ್ತ ಯೇಸುವಿನೊಂದಿಗೆ
ನಾವು ಮರಣ ಹೊಂದಿದ್ದರೆ ಅವರೊಡನೆ ನಾವೂ ಜೀವಿಸುತ್ತೇವೆ; ಇದೇ ನಮ್ಮ ವಿಶ್ವಾಸ. [9]ಯೇಸುಕ್ರಿಸ್ತರನ್ನು
ಮರಣದಿಂದ ಎಬ್ಬಿಸಲಾಯಿತು ಎಂಬುದನ್ನು ನಾವು ಬಲ್ಲೆವು. ಆದ್ದರಿಂದ ಅವರು ಇನ್ನು ಎಂದಿಗೂ
ಸಾಯುವುದಿಲ್ಲ; ಸಾವಿಗೆ ಅವರ ಮೇಲೆ ಯಾವ ಅಧಿಕಾರವೂ ಇಲ್ಲ. [10]ಏಕೆಂದರೆ, ಅವರು ಪಾಪದ ಪಾಲಿಗೆ
ಒಂದೇ ಸಾರಿಗೆ ಮಾತ್ರವಲ್ಲ, ಎಂದೆಂದಿಗೂ ಸತ್ತವರು. ಅವರು ಈಗ ಜೀವಿಸುವುದು ದೇವರಿಗಾಗಿಯೇ.
[11]ಅಂತೆಯೇ ನೀವೂ ಸಹ ಪಾಪದ ಪಾಲಿಗೆ ಸತ್ತವರೆಂದೂ ದೇವರಿಗಾಗಿ ಮಾತ್ರ ಯೇಸುಕ್ರಿಸ್ತರಲ್ಲಿ
ಜೀವಿಸುವವರೆಂದೂ ಪರಿಗಣಿಸಿರಿ.

12 ಆದ್ದರಿಂದ ದೈಹಿಕ ದುರಿಚ್ಛೆಗಳಿಗೆ ದಾಸರಾಗಿ ನೀವು ನಡೆಯದಂತೆ, ನಿಮ್ಮ ನಶ್ವರ ಶರೀರಗಳ
ಮೇಲೆ ಪಾಪವು ತನ್ನ ದಬ್ಬಾಳಿಕೆಯನ್ನು ಇನ್ನೆಂದಿಗೂ ನಡೆಸದಿರಲಿ. [13]ನಿಮ್ಮ ದೇಹದ ಯಾವುದೇ ಅಂಗವು
ದುಷ್ಕೃತ್ಯವನ್ನೆಸಗುವ ಸಾಧನವಾಗುವಂತೆ ಪಾಪದ ಕಾರ್ಯಕ್ಕೆ ಅದನ್ನು ಒಪ್ಪಿಸದಿರಿ. ಬದಲಾಗಿ ಸತ್ತು ಜೀವಕ್ಕೆ
ಬಂದವರಂತೆ ದೇವರಿಗೆ ನಿಮ್ಮನ್ನೇ ಸಮರ್ಪಿಸಿಕೊಳ್ಳಿರಿ; ನಿಮ್ಮ ಅಂಗಗಳನ್ನು ಸತ್ಕಾರ್ಯ ಸಾಧನೆಗಳನ್ನಾಗಿ
ದೇವರಿಗೆ ಒಪ್ಪಿಸಿಕೊಡಿರಿ. [14]ಏಕೆಂದರೆ ಪಾಪವು ಇನ್ನೆಂದಿಗೂ ನಿಮ್ಮ ಮೇಲೆ ದಬ್ಬಾಳಿಕೆ ನಡೆಸಲಾಗದು;
ನೀವಿನ್ನು ಧರ್ಮಶಾಸ್ತ್ರಕ್ಕೆ ಅಧೀನರಲ್ಲ. ದೈವಾನುಗ್ರಹಕ್ಕೆ ಮಾತ್ರ ಅಧೀನರು.

## ಸತ್ಸಂಬಂಧಕ್ಕೆ ಶರಣರು

15 ಹಾಗಾದರೆ ಏನು ಹೇಳೋಣ? ಧರ್ಮಶಾಸ್ತ್ರಕ್ಕೆ ಅಧೀನರಾಗಿರದೆ ದೈವಾನುಗ್ರಹಕ್ಕೆ
ಅಧೀನರಾಗಿರುವ ನಾವು ಪಾಪಮಾಡುತ್ತಲೇ ಜೀವಿಸೋಣವೆ? ಸರ್ವಥಾ ಇಲ್ಲ. 16ಯಾರ ಕೈ ಕೆಳಗೆ
ಗುಲಾಮರಾಗಿರಲು ನಿಮ್ಮನ್ನೇ ಒಪ್ಪಿಸಿಕೊಳ್ಳುತ್ತೀರೋ ಅವರಿಗೆ ನೀವು ಶರಣಾಗುತ್ತೀರಿ. ನೀವು ಪಾಪಕ್ಕೆ
ಗುಲಾಮರಾದರೆ ಮರಣವೇ ನಿಮಗೆ ಗತಿ; ದೇವರಿಗೆ ಶರಣಾದರೆ ಸತ್ಸಂಬಂಧವೇ ಅದರ ಸತ್ಪರಿಣಾಮ.
17ದೇವರಿಗೆ ಸ್ತುತಿಸ್ತೋತ್ರ ಸಲ್ಲಲಿ. ಏಕೆಂದರೆ, ಹಿಂದೊಮ್ಮೆ ನೀವು ಪಾಪಕ್ಕೆ ಗುಲಾಮರಾಗಿದ್ದರೂ ನಿಮಗೆ
ಕಲಿಸಿದ ಬೋಧನೆಯನ್ನು ನೀವು ಮನಃಪೂರ್ವಕವಾಗಿ ಅಂಗೀಕರಿಸಿ ವಿಧೇಯರಾದಿರಿ;
18ಪಾಪಬಂಧನದಿಂದ ಬಿಡುಗಡೆ ಹೊಂದಿ ದೇವ ಸಂಬಂಧಕ್ಕೆ ಒಳಗಾದಿರಿ. 19ಇದನ್ನು ಅರ್ಥಮಾಡಿಕೊಳ್ಳಲು
ನೀವು ಅಶಕ್ತರಾಗಿರುವುದರಿಂದ ನಾನು ಹೀಗೆ ಸಾಮಾನ್ಯ ರೀತಿಯಲ್ಲಿ ಮಾತನಾಡುತ್ತಿದ್ದೇನೆ. ಹಿಂದೊಮ್ಮೆ
ನೀವು ನಿಮ್ಮ ಇಂದ್ರಿಯಗಳನ್ನು ಹೆಚ್ಚುಹೆಚ್ಚಾಗಿ ಅಶ್ಲೀಲತೆಗೂ ಅಕ್ರಮಕ್ಕೂ ಗುಲಾಮರನ್ನಾಗಿಸಿದಿರಿ;
ಈಗಲಾದರೋ ಪರಿಶುದ್ಧತೆಗೂ ಸತ್ಸಂಬಂಧಕ್ಕೂ ನಿಮ್ಮ ಇಂದ್ರಿಯಗಳನ್ನು ಅಧೀನರಾಗಿಸಿರಿ. 20ನೀವು
ಪಾಪಕ್ಕೆ ಗುಲಾಮರಾಗಿದ್ದಾಗ ದೇವಸಂಬಂಧಕ್ಕೆ ಒಳಗಾಗಿರಲಿಲ್ಲ. 21ಯಾವ ಕೃತ್ಯಗಳ ವಿಷಯದಲ್ಲಿ ಈಗ
ನೀವು ನಾಚಿಕೆಪಡುತ್ತೀರೋ ಅವುಗಳನ್ನು ನೀವು ಹಿಂದೆ ಮಾಡುತ್ತಾ ಬಂದಿರಿ. ಅವುಗಳಿಂದ ನಿಮಗೆ ದೊರೆತ
ಪ್ರತಿಫಲವಾದರೂ ಏನು? ಮೃತ್ಯುವೇ ಅವುಗಳ ಅಂತ್ಯ ಫಲ. 22ಆದರೆ ನೀವು ಪಾಪದಿಂದ ಬಿಡುಗಡೆ
ಹೊಂದಿರುವಿರಿ. ದೇವರಿಗೆ ದಾಸರಾಗಿರುವಿರಿ. ಇದರಿಂದ ನಿಮಗೆ ಸಿಕ್ಕಿರುವ ಪ್ರತಿಫಲ ಪರಿಶುದ್ಧ ಜೀವನ;
ಅಂತಿಮವಾಗಿ ಅಮರ ಜೀವನ. 23ಮರಣವೇ ಪಾಪದ ವೇತನ; ನಮ್ಮ ಪ್ರಭು ಯೇಸುಕ್ರಿಸ್ತರಲ್ಲಿ ಇರುವ
ನಿತ್ಯಜೀವವೇ ದೇವರ ಉಚಿತ ವರದಾನ.

## ವಿವಾಹ ಬಂಧನದಂಥ ಕ್ರಿಸ್ತ ಬಂಧನ

**7** ಸಹೋದರರೇ, ಒಬ್ಬ ಮನುಷ್ಯನು ಜೀವದಿಂದಿರುವವರೆಗೆ ಮಾತ್ರ ಧರ್ಮಶಾಸ್ತ್ರದ ನೇಮನಿಯಮಗಳಿಗೆ
ಒಳಪಟ್ಟಿರುತ್ತಾನೆ. ಧರ್ಮಶಾಸ್ತ್ರವನ್ನು ಅರಿತಿರುವ ನೀವು ಇದನ್ನು ಗ್ರಹಿಸಿಕೊಳ್ಳಬಲ್ಲಿರಿ. 2ಉದಾಹರಣೆಗೆ,
ಪತಿಯು ಬದುಕಿರುವವರೆಗೆ ಸತಿ ಅವನಿಗೆ ಶಾಸನಾನುಸಾರವಾಗಿ ಬದ್ಧಳು. ಒಂದು ವೇಳೆ, ಆಕೆಯ ಪತಿ
ಸತ್ತು ಹೋದರೆ, ಆಕೆ ವಿವಾಹಬಂಧನದಿಂದ ಬಿಡುಗಡೆ ಹೊಂದುತ್ತಾಳೆ. 3ಪತಿ ಬದುಕಿರುವಾಗಲೇ ಸತಿಯು
ಇನ್ನೊಬ್ಬನೊಡನೆ ಸಂಬಂಧ ಬೆಳೆಸಿದರೆ ಆಕೆ ವ್ಯಭಿಚಾರಿಣಿ ಎನಿಸಿಕೊಳ್ಳುತ್ತಾಳೆ. ಪತಿಯು ಸತ್ತು ಹೋದರೆ
ಆಕೆ ವಿವಾಹಬಂಧನದಿಂದ ಮುಕ್ತಳು. ಅಂಥವಳು ಇನ್ನೊಬ್ಬನನ್ನು ಮದುವೆ ಆದರೂ ವ್ಯಭಿಚಾರಿಣಿ
ಎನಿಸಿಕೊಳ್ಳುವುದಿಲ್ಲ. 4ಅಂತೆಯೇ, ಪ್ರಿಯ ಸಹೋದರರೇ, ನೀವು ಕ್ರಿಸ್ತ ಯೇಸುವಿನ ದೇಹದೊಂದಿಗೆ
ಒಂದಾಗಿರುವುದರಿಂದ ಧರ್ಮಶಾಸ್ತ್ರದ ಪಾಲಿಗೆ ಸತ್ತವರಾದಿರಿ. ಇದರ ಪರಿಣಾಮವಾಗಿ, ಮರಣದಿಂದ
ಪುನರುತ್ಥಾನ ಹೊಂದಿದ ಕ್ರಿಸ್ತಯೇಸುವಿನೊಂದಿಗೆ ಬಂಧಿತರಾಗಿದ್ದೀರಿ. ಹೀಗೆ, ದೇವರಿಗೆ ನಾವು ಸತ್ಫಲವನ್ನು
ಈಯುವವರಾಗಿದ್ದೇವೆ. 5ನಾವು ಶರೀರ ಸ್ವಭಾವಕ್ಕನುಸಾರವಾಗಿ ಬಾಳುತ್ತಿದ್ದಾಗ ಪಾಪಕರವಾದ ದುರಿಚ್ಛೆಗಳು
ಧರ್ಮಶಾಸ್ತ್ರದಿಂದಲೇ ಪ್ರಚೋದಿತವಾಗಿ ನಮ್ಮ ಇಂದ್ರಿಯಗಳಲ್ಲಿ ಕಾರ್ಯನಿರತವಾಗಿದ್ದವು. ಪರಿಣಾಮವಾಗಿ,
ನಾವು ಮೃತ್ಯುವಿಗೆ ಫಲವನ್ನು ಈಯುತ್ತಿದ್ದೆವು. 6ಈಗಲಾದರೋ ನಮ್ಮನ್ನು ಬಂಧನದಲ್ಲಿಟ್ಟಿದ್ದ ಆ
ಧರ್ಮಶಾಸ್ತ್ರದ ಪಾಲಿಗೆ ನಾವು ಸತ್ತು, ಬಿಡುಗಡೆ ಹೊಂದಿದ್ದೇವೆ. ಆದ್ದರಿಂದ ಲಿಖಿತವಾದ ಹಳೆಯ ಶಾಸ್ತ್ರಕ್ಕೆ
ಬದ್ಧರಾಗದೆ ಪವಿತ್ರಾತ್ಮ ಪ್ರೇರಿತವಾದ ನವೀನ ಮಾರ್ಗದಲ್ಲಿ ನಡೆಯುತ್ತಾ ಇದ್ದೇವೆ.

## ಧರ್ಮಶಾಸ್ತ್ರದಿಂದ ಪಾಪದ ಪ್ರಜ್ಞೆ

7 ಹಾಗಾದರೆ ಧರ್ಮಶಾಸ್ತ್ರವೇ ಪಾಪ ಎಂದು ಹೇಳೋಣವೇ? ಖಂಡಿತವಾಗಿ ಇಲ್ಲ. ಧರ್ಮಶಾಸ್ತ್ರ
ಇಲ್ಲದಿದ್ದರೆ ಪಾಪದ ಅರಿವು ನನಗಾಗುತ್ತಿರಲಿಲ್ಲ. 'ದುರಾಶೆ ಪಡಬೇಡ' ಎಂದು ಧರ್ಮಶಾಸ್ತ್ರ ವಿಧಿಸದೆ
ಹೋಗಿದ್ದರೆ ದುರಾಶೆ ಎಂದರೆ ಏನೆಂಬುದೇ ನನಗೆ ತಿಳಿಯುತ್ತಿರಲಿಲ್ಲ. 8ಆದರೆ ಈ ಆಜ್ಞೆಯ ಮೂಲಕ

ಪಾಪವು ಸಮಯ ಸಾಧಿಸಿ ನನ್ನಲ್ಲಿ ಎಲ್ಲಾ ವಿಧದ ದುರಾಶೆಗಳನ್ನು ಕೆರಳಿಸಿತು. ಧರ್ಮಶಾಸ್ತ್ರವಿಲ್ಲದೆ ಇದ್ದರೆ ಪಾಪವು ಸತ್ತಂತೆಯೇ ಸರಿ. 9ಧರ್ಮಶಾಸ್ತ್ರದ ಅರಿವಿಲ್ಲದೆ ಒಮ್ಮೆ ನಾನು ಜೀವಿಸುತ್ತಿದ್ದೆನು; ಆಜ್ಞೆ ಎಂಬುದು ತಲೆದೋರಿದ ಕೂಡಲೇ ಪಾಪಕ್ಕೆ ಜೀವ ಬಂದಿತು. 10ನಾನಾದರೋ ಸತ್ತೆನು. ಜೀವದಾಯಕವಾಗಬೇಕಿದ್ದ ಆಜ್ಞೆಯೇ ನನಗೆ ಮೃತ್ಯುಕಾರಕವಾಯಿತು. 11ಆಜ್ಞೆಯ ಮೂಲಕವೇ ಪಾಪವು ಸಮಯ ಸಾಧಿಸಿ ನನ್ನನ್ನು ವಂಚಿಸಿತು; ಅದರಿಂದಲೇ ನನ್ನನ್ನು ಕೊಂದುಹಾಕಿತು.

12 ಧರ್ಮಶಾಸ್ತ್ರ ಪವಿತ್ರವಾದುದು. ಅಂತೆಯೇ, ಆಜ್ಞೆಯೂ ಪವಿತ್ರವಾದುದು, ನ್ಯಾಯವಾದುದು ಮತ್ತು ಹಿತಕರವಾದುದು. 13ಹಾಗಾದರೆ ಹಿತಕರವಾದದ್ದೇ ನನಗೆ ಮೃತ್ಯುಕಾರಕವಾಯಿತೇ? ಇಲ್ಲವೇ ಇಲ್ಲ ! ಹಾಗೆ ಮೃತ್ಯುಕಾರಕವಾದುದು ಪಾಪವೇ. ತನ್ನ ನಿಜ ಸ್ವರೂಪವನ್ನು ತೋರಿಸುವುದಕ್ಕಾಗಿ ಪಾಪವು ನನಗೆ ಹಿತಕರವಾದುದನ್ನು ಉಪಯೋಗಿಸಿಕೊಂಡು ನನಗೆ ಮರಣವನ್ನು ತಂದಿತು. ಹೀಗೆ ಪಾಪವು ಅದೆಷ್ಟು ಭೀಕರವಾದುದೆಂದು ಆಜ್ಞೆಯ ಮೂಲಕ ವ್ಯಕ್ತವಾಗುತ್ತದೆ.

### ಅಂತರಂಗದಲ್ಲಿ ಆಂದೋಲನ

14 ಧರ್ಮಶಾಸ್ತ್ರ ಪಾರಮಾರ್ಥಿಕವಾದುದೆಂದು ನಾವು ಬಲ್ಲೆವು. ನಾನಾದರೋ ನರಮಾನವನು; ಪಾಪಕ್ಕೆ ನನ್ನನ್ನೇ ಗುಲಾಮನನ್ನಾಗಿ ಮಾರಿಕೊಂಡವನು. 15ನಾನು ಮಾಡುವುದು ನನಗೇ ಅರ್ಥವಾಗುತ್ತಿಲ್ಲ. ಏನನ್ನು ಮಾಡಲು ಅಪೇಕ್ಷಿಸುತ್ತೇನೋ ಅದನ್ನು ಮಾಡುತ್ತಿಲ್ಲ, ಏನನ್ನು ದ್ವೇಷಿಸುತ್ತೇನೋ ಅದನ್ನೇ ಮಾಡುತ್ತೇನೆ. 16ನಾನು ಮಾಡುವುದನ್ನು ಮನಸ್ಸು ಒಪ್ಪದಿದ್ದರೆ, ಧರ್ಮಶಾಸ್ತ್ರ ಸರಿಯಾದುದೆಂದು ನಾನು ಒಪ್ಪಿಕೊಂಡ ಹಾಗಾಯಿತು. 17ಹೀಗಿರಲಾಗಿ ನಾನು ಬಯಸದೆ ಇರುವುದನ್ನು ಮಾಡುವವನು ಇನ್ನು ನಾನಲ್ಲ. ನನ್ನಲ್ಲಿ ನೆಲೆಗೊಂಡಿರುವ ಪಾಪವೇ ಅದನ್ನು ಮಾಡುತ್ತದೆ. 18ನನ್ನಲ್ಲಿ, ಅಂದರೆ ನನ್ನ ಶಾರೀರಕ ಸ್ವಭಾವದಲ್ಲಿ ಒಳ್ಳೆಯತನವೆಂಬುದೇನೂ ನೆಲೆಗೊಂಡಿಲ್ಲ. ಇದು ನನಗೆ ಗೊತ್ತು. ಏಕೆಂದರೆ, ಒಳಿತನ್ನು ಮಾಡಬೇಕೆಂಬ ಮನಸ್ಸು ನನಗಿದ್ದರೂ ಅದನ್ನು ಮಾಡಲು ನನ್ನಿಂದ ಆಗುತ್ತಿಲ್ಲ. 19ನಾನು ಬಯಸುವ ಒಳ್ಳೆಯದನ್ನು ಮಾಡದೆ, ನಾನು ಬಯಸದ ಕೆಟ್ಟದ್ದನ್ನೇ ಮಾಡುವವನಾಗಿದ್ದೇನೆ. 20ನಾನು ಬಯಸದೆ ಇರುವುದನ್ನೇ ಮಾಡಿದರೆ ಅದನ್ನು ಮಾಡಿದವನು ನಾನಲ್ಲ, ನನ್ನಲ್ಲಿ ನೆಲೆಗೊಂಡಿರುವ ಪಾಪವೇ ಅದನ್ನು ಮಾಡಿತು. 21ನಾನು ಒಳಿತನ್ನು ಮಾಡಬಯಸಿದರೂ ಕೇಡು ನನ್ನ ಕೈಬಿಡುತ್ತಿಲ್ಲ. ಇದೇ ಒಂದು ನಿಯಮವಾಗಿ ನನ್ನಲ್ಲಿ ಕಂಡುಬರುತ್ತದೆ.

22 ನನ್ನ ಅಂತರಂಗದಲ್ಲಿ ದೈವನಿಯಮವನ್ನು ಕುರಿತು ಆನಂದಿಸುತ್ತೇನೆ. 23ನನ್ನ ಇಂದ್ರಿಯಗಳಲ್ಲಿಯಾದರೋ ಬೇರೊಂದು ನಿಯಮವನ್ನು ಕಾಣುತ್ತೇನೆ. ಇದು ನನ್ನ ಅಂತರಂಗ ನಿಯಮಕ್ಕೆ ತದ್ವಿರುದ್ಧವಾಗಿ ಕಾದಾಡುತ್ತದೆ; ನನ್ನ ಇಂದ್ರಿಯಗಳಲ್ಲಿ ನೆಲೆಗೊಂಡಿರುವ ಪಾಪನಿಯಮಕ್ಕೆ ನನ್ನನ್ನು ಕೈದಿಯನ್ನಾಗಿಸುತ್ತದೆ. 24ಅಯ್ಯೋ, ನಾನೆಂಥ ನಿರ್ಭಾಗ್ಯನು! ಸಾವಿನ ದವಡೆಗೆ ಸಿಕ್ಕಿರುವ ಈ ಶರೀರದಿಂದ ನನ್ನನ್ನು ಬಿಡಿಸುವವರು ಯಾರು? 25ದೇವರೇ; ನಮ್ಮ ಪ್ರಭು ಯೇಸುಕ್ರಿಸ್ತರ ಮುಖಾಂತರ ಅವರಿಗೆ ಕೃತಜ್ಞತೆ ಸಲ್ಲಲಿ !

ನನ್ನಷ್ಟಕ್ಕೆ ನಾನೇ ದೇವರ ನಿಯಮವನ್ನು ಮನಃಪೂರ್ವಕವಾಗಿ ಪಾಲಿಸಲು ಬಯಸುತ್ತೇನೆ. ನನ್ನ ಈ ದೇಹದಲ್ಲಾದರೋ ಪಾಪದ ನಿಯಮಕ್ಕೆ ಬದ್ಧನಾಗಿದ್ದೇನೆ.

### ಪವಿತ್ರಾತ್ಮಾಧೀನವಾದ ಬಾಳು

**8** ಆದುದರಿಂದ ಈಗ ಕ್ರಿಸ್ತಯೇಸುವಿನಲ್ಲಿ ಇರುವವರಿಗೆ ದಂಡನಾತೀರ್ಪು ಇರುವುದಿಲ್ಲ. 2ಏಕೆಂದರೆ ಕ್ರಿಸ್ತಯೇಸುವಿನಲ್ಲಿ ಇರುವವರಿಗೆ ಜೀವವನ್ನು ತರುವ ಪವಿತ್ರಾತ್ಮ ನಿಯಮವು ಪಾಪ-ಮರಣಗಳ ನಿಯಮದಿಂದ ನಿನ್ನನ್ನು ಬಿಡುಗಡೆ ಮಾಡಿದೆ. 3ಶರೀರ ಸ್ವಭಾವದ ಬಲಹೀನತೆಯ ನಿಮಿತ್ತ ಧರ್ಮಶಾಸ್ತ್ರಕ್ಕೆ ಯಾವುದು ಸಾಧ್ಯವಾಗದೆ ಹೋಯಿತೋ, ಅದು ದೇವರಿಗೆ ಸಾಧ್ಯವಾಯಿತು. ಪಾಪ ಪರಿಹಾರಕ್ಕಾಗಿ ತಮ್ಮ ಸ್ವಂತ ಪುತ್ರನನ್ನು ಪಾಪಾಧೀನವಾದ ನಮ್ಮ ಸ್ವಭಾವದಂಥ ಶರೀರ ಸ್ವಭಾವದಲ್ಲಿ ಕಳುಹಿಸಿಕೊಟ್ಟರು. ಆ

ಸ್ವಭಾವದಲ್ಲೇ ಪಾಪಕ್ಕೆ ಮರಣ ದಂಡನೆಯನ್ನು ವಿಧಿಸಿದರು. 4ಶರೀರ ಸ್ವಭಾವಕ್ಕೆ ಅನುಸಾರವಾಗಿ ನಡೆಯದೆ ಪವಿತ್ರಾತ್ಮ ಅವರ ಚಿತ್ತಕ್ಕನುಸಾರವಾಗಿ ನಡೆಯುವ ನಮ್ಮಲ್ಲಿ ಧರ್ಮಶಾಸ್ತ್ರದ ನೀತಿನಿಯಮಗಳು ನೆರವೇರುವಂತೆ ದೇವರು ಹೀಗೆ ಮಾಡಿದರು. 5ಶರೀರ ಸ್ವಭಾವಕ್ಕೆ ಅನುಸಾರವಾಗಿ ನಡೆಯುವವರು ಶರೀರಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಮಗ್ನರಾಗಿರುತ್ತಾರೆ. ಪವಿತ್ರಾತ್ಮ ಅವರಿಗೆ ಅನುಸಾರವಾಗಿ ನಡೆಯುವವರಾದರೋ ಆತ್ಮಕ್ಕೆ ಸಂಬಂಧಪಟ್ಟ ವಿಷಯಗಳಲ್ಲಿ ಮಗ್ನರಾಗಿರುತ್ತಾರೆ. 6ಶರೀರ ಸ್ವಭಾವದಲ್ಲೆ ಮಗ್ನರಾಗಿರುವುದರ ಪರಿಣಾಮ ಮರಣ; ಪವಿತ್ರಾತ್ಮ ಅವರಲ್ಲೇ ಮಗ್ನರಾಗಿರುವುದರ ಪರಿಣಾಮ ಸಜ್ಜೀವ ಮತ್ತು ಶಾಂತಿಸಮಾಧಾನ. 7ಶರೀರ ಸ್ವಭಾವದಲ್ಲೇ ಮಗ್ನವಾಗಿರುವ ಮನಸ್ಸು ದೇವರಿಗೆ ಶತ್ರು. ಅಂಥ ಮನಸ್ಸು ದೇವರ ನಿಯಮಕ್ಕೆ ಮಣಿಯುವುದಿಲ್ಲ. ಮಣಿಯಲು ಸಾಧ್ಯವೂ ಇಲ್ಲ. 8ಶರೀರ ಸ್ವಭಾವಕ್ಕೆ ಅನುಸಾರವಾಗಿ ನಡೆಯುವವರು ದೇವರನ್ನು ಮೆಚ್ಚಿಸಲು ಸಾಧ್ಯವೇ ಇಲ್ಲ.

9 ನಿಮ್ಮಲ್ಲಿ ನಿಜವಾಗಿಯೂ ದೇವರ ಆತ್ಮವು ನೆಲಸಿದ್ದರೆ ನೀವು ಶರೀರ ಸ್ವಭಾವಕ್ಕೆ ಅನುಸಾರವಾಗಿ ಜೀವಿಸದೆ ಪವಿತ್ರಾತ್ಮ ಅವರ ಚಿತ್ತಕ್ಕೆ ಅನುಸಾರವಾಗಿ ಜೀವಿಸುತ್ತೀರಿ. ಯಾರಲ್ಲಿ ಕ್ರಿಸ್ತಯೇಸುವಿನ ಆತ್ಮ ಇಲ್ಲವೋ ಅಂಥವನು ಕ್ರಿಸ್ತಯೇಸುವಿಗೆ ಸೇರಿದವನಲ್ಲ. 10ಆದರೆ ಕ್ರಿಸ್ತಯೇಸು ನಿಮ್ಮಲ್ಲಿ ವಾಸಿಸಿದರೆ, ಪಾಪದ ನಿಮಿತ್ತ ನಿಮ್ಮ ಶರೀರ ಮರಣಕ್ಕೆ ಗುರಿಯಾಗಿದ್ದರೂ ನೀವು ದೇವರೊಡನೆ ಸತ್ಸಂಬಂಧವನ್ನು ಪಡೆದಿರುವುದರಿಂದ ಪವಿತ್ರಾತ್ಮ ನಿಮಗೆ ಜೀವಾಳವಾಗಿರುತ್ತಾರೆ. 11ಯೇಸುವನ್ನು ಮರಣದಿಂದ ಎಬ್ಬಿಸಿದ ದೇವರ ಆತ್ಮ ನಿಮ್ಮಲ್ಲಿ ನೆಲೆಗೊಂಡಿರಲಿ. ಆಗ ಕ್ರಿಸ್ತಯೇಸುವನ್ನು ಮರಣದಿಂದ ಎಬ್ಬಿಸಿದ ದೇವರು ನಿಮ್ಮಲ್ಲಿ ನೆಲೆಗೊಂಡಿರುವ ಆತ್ಮನ ಮುಖಾಂತರ ನಿಮ್ಮ ನಶ್ವರ ದೇಹಗಳಿಗೂ ಜೀವವನ್ನೀಯುವರು.

12 ಆದ್ದರಿಂದ ಸಹೋದರರೇ, ನಾವು ಶರೀರ ಸ್ವಭಾವದ ಹಂಗಿನಲ್ಲಿಲ್ಲ. ಅದರ ಆಶಾಪಾಶಗಳಿಗೆ ಅನುಗುಣವಾಗಿ ಬಾಳುವ ಹಂಗಿನಲ್ಲೂ ಇಲ್ಲ. 13ನೀವು ಶರೀರ ಸ್ವಭಾವಕ್ಕೆ ಅನುಸಾರವಾಗಿ ಬಾಳಿದರೆ ಖಂಡಿತವಾಗಿ ಸಾಯುವಿರಿ. ಪವಿತ್ರಾತ್ಮ ಅವರ ನೆರವಿನಿಂದ ದೈಹಿಕ ದುರಭ್ಯಾಸಗಳನ್ನು ದಮನಮಾಡಿದರೆ ಜೀವಿಸುವಿರಿ. 14ಯಾರು ಯಾರು ದೇವರ ಆತ್ಮನಿಗೆ ಮಣಿದು ನಡೆಯುತ್ತಾರೋ ಅವರು ದೇವರ ಮಕ್ಕಳು. 15ದೇವರು ನಿಮಗೆ ದಯಪಾಲಿಸಿರುವ ಆತ್ಮ ನಿಮ್ಮನ್ನು ಮತ್ತೊಮ್ಮೆ ಗುಲಾಮರನ್ನಾಗಿಯೂ ಭಯಭೀತರನ್ನಾಗಿಯೂ ಮಾಡುವುದಿಲ್ಲ. ಬದಲಿಗೆ, ನಿಮ್ಮನ್ನು ದೇವರ ಮಕ್ಕಳನ್ನಾಗಿಸುತ್ತದೆ. ಆ ಆತ್ಮದ ಮೂಲಕವೇ ನಾವು ದೇವರನ್ನು, "ಅಪ್ಪಾ, ತಂದೆಯೇ" ಎಂದು ಕರೆಯುತ್ತೇವೆ. 16ನಾವು ದೇವರ ಮಕ್ಕಳೆಂಬುದಕ್ಕೆ ದೇವರ ಆತ್ಮ ನಮ್ಮ ಅಂತರಾತ್ಮದೊಂದಿಗೆ ಸಾಕ್ಷಿ ನುಡಿಯುತ್ತಾರೆ. 17ನಾವು ಮಕ್ಕಳಾಗಿದ್ದರೆ, ಹಕ್ಕುಬಾಧ್ಯತೆ ಉಳ್ಳವರು. ಹೌದು, ದೇವರ ಸೌಭಾಗ್ಯಕ್ಕೆ ಬಾಧ್ಯಸ್ಥರು; ಕ್ರಿಸ್ತಯೇಸುವಿನೊಡನೆ ಸಹಬಾಧ್ಯಸ್ಥರು. ಕ್ರಿಸ್ತಯೇಸುವಿನ ಯಾತನೆಯಲ್ಲೂ ನಾವು ಪಾಲುಗಾರರಾಗಬೇಕು. ಆಗ ಅವರ ಮಹಿಮೆಯಲ್ಲೂ ಪಾಲುಗಾರರಾಗುತ್ತೇವೆ.

## ಭಕ್ತರಿಗಿರುವ ಭವ್ಯ ಭವಿಷ್ಯ

18 ಇಂದಿನ ಕಾಲದಲ್ಲಿ ನಾವು ಅನುಭವಿಸುತ್ತಿರುವ ಕಷ್ಟಸಂಕಟಗಳು ಮುಂದೆ ನಮಗೆ ಪ್ರತ್ಯಕ್ಷವಾಗಲಿರುವ ಮಹಿಮೆಯೊಂದಿಗೆ ಹೋಲಿಸುವುದಕ್ಕೂ ಬಾರದವುಗಳೆಂದು ನಾನು ಎಣಿಸುತ್ತೇನೆ. 19ದೇವರ ಮಕ್ಕಳ ಮಹಿಮೆಯು ಯಾವಾಗ ಪ್ರತ್ಯಕ್ಷವಾದೀತೋ ಎಂದು ಸೃಷ್ಟಿ ಸಮಸ್ತವು ಬಹು ಉತ್ಸುಕತೆಯಿಂದ ಎದುರು ನೋಡುತ್ತಿದೆ. 20ಸರ್ವಸೃಷ್ಟಿಯು ನಿರರ್ಥಕತೆಗೆ ಒಳಗಾಯಿತು. ಇದು ಅದರ ಸ್ವಂತ ಇಚ್ಛೆಯಿಂದಲ್ಲ, ದೇವರ ಇಚ್ಛೆಯಿಂದಲೇ ಆಯಿತು. ಆದರೂ ಸೃಷ್ಟಿಗೆ ನಿರೀಕ್ಷೆಯೊಂದಿದೆ. 21ಅದೇನೆಂದರೆ, ಸೃಷ್ಟಿಯು ಸಹ ವಿನಾಶವಿಧಿಯಿಂದ ಬಿಡುಗಡೆಯಾಗಿ ದೇವರ ಮಕ್ಕಳ ಮಹಿಮಾಯುತ ಸ್ವಾತಂತ್ರ್ಯದಲ್ಲಿ ಪಾಲುಗೊಳ್ಳುತ್ತದೆ, ಎಂಬುದೇ. 22ಸೃಷ್ಟಿಸಮಸ್ತವು ಇಂದಿನವರೆಗೆ ನರಳುತ್ತಾ ಪ್ರಸವವೇದನೆಪಡುತ್ತಾ ಇದೆ ಎಂಬುದು ನಮಗೆ ತಿಳಿದಿದೆ. 23ಸೃಷ್ಟಿಮಾತ್ರವಲ್ಲ, ದೇವರ ವರದಾನಗಳಲ್ಲಿ ಪ್ರಥಮಫಲವಾಗಿ ಪವಿತ್ರಾತ್ಮ ಅವರನ್ನೇ ಪಡೆದಿರುವ ನಾವು ಸಹ ನಮ್ಮೊಳಗೇ ನರಳುತ್ತಿದ್ದೇವೆ. ದೇವರ ಮಕ್ಕಳಿಗೆ ದೊರೆಯುವ ಸೌಭಾಗ್ಯವನ್ನೂ ನಮ್ಮ ಸಂಪೂರ್ಣ ವಿಮೋಚನೆಯನ್ನೂ ನಿರೀಕ್ಷಿಸುತ್ತಿದ್ದೇವೆ. 24ನಾವು ಜೀವೋದ್ಧಾರ ಹೊಂದಿದ್ದರೂ ಇನ್ನೂ ನಿರೀಕ್ಷಿಸುವವರಾಗಿದ್ದೇವೆ. ನಾವು ನಿರೀಕ್ಷಿಸುವುದು

ಪ್ರತ್ಯಕ್ಷವಾಗಿದ್ದರೆ ಅದನ್ನು ನಿರೀಕ್ಷೆ ಎನ್ನುವುದಿಲ್ಲ; ಪ್ರತ್ಯಕ್ಷವಾಗಿರುವುದನ್ನು ಯಾರಾದರೂ ನಿರೀಕ್ಷಿಸುವುದುಂಟೇ? [25]ಪ್ರತ್ಯಕ್ಷವಾಗದೆ ಇರುವುದನ್ನು ನಾವು ನಿರೀಕ್ಷಿಸುವವರಾಗಿದ್ದರೆ, ಅದಕ್ಕಾಗಿ ತಾಳ್ಮೆಯಿಂದ ಕಾದುಕೊಂಡಿರುತ್ತೇವೆ.

26 ಅಂತೆಯೇ ಪವಿತ್ರಾತ್ಮರು ಸಹ ನಮ್ಮ ದೌರ್ಬಲ್ಯದಲ್ಲಿ ನೆರವು ನೀಡುತ್ತಾರೆ. ಹೇಗೆ ಪ್ರಾರ್ಥಿಸಬೇಕು, ಯಾವುದಕ್ಕಾಗಿ ಪ್ರಾರ್ಥಿಸಬೇಕು ಎಂಬುದನ್ನು ನಾವು ತಿಳಿಯದವರು. ಪವಿತ್ರಾತ್ಮರೇ ಮಾತಿಗೆಟುಕದ ರೀತಿಯಲ್ಲಿ ಆತ್ಮಧ್ವನಿಯಿಂದ ನಮ್ಮ ಪರವಾಗಿ ದೇವರಲ್ಲಿ ವಿಜ್ಞಾಪಿಸುತ್ತಾರೆ. [27]ಅಂತರಂಗಗಳನ್ನು ಈಕ್ಷಿಸುವ ದೇವರು ಪವಿತ್ರಾತ್ಮರ ಇಂಗಿತವೇನೆಂದು ಬಲ್ಲರು. ಏಕೆಂದರೆ, ದೇವರ ಚಿತ್ತದ ಪ್ರಕಾರವೇ ಪವಿತ್ರಾತ್ಮರು ದೇವಜನರಿಗಾಗಿ ಬಿನ್ನವಿಸುತ್ತಾರೆ.

28 ದೇವರನ್ನು ಪ್ರೀತಿಸುವವರಿಗೂ ದೇವರ ಸಂಕಲ್ಪದ ಮೇರೆಗೆ ಕರೆಹೊಂದಿದವರಿಗೂ ಸಕಲವೂ ಹಿತಕರವಾಗಿ ಪರಿಣಮಿಸುವುದು. ಇದನ್ನು ನಾವು ಚೆನ್ನಾಗಿ ಅರಿತಿದ್ದೇವೆ. [29]ದೇವರು ಯಾರನ್ನು ತಮ್ಮವರೆಂದು ಮೊದಲೇ ಆರಿಸಿಕೊಂಡರೋ ಅವರನ್ನು ತಮ್ಮ ಪುತ್ರನ ಅನುರೂಪಿಗಳಾಗುವಂತೆ ಆಗಲೇ ನೇಮಿಸಿದರು. ಹೀಗೆ ಅನೇಕ ಸಹೋದರರಲ್ಲಿ ತಮ್ಮ ಪುತ್ರನೇ ಜೇಷ್ಠನಾಗಿರಬೇಕೆಂಬುದು ದೇವರ ನಿರ್ಧಾರವಾಗಿದೆ. [30]ಹೀಗೆ ಯಾರನ್ನು ಮೊದಲೇ ನೇಮಿಸಿದ್ದರೋ ಅವರನ್ನು ಕರೆದಿದ್ದಾರೆ. ಯಾರನ್ನು ಕರೆದಿದ್ದಾರೋ ಅವರನ್ನು ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಂಡಿದ್ದಾರೆ. ಯಾರನ್ನು ತಮ್ಮೊಡನೆ ಸತ್ಸಂಬಂಧದಲ್ಲಿ ಇರಿಸಿಕೊಂಡಿದ್ದಾರೋ ಅವರನ್ನು ಮಹಿಮಾಪದವಿಗೆ ಸೇರಿಸಿಕೊಂಡಿದ್ದಾರೆ.

### ಕ್ರಿಸ್ತ ಪ್ರೀತಿಯಿಂದ ನಮ್ಮನ್ನು ಬೇರ್ಪಡಿಸುವವರು ಯಾರು?

31 ಹೀಗಿರುವಲ್ಲಿ ನಾವು ಏನು ಹೇಳೋಣ? ದೇವರೇ ನಮ್ಮ ಪರ ಇರುವಾಗ ನಮ್ಮನ್ನು ವಿರೋಧಿಸುವವರು ಯಾರು? [32]ದೇವರು ತಮ್ಮ ಸ್ವಂತ ಪುತ್ರನನ್ನೇ ನಮ್ಮೆಲ್ಲರಿಗಾಗಿ ಕೊಡಲು ಹಿಂಜರಿಯಲಿಲ್ಲ. ತಮ್ಮ ಪುತ್ರನನ್ನೇ ಬಲಿದಾನವಾಗಿ ಅರ್ಪಿಸಿದ ದೇವರು ಮತ್ತೇನನ್ನು ತಾನೇ ನಮಗೆ ವರದಾನವಾಗಿ ಕೊಡದಿರಲಾರರು? [33–34]ದೇವರೇ ಆರಿಸಿಕೊಂಡವರ ಮೇಲೆ ಯಾರು ತಾನೇ ದೋಷಾರೋಪಣೆ ಮಾಡಬಲ್ಲರು? ದೇವರೇ ಅವರನ್ನು ನಿರ್ದೋಷಿಗಳೆಂದು ನಿರ್ಣಯಿಸಿರುವಾಗ ಅವರನ್ನು ದೋಷಿಗಳೆಂದು ನಿರ್ಣಯಿಸುವವರು ಯಾರು? ಪ್ರಾಣತ್ಯಾಗ ಮಾಡಿದ್ದಲ್ಲದೆ ಪುನರುತ್ಥಾನ ಹೊಂದಿದ ಕ್ರಿಸ್ತಯೇಸುವೇ ದೇವರ ಬಲಪಾರ್ಶ್ವದಲ್ಲಿದ್ದುಕೊಂಡು ನಮ್ಮ ಪರವಾಗಿ ಬಿನ್ನಯಿಸುತ್ತಿದ್ದಾರೆ. [35]ಕ್ರಿಸ್ತಯೇಸುವಿನ ಪ್ರೀತಿಯಿಂದ ನಮ್ಮನ್ನು ಬೇರ್ಪಡಿಸಲು ಯಾರಿಂದ ಸಾಧ್ಯ? ಕಷ್ಟ–ಸಂಕಟ, ಇಕ್ಕಟ್ಟು–ಬಿಕ್ಕಟ್ಟು, ಹಿಂಸೆ ಬಾಧೆ ಇವುಗಳಿಂದ ಸಾಧ್ಯವೆ? ಇಲ್ಲ. ಹಸಿವು ನೀರಡಿಕೆ, ನಗ್ನಸ್ಥಿತಿ, ಆಪತ್ತು–ವಿಪತ್ತು, ಖಡ್ಗ–ಕಠಾರಿಗಳಿಂದ ಸಾಧ್ಯವೆ? ಎಂದಿಗೂ ಇಲ್ಲ. [36]ಪವಿತ್ರಗ್ರಂಥದಲ್ಲಿ ಹೀಗೆ ಬರೆಯಲಾಗಿದೆ:

"ದಿನವಿಡೀ ನಿಮಗೋಸ್ಕರವೇ
ಸಾವಿಗೀಡಾಗುತಿಹೆವು ನಾವು,
ಮಧ್ಯಸ್ಥಾನಕ್ಕೆ ಒಯ್ದ ಕುರಿಗಳಂತೆ
ಪರಿಗಣಿತರಾಗುತಿಹೆವು ನಾವು."

[37]ನಮ್ಮನ್ನು ಪ್ರೀತಿಸಿದ ಯೇಸುಕ್ರಿಸ್ತರ ಮುಖಾಂತರ ಇವೆಲ್ಲವುಗಳಲ್ಲಿಯೂ ನಾವು ಪೂರ್ಣ ಜಯಶಾಲಿಗಳಾಗುತ್ತೇವೆ. [38]ಸಾವಾಗಲಿ ಜೀವವಾಗಲಿ, ದೇವದೂತರಾಗಲಿ ದುರಾತ್ಮರಾಗಲಿ, ಈಗಿನ ಸಂತತಿಗಳೇ ಆಗಲಿ, ಭವಿಷ್ಯದ ಆಗುಹೋಗುಗಳೇ ಆಗಲಿ, ಯಾವ ಶಕ್ತಿಗಳೇ ಆಗಲಿ ನಮ್ಮ ಪ್ರಭು ಯೇಸುಕ್ರಿಸ್ತರಲ್ಲಿ ತೋರಿಬಂದ ದೈವಪ್ರೀತಿಯಿಂದ ನಮ್ಮನ್ನು ಬೇರ್ಪಡಿಸಲಾರವು. [39]ಅಂತೆಯೇ, ಮೇಲಣ ಲೋಕವಾಗಲಿ, ಕೆಳಗಣ ಲೋಕವಾಗಲಿ, ಸೃಷ್ಟಿಸಮಸ್ತಗಳಲ್ಲಿ ಯಾವುದೇ ಆಗಲಿ, ಆ ಪ್ರೀತಿಯಿಂದ ನಮ್ಮನ್ನು ಬೇರ್ಪಡಿಸಲು ಸಾಧ್ಯವಿಲ್ಲ. ಇದು ನಿಶ್ಚಯ.

## ಸ್ವಜನರ ಬಗ್ಗೆ ಸಂತಾಪ

**9** ನನ್ನ ಜನರಾದ ಯೆಹೂದ್ಯರ ವಿಷಯವಾಗಿ ನನಗೆ ಅತೀವ ದುಃಖವೂ ನಿರಂತರ ಮನೋವೇದನೆಯೂ
ಉಂಟಾಗುತ್ತಿದೆ. 2ಇದು ಸುಳ್ಳಲ್ಲ, ಕ್ರಿಸ್ತಯೇಸುವಿನಲ್ಲಿ ಸತ್ಯವಾಗಿಯೇ ಹೇಳುತ್ತಿದ್ದೇನೆ.
ಪವಿತ್ರಾತ್ಮಾಧೀನವಾಗಿರುವ ನನ್ನ ಮನಸ್ಸೇ ಇದಕ್ಕೆ ಸಾಕ್ಷಿಯಾಗಿದೆ. 3ಸ್ವದೇಶಿಯರೂ ರಕ್ತಸಂಬಂಧಿಕರೂ ಆದ
ನನ್ನ ಸಹೋದರರ ಪರವಾಗಿ ನಾನು ಕ್ರಿಸ್ತಯೇಸುವಿನಿಂದ ಬಹಿಷ್ಕೃತನಾಗಿ ಶಾಪಗ್ರಸ್ತನಾಗಲು ಸಹ
ಸಿದ್ಧನಿದ್ದೇನೆ. 4ಅವರೇ ಇಸ್ರಯೇಲರು. ದೇವರೇ ಇವರನ್ನು ಮಕ್ಕಳನ್ನಾಗಿ ಆರಿಸಿಕೊಂಡರು; ಇವರಿಗೆ ತಮ್ಮ
ಮಹಿಮೆಯನ್ನು ವ್ಯಕ್ತಪಡಿಸಿದರು; ಇವರೊಡನೆ ಒಡಂಬಡಿಕೆಯನ್ನು ಮಾಡಿಕೊಂಡರು; ಇವರಿಗೆ
ಧರ್ಮಶಾಸ್ತ್ರವನ್ನೂ ಸಭಾರಾಧನೆಯನ್ನೂ ವಾಗ್ದಾನಗಳನ್ನೂ ದಯಪಾಲಿಸಿದರು. 5ಅಬ್ರಹಾಮ್, ಇಸಾಕ್
ಮತ್ತು ಯಕೋಬ ಎಂಬ ಪಿತಾಮಹರೂ ಸಹ ಇವರಿಗೆ ಸೇರಿದವರೇ. ಶಾರೀರಿಕವಾಗಿ ಕ್ರಿಸ್ತಯೇಸುವೂ
ಇವರ ವಂಶದಲ್ಲಿ ಹುಟ್ಟಿದವರೇ. ಸಕಲಕ್ಕೂ ಒಡೆಯರಾದ ದೇವರಿಗೆ ನಿರಂತರ ಸ್ತುತಿಸ್ತೋತ್ರ ಸಲ್ಲಲಿ,
ಆಮೆನ್.

6 ದೇವರ ವಾಗ್ದಾನ ವಿಫಲವಾಯಿತೆಂದು ನಾನು ಹೇಳುತ್ತಿಲ್ಲ. ಇಸ್ರಯೇಲ್ ವಂಶದಲ್ಲಿ
ಹುಟ್ಟಿದವರೆಲ್ಲರೂ ನಿಜವಾದ ಇಸ್ರಯೇಲರಲ್ಲ. 7ಅಂತೆಯೇ ಅಬ್ರಹಾಮನ ಸಂತತಿಯಲ್ಲಿ ಹುಟ್ಟಿದ ಮಾತ್ರಕ್ಕೆ
ಎಲ್ಲರೂ ಅಬ್ರಹಾಮನ ಮಕ್ಕಳಾಗುವುದಿಲ್ಲ. "ಇಸಾಕನಿಂದ ಹುಟ್ಟುವವರು ನಿನ್ನ ಸಂತತಿ ಎನಿಸಿಕೊಳ್ಳುವರು,"
ಎಂದು ದೇವರು ಅಬ್ರಹಾಮನಿಗೆ ನುಡಿದರು. 8ಈ ಮಾತಿನ ಅರ್ಥವೇನೆಂದರೆ; ಶರೀರ ಸಂಬಂಧದಿಂದ
ಹುಟ್ಟಿದವರೆಲ್ಲರೂ ದೇವರ ಮಕ್ಕಳಾಗುವುದಿಲ್ಲ; ದೈವವಾಗ್ದಾನದ ಪರಿಣಾಮವಾಗಿ ಹುಟ್ಟಿದವರೇ
ನಿಜವಾಗಿಯೂ ಅಬ್ರಹಾಮನ ಸಂತತಿ ಎನಿಸಿಕೊಳ್ಳುವರು. 9ಆ ವಾಗ್ದಾನ ಹೀಗಿತ್ತು: "ನಿಯಮಿತ ಕಾಲದಲ್ಲಿ
ನಾನು ಮರಳಿ ಬರುವೆನು. ಆಗ ಸಾರಳಿಗೆ ಒಬ್ಬ ಮಗನಿರುವನು."

10 ಅಷ್ಟು ಮಾತ್ರವಲ್ಲ, ನಮ್ಮ ಮೂಲಪಿತ ಇಸಾಕನಿಂದ ರೆಬೆಕ್ಕಳಿಗೆ ಅವಳಿಜವಳಿ ಮಕ್ಕಳಾದರು. 11-
12ಅವರು ಹುಟ್ಟುವುದಕ್ಕೆ ಮುಂಚೆಯೇ, ಒಳ್ಳೆಯದನ್ನಾಗಲಿ ಕೆಟ್ಟದ್ದನ್ನಾಗಲಿ ಮಾಡುವುದಕ್ಕೆ ಮೊದಲೇ,
"ಹಿರಿಯವನು ಕಿರಿಯವನಿಗೆ ಸೇವೆ ಮಾಡುವನು," ಎಂದು ಆಕೆಗೆ ಹೇಳಲಾಗಿತ್ತು. ಇದರಿಂದ ದೇವರು
ತಮಗಿಷ್ಟ ಬಂದವರನ್ನು ಆರಿಸಿಕೊಳ್ಳುತ್ತಾರೆಂಬ ಸಂಕಲ್ಪವು ಸ್ಥಿರಗೊಂಡಿತು. ಈ ಸಂಕಲ್ಪ ಮಾನವನು
ಸಾಧಿಸುವ ಸತ್ಕಾರ್ಯಗಳ ಮೇಲೆ ಅಲ್ಲ, ಕರೆನೀಡುವ ದೇವರ ಚಿತ್ತದ ಮೇಲೆ ನೆಲೆಗೊಂಡಿದೆ. 13ಅಂತೆಯೇ,
"ನಾನು ಯಕೋಬನನ್ನು ಪ್ರೀತಿಸಿದೆನು, ಏಸಾವನನ್ನು ದ್ವೇಷಿಸಿದೆನು," ಎಂದು ಪವಿತ್ರಗ್ರಂಥದಲ್ಲಿ
ಲಿಖಿತವಾಗಿದೆ.

14 ಹೀಗಿರಲಾಗಿ, ನಾವು ಏನೆಂದು ಹೇಳೋಣ? ದೇವರಲ್ಲಿ ಅನ್ಯಾಯವಿದೆಯೆಂದು
ಹೇಳೋಣವೇ? ಎಂದಿಗೂ ಅಲ್ಲ. 15ಏಕೆಂದರೆ ದೇವರೇ ಮೋಶೆಗೆ ಈ ರೀತಿ ಹೇಳಿದ್ದಾರೆ:

"ಯಾರ ಮೇಲೆ ದಯೆತೋರಲು ನನಗೆ
  ಇಷ್ಟವಿದೆಯೋ
ಅವರ ಮೇಲೆ ದಯೆ ತೋರುವೆನು
ಯಾರ ಮೇಲೆ ಕನಿಕರ ತೋರಲು ನನಗೆ
  ಮನಸ್ಸಿದೆಯೋ
ಅವರ ಮೇಲೆ ಕನಿಕರ ತೋರುವೆನು."

16 ದೇವರ ದಯೆ ದೊರಕುವುದು ಮಾನವನ ಇಚ್ಛೆಯಿಂದಲ್ಲ, ಅವನ ಪ್ರಯತ್ನದಿಂದಲೂ ಅಲ್ಲ.
ಅದು ದೊರಕುವುದು ದೇವರ ಕರುಣೆಯಿಂದಲೇ. 17ಪವಿತ್ರ ಗ್ರಂಥದಲ್ಲಿ ಫರೋಹನಿಗೆ ಹೀಗೆಂದು
ಹೇಳಲಾಗಿದೆ: "ನಾನು ನಿನ್ನಲ್ಲಿ ನನ್ನ ಶಕ್ತಿಯನ್ನು ಪ್ರದರ್ಶಿಸುವ ಸಲುವಾಗಿ ಹಾಗು ಜಗತ್ತಿನಲ್ಲೆಲ್ಲಾ ನನ್ನ
ಹೆಸರನ್ನು ಪ್ರಖ್ಯಾತಪಡಿಸಿಕೊಳ್ಳುವ ಸಲುವಾಗಿ ನಿನ್ನನ್ನು ಉನ್ನತಸ್ಥಾನಕ್ಕೆ ಏರಿಸಿದೆನು." 18ದೇವರ ಇಚ್ಛೆಗೆ
ಅನುಗುಣವಾಗಿ ಮಾನವರಿಗೆ ಕರುಣೆಯೂ ಲಭಿಸುತ್ತದೆ, ಕಾಠಿಣ್ಯವೂ ಲಭಿಸುತ್ತದೆ.

## ದೈವಕೃಪೆ ಮತ್ತು ದೈವಕ್ರೋಧ

19 “ಹಾಗಾದರೆ ದೇವರು ಹೇಗೆ ತಾನೆ ಮಾನವನನ್ನು ಅಪರಾಧಿ ಎಂದು ನಿರ್ಣಯಿಸಬಲ್ಲರು?
ಅವರ ಚಿತ್ತವನ್ನು ವಿರೋಧಿಸಲು ಯಾರಿಗೆ ಸಾಧ್ಯ” ಎಂದು ನಿಮ್ಮಲ್ಲಿ ಒಬ್ಬನು ಕೇಳಬಹುದು. 20ಹುಲು
ಮಾನವಾ, ದೇವರೊಡನೆ ವಾದಿಸಲು ನೀನಾರು? ಮಡಿಕೆಯು ತನ್ನನ್ನು ಮಾಡಿದವನನ್ನು ನೋಡಿ,
“ನನ್ನನ್ನು ಹೀಗೇಕೆ ಮಾಡಿದೆ” ಎಂದು ಕೇಳುವುದುಂಟೇ? 21ಒಂದೇ ಮಣ್ಣಿನ ಮುದ್ದೆಯಿಂದ ಎರಡು
ಕುಡಿಕೆಗಳನ್ನು, ಅಂದರೆ ಒಂದನ್ನು ವಿಶೇಷ ಬಳಕೆಗೂ ಇನ್ನೊಂದನ್ನು ಸಾಮಾನ್ಯ ಬಳಕೆಗೂ ಮಾಡುವ
ಅಧಿಕಾರ ಕುಂಬಾರನಿಗೆ ಇಲ್ಲವೆ?

22 ದೇವರ ವಿಷಯದಲ್ಲೂ ಅಂತೆಯೇ. ದೇವರು ತಮ್ಮ ಕೋಪಾಗ್ನಿಯನ್ನು ಪ್ರದರ್ಶಿಸಿ, ತಮ್ಮ
ಶಕ್ತಿಯನ್ನು ಪ್ರಕಟಿಸಲು ಬಯಸಿದರು. ಹಾಗೆಮಾಡದೆ ವಿಕೋಪಕ್ಕೂ ವಿನಾಶಕ್ಕೂ ಮಾಡಲಾಗಿದ್ದ
ಕುಡಿಕೆಯನ್ನು ಹೋಲುವವರನ್ನು ಅತ್ಯಂತ ಸಹನೆಯಿಂದ ಸೈರಿಸಿಕೊಂಡರಾದರೆ, ಯಾರು ಏನನ್ನು ತಾನೇ
ಹೇಳಲಾದೀತು? 23ಈ ಮೂಲಕ ತಮ್ಮ ಕರುಣೆಯನ್ನು ಹೊಂದಲು ಅವರು ಮೊದಲೇ ತಯಾರಿಸಿದ್ದ
ಕುಡಿಕೆಯನ್ನು ಹೋಲುವವರಿಗೆ ದೇವರು ತಮ್ಮ ಮಹಿಮಾತಿಶಯವನ್ನು ತೋರ್ಪಡಿಸಲು ಇಚ್ಛಿಸಿದರು.
24ಯೆಹೂದ್ಯ ಜನಾಂಗದಿಂದ ಮಾತ್ರವಲ್ಲ, ಇತರ ಜನಾಂಗದಿಂದಲೂ ಕರೆಯಲಾಗಿರುವ ನಾವೇ ಈ
ಕರುಣೆಯ ಕುಡಿಕೆಗಳು. 25ಹೋಶೇಯನ ಗ್ರಂಥದಲ್ಲಿ ದೇವರೇ ಹೀಗೆ ಹೇಳಿದ್ದಾರೆ: “ನನ್ನ ಜನರಲ್ಲದವರನ್ನು
ನನ್ನ ಜನರೆಂದು ಕರೆಯುವೆನು. ನನಗೆ ಪ್ರಿಯವಲ್ಲದ ನಾಡನ್ನು ನನ್ನ ಪ್ರಿಯತಮೆ ಎಂದು ಕರೆಯುವೆನು.”
26“ ‘ನೀವು ನನ್ನ ಜನರಲ್ಲ’ ಎಂದು ಯಾವ ಸ್ಥಳದಲ್ಲಿ ಬರೆಯಲಾಗಿತ್ತೋ ಅದೇ ಸ್ಥಳದಲ್ಲಿ ‘ಅವರನ್ನು
ಜೀವಂತ ದೇವರ ಮಕ್ಕಳು’ ಎಂದು ಕರೆಯಲಾಗುವುದು.’ ” 27–28ಇಸ್ರಯೇಲಿನ ಬಗ್ಗೆ ಯೆಶಾಯನು
ಹೀಗೆಂದು ಘೋಷಿಸಿದ್ದಾನೆ: “ಶೀಘ್ರದಲ್ಲೇ ಸರ್ವೇಶ್ವರ ವಿಶ್ವದ ಲೆಕ್ಕಾಚಾರವನ್ನು ಪೂರ್ತಿಯಾಗಿ
ತೆಗೆದುಕೊಳ್ಳುವರು. ಇಸ್ರಯೇಲಿನ ಜನರು ಸಮುದ್ರ ತೀರದ ಮರಳಿನಷ್ಟು ಅಸಂಖ್ಯಾತರಾಗಿದ್ದರೂ ಅವರಲ್ಲಿ
ಕೆಲವರೇ ಜೀವೋದ್ಧಾರವನ್ನು ಹೊಂದುವರು.” 29ಅದೇ ಅಭಿಪ್ರಾಯದಿಂದ ಯೆಶಾಯನು ಮತ್ತೊಂದು
ವಚನದಲ್ಲಿ – “ಸರ್ವಶಕ್ತ ಸರ್ವೇಶ್ವರ ನಮ್ಮ ಸಂತತಿಯಲ್ಲಿ ಕೆಲವರನ್ನಾದರೂ ಉಳಿಸದೆ ಹೋಗಿದ್ದರೆ,
ಸೊದೋಮಿನ ಗತಿಯೇ ನಮಗಾಗುತ್ತಿತ್ತು. ಗೊಮೋರದ ದುರ್ಗತಿಯೇ ನಮ್ಮದಾಗುತ್ತಿತ್ತು,” ಎಂದು
ಹೇಳಿದ್ದಾನೆ.

## ವಿಶ್ವಾಸಶೂನ್ಯರಾದ ಯೆಹೂದ್ಯರು

30–31ಇಸ್ರಯೇಲರಾದರೋ ದೇವರೊಡನೆ ಸತ್ಸಂಬಂಧವನ್ನು ದೊರಕಿಸುವ ಧರ್ಮವನ್ನು
ಅರಸುತ್ತಿದ್ದರೂ ಅದನ್ನು ಕಂಡುಹಿಡಿದಿಲ್ಲ. 32ಇದಕ್ಕೆ ಕಾರಣವಾದರೂ ಏನು? ಅವರು ಸತ್ಕಾರ್ಯಗಳನ್ನು
ಆಧಾರವಾಗಿಟ್ಟುಕೊಂಡರೇ ಹೊರತು ವಿಶ್ವಾಸವನ್ನಲ್ಲ. ಆದ್ದರಿಂದಲೇ ಅವರು ಎಡವುಕಲ್ಲನ್ನು ಎಡವಿಬಿದ್ದರು.
ಪವಿತ್ರಗ್ರಂಥದಲ್ಲಿ ಹೀಗೆಂದು ಲಿಖಿತವಾಗಿದೆ:

“ಇಗೋ, ಎಡವಿ ನೆಲಕ್ಕುರುಳುವಂತೆ
  ಮಾಡುವ ಕಲ್ಲನ್ನೂ
ಮುಗ್ಗರಿಸಿ ಬೀಳುವಂತೆ
  ಮಾಡುವ ಬಂಡೆಯನ್ನೂ
ನಾನು ಸಿಯೋನಿನಲ್ಲಿ ಇರಿಸುವೆನು;
ಆತನಲ್ಲಿ ವಿಶ್ವಾಸವಿಡುವವನಾದರೋ
  ಎಂದಿಗೂ ಆಶಾಭಂಗಗೊಳ್ಳನು.”

**10** ಸಹೋದರರೇ, ನನ್ನ ಸ್ವಜನರಾದ ಇಸ್ರಯೇಲರು ಜೀವೋದ್ಧಾರ ಹೊಂದಬೇಕೆಂದೇ ನನ್ನ ಹಾರ್ದಿಕ
ಹಂಬಲ. ನಾನು ದೇವರಲ್ಲಿ ಮಾಡುವ ಪ್ರಾರ್ಥನೆಯೂ ಇದೇ. 2ದೇವರ ವಿಷಯದಲ್ಲಿ ಅವರು ಬಹಳ
ನಿಷ್ಠಾವಂತರು ಎಂದು ಒತ್ತಿಹೇಳಬಲ್ಲೆ. ಆದರೆ ಆ ನಿಷ್ಠೆ ನೈಜಜ್ಞಾನವನ್ನು ಆಧರಿಸಿಲ್ಲ. 3ದೇವರೊಡನೆ

ಸತ್ಸಂಬಂಧವನ್ನು ಪಡೆಯುವ ಮಾರ್ಗವನ್ನು ಅರಿಯದೆ ತಮ್ಮದೇ ಆದ ಧರ್ಮವನ್ನು ಸ್ಥಾಪಿಸಲು ಅವರು ಪ್ರಯತ್ನಿಸಿದರು. ಎಂದೇ ಅವರು ದೈವ ಸತ್ಸಂಬಂಧಕ್ಕೆ ಬಾಹಿರರಾದರು. [4]ದೇವರಲ್ಲಿ ವಿಶ್ವಾಸವಿಡುವ ಪ್ರತಿಯೊಬ್ಬನಿಗೂ ಆ ಸತ್ಸಂಬಂಧ ದೊರಕುವಂತೆ ಕ್ರಿಸ್ತಯೇಸು ಧರ್ಮಶಾಸ್ತ್ರವನ್ನು ಇತಿಗೊಳಿಸಿದರು.

### ಜಗತ್ತಿಗೆಲ್ಲಾ ಜೀವೋದ್ಧಾರ

5 ಧರ್ಮಶಾಸ್ತ್ರ ಪಾಲನೆಯಿಂದ ಲಭಿಸುವ ಸತ್ಸಂಬಂಧದ ಬಗ್ಗೆ ಮೋಶೆ ಹೀಗೆ ಬರೆದಿದ್ದಾನೆ: "ಧರ್ಮಶಾಸ್ತ್ರದ ನೇಮನಿಯಮಗಳನ್ನು ಪಾಲಿಸುವವನು ಅವುಗಳ ಮೂಲಕ ಜೀವಿಸುವನು." [6]ಆದರೆ ವಿಶ್ವಾಸದ ಮೂಲಕ ದೊರಕುವ ಸತ್ಸಂಬಂಧದ ಬಗ್ಗೆ ಹೀಗೆ ಬರೆಯಲಾಗಿದೆ: "ಕ್ರಿಸ್ತಯೇಸುವನ್ನು ಕೆಳಕ್ಕೆ ಕರೆತರಲು ಸ್ವರ್ಗಕ್ಕೆ ಏರಿ ಹೋಗುವವರು ಯಾರು?" ಎಂದಾಗಲೀ [7]"ಕ್ರಿಸ್ತಯೇಸುವನ್ನು ಸಾವಿನಿಂದ ಮೇಲಕ್ಕೆ ಕರೆತರಲು ಪಾತಾಳಕ್ಕೆ ಇಳಿದು ಹೋಗುವವರು ಯಾರು?" ಎಂದಾಗಲೀ ನಿನ್ನ ಮನದಲ್ಲಿ ನೀನು ಪ್ರಶ್ನಿಸಿಕೊಳ್ಳಬೇಕಾಗಿಲ್ಲ. [8]ಧರ್ಮಗ್ರಂಥವು ಹೇಳುವುದಿಷ್ಟೆ: ದೇವರ ವಾಕ್ಯ ನಿನ್ನ ಸಮೀಪದಲ್ಲೇ ಇದೆ. ಅದು ನಿನ್ನ ಬಾಯಲ್ಲೂ ಹೃದಯದಲ್ಲೂ ಇದೆ. ಅದೇ ನಾವು ನಿಮಗೆ ಬೋಧಿಸುವ ವಿಶ್ವಾಸದ ವಾಕ್ಯ. [9]"ಯೇಸುಸ್ವಾಮಿಯೇ ಪ್ರಭು" ಎಂದು ನೀನು ಬಾಯಿಂದ ನಿವೇದಿಸಿ, ಅವರನ್ನು ದೇವರು ಸಾವಿನಿಂದ ಪುನರುತ್ಥಾನಗೊಳಿಸಿದ್ದಾರೆಂದು ಹೃದಯದಿಂದ ವಿಶ್ವಾಸಿಸಿದರೆ ಜೀವೋದ್ಧಾರವನ್ನು ಹೊಂದುತ್ತೀಯೆ. [10]ಹೌದು, ಹೃದಯಪೂರ್ವಕವಾಗಿ ವಿಶ್ವಾಸಿಸುವವನು ದೇವರೊಡನೆ ಸತ್ಸಂಬಂಧವನ್ನು ಪಡೆಯುತ್ತಾನೆ; ಬಾಯಿಂದ ನಿವೇದಿಸುವವನು ಜೀವೋದ್ಧಾರ ಹೊಂದುತ್ತಾನೆ. [11]ಏಕೆಂದರೆ, "ಅವರಲ್ಲಿ ವಿಶ್ವಾಸ ಇಡುವ ಯಾರಿಗೂ ಆಶಾಭಂಗವಾಗುವುದಿಲ್ಲ," ಎಂದು ಪವಿತ್ರಗ್ರಂಥದಲ್ಲೇ ಹೇಳಲಾಗಿದೆ. [12]ಈ ವಿಷಯದಲ್ಲಿ ಯೆಹೂದ್ಯರು, ಯೆಹೂದ್ಯರಲ್ಲದವರು ಎಂಬ ಭೇದಭಾವವಿಲ್ಲ, ಸರ್ವರಿಗೂ ಒಬ್ಬರೇ ಪ್ರಭು. ತಮ್ಮನ್ನು ಬೇಡಿಕೊಳ್ಳುವ ಎಲ್ಲರಿಗೂ ಅವರು ಧಾರಾಳವಾಗಿ ವರದಾನವನ್ನು ನೀಡುತ್ತಾರೆ. [13]"ಪ್ರಭುವಿನ ನಾಮಸ್ಮರಣೆ ಮಾಡುವ ಪ್ರತಿಯೊಬ್ಬನೂ ಜೀವೋದ್ಧಾರವನ್ನು ಹೊಂದುತ್ತಾನೆ," ಎಂದು ಲಿಖಿತವಾಗಿದೆ.

14 ಪ್ರಭುವಿನಲ್ಲಿ ವಿಶ್ವಾಸವಿಲ್ಲದಿದ್ದರೆ ಅವರ ನಾಮಸ್ಮರಣೆ ಮಾಡುವುದಾದರೂ ಹೇಗೆ? ಅವರ ವಿಷಯವನ್ನು ಕುರಿತು ಕೇಳದಿದ್ದರೆ ಅವರನ್ನು ವಿಶ್ವಾಸಿಸುವುದಾದರೂ ಹೇಗೆ? ಬೋಧಿಸುವವರು ಇಲ್ಲದಿದ್ದರೆ ಅವರ ವಿಷಯವನ್ನು ಕುರಿತು ಕೇಳುವುದಾದರೂ ಹೇಗೆ? [15]ಬೋಧಿಸುವವರನ್ನು ಕಳುಹಿಸದೆ ಹೋದರೆ, ಅವರು ಶುಭಸಂದೇಶವನ್ನು ಬೋಧಿಸುವುದಾದರೂ ಹೇಗೆ? "ಶುಭಸಂದೇಶವನ್ನು ತರುವವರ ಬರುವಿಕೆ ಎಷ್ಟೋ ಶುಭದಾಯಕ," ಎಂದು ಪವಿತ್ರ ಗ್ರಂಥದಲ್ಲೇ ಬರೆಯಲಾಗಿದೆ. [16]ಆದರೂ ಈ ಶುಭಸಂದೇಶವನ್ನು ಎಲ್ಲರೂ ಅಂಗೀಕರಿಸಲಿಲ್ಲ. ಆದ್ದರಿಂದಲೇ ಯೆಶಾಯನು, "ಪ್ರಭುವೇ, ನಾವು ಸಾರಿದ ಸಂದೇಶವನ್ನು ನಂಬಿದವರು ಯಾರು?" ಎಂದು ಮೊರೆಯಿಟ್ಟಿದ್ದಾನೆ. [17]ಇಂತಿರಲು, ಶುಭಸಂದೇಶವನ್ನು ಆಲಿಸುವುದರಿಂದ ವಿಶ್ವಾಸ ಮೂಡುತ್ತದೆ; ಶುಭಸಂದೇಶ ಕ್ರಿಸ್ತಯೇಸುವನ್ನು ಬೋಧಿಸುವುದರ ಮೂಲಕ ಪ್ರಕಟವಾಗುತ್ತದೆ.

18 ಈಗ ನನ್ನದೊಂದು ಪ್ರಶ್ನೆ: "ಇಸ್ರಯೇಲರಿಗೆ ಶುಭಸಂದೇಶವನ್ನು ಕೇಳುವ ಸಂದರ್ಭ ಇರಲಿಲ್ಲವೆ?" ನಿಶ್ಚಯವಾಗಿ ಇತ್ತು. ಪವಿತ್ರ ಗ್ರಂಥದಲ್ಲಿ ಹೇಳಿರುವಂತೆ:

"ಸಾರುವವರ ಧ್ವನಿ ಜಗದಲ್ಲೆಲ್ಲಾ ಹರಡಿತು
ಅವರ ನುಡಿ ಭೂಮಿಯ ತುತ್ತತುದಿಯನ್ನು
ಮುಟ್ಟಿತು."

[19]ಹಾಗೆಂದಮೇಲೆ ಇಸ್ರಯೇಲರು ಆ ಶುಭಸಂದೇಶವನ್ನು ಅರ್ಥಮಾಡಿಕೊಳ್ಳಲಿಲ್ಲ ಎನ್ನೋಣವೇ? ಮೊದಲನೆಯದಾಗಿ, ಮೋಶೆಯ ಮಾತಿನಲ್ಲಿ ಉತ್ತರಿಸುವುದಾದರೆ: " 'ಜನಾಂಗ' ಎನಿಸಿ ಕೊಳ್ಳದವರನ್ನು ನೋಡಿ ನೀವು ಅಸೂಯೆಪಡುವಂತೆ ಮಾಡುತ್ತೇನೆ; ಮತಿಹೀನರೆನಿಸಿಕೊಂಡ ಜನಾಂಗವನ್ನು ನೋಡಿ ನೀವು ಕೆರಳುವಂತೆ ಮಾಡುತ್ತೇನೆ." [20]ಯೆಶಾಯನು ಮತ್ತಷ್ಟು ದಿಟ್ಟತನದಿಂದ ಈ ರೀತಿ ಹೇಳಿದ್ದಾನೆ:

"ನನ್ನನ್ನು ಅರಸದವರಿಗೂ
ನಾನು ಕಾಣಿಸಿಕೊಂಡೆ
ನನ್ನ ಬಗ್ಗೆ ವಿಚಾರಿಸದವರಿಗೂ

ನಾನು ಪ್ರತ್ಯಕ್ಷನಾದೆ."
21 ಆದರೆ ಇಸ್ರಯೇಲರನ್ನು ಕುರಿತು:
"ಅವಿಧೇಯರೂ ಪ್ರತಿಭಟಿಸುವವರೂ ಆದ ಈ ಜನಾಂಗವನ್ನು ದಿನವೆಲ್ಲಾ ನಾನು ಕೈ ಚಾಚಿ ಕರೆದೆ," ಎಂದು ಪ್ರವಾದಿಸಿದ್ದಾನೆ.

## ಇಸ್ರಯೇಲರೆಲ್ಲರೂ ತಿರಸ್ಕೃತರಲ್ಲ

**11** ಹಾಗಾದರೆ ದೇವರು ತಮ್ಮ ಜನರಾದ ಇಸ್ರಯೇಲರನ್ನು ತಿರಸ್ಕರಿಸಿದ್ದಾರೆ ಎಂದು ಹೇಳೋಣವೇ?
ಎಂದಿಗೂ ಇಲ್ಲ. ನಾನು ಸಹ ಇಸ್ರಯೇಲನು, ಅಬ್ರಹಾಮನ ಸಂತತಿಯವನು; ಬೆನ್ಯಮೀನ್ ಮನೆತನಕ್ಕೆ
ಸೇರಿದವನು. 2ದೇವರು ಮುಂಚಿತವಾಗಿಯೇ ಆರಿಸಿಕೊಂಡಿದ್ದ ತಮ್ಮ ಜನಾಂಗವನ್ನು ತಿರಸ್ಕರಿಸಲಿಲ್ಲ.
ಎಲೀಯನ ವಿಷಯವಾಗಿ ಪವಿತ್ರಗ್ರಂಥವು ಹೇಳಿರುವುದು ನಿಮಗೆ ತಿಳಿಯದೋ? 3ಆತನು ಇಸ್ರಯೇಲರ
ವಿರುದ್ಧ, "ಸರ್ವೇಶ್ವರಾ, ಈ ಜನರು ನಿಮ್ಮ ಪ್ರವಾದಿಗಳನ್ನು ಸಂಹರಿಸಿದ್ದಾರೆ. ನಿಮ್ಮ ಬಲಿಪೀಠಗಳನ್ನು
ಕೆಡವಿಹಾಕಿದ್ದಾರೆ; ಉಳಿದಿರುವವನು ನಾನೊಬ್ಬನೇ. ನನ್ನನ್ನೂ ಕೊಲ್ಲಲು ಯತ್ನಿಸುತ್ತಿದ್ದಾರೆ," ಎಂದು
ದೇವರಿಗೆ ದೂರಿತ್ತನು. 4ಅದಕ್ಕೆ ಆತನಿಗೆ ದೊರೆತ ಉತ್ತರವಾದರೂ ಏನು? "ಬಾಳ್‍ದೇವತೆಯ ವಿಗ್ರಹಕ್ಕೆ
ಅಡ್ಡಬೀಳದ ಏಳು ಸಾವಿರ ಜನರನ್ನು ನನಗಾಗಿ ಉಳಿಸಿಕೊಂಡಿದ್ದೇನೆ," ಎಂದಲ್ಲವೆ? 5ಅಂತೆಯೇ,
ದೈವಾನುಗ್ರಹದಿಂದ ಆಯ್ಕೆಯಾದ ಸ್ವಲ್ಪಮಂದಿ ಈಗಲೂ ಉಳಿದಿದ್ದಾರೆ. 6ಅವರು ಆಯ್ಕೆಯಾದುದು ತಮ್ಮ
ಸತ್ಕಾರ್ಯಗಳ ಆಧಾರದಿಂದಲ್ಲ, ದೈವಾನುಗ್ರಹದಿಂದಲೇ. ಇಲ್ಲದಿದ್ದರೆ ದೈವಾನುಗ್ರಹ ನಿಜವಾಗಿ ದೈವಾನುಗ್ರಹ
ಎನಿಸಿಕೊಳ್ಳುತ್ತಿರಲಿಲ್ಲ.
7 ಇದರ ಅರ್ಥವಾದರೂ ಏನು? ಇಸ್ರಯೇಲರು ಅರಸುತ್ತಿದ್ದುದು ಅವರಿಗೆ ದೊರಕಲಿಲ್ಲ.
ಆಯ್ಕೆಯಾದವರಿಗೆ ಮಾತ್ರ ಅದು ದೊರಕಿತು. ಮಿಕ್ಕವರು ಕಠಿಣ ಹೃದಯಿಗಳಾದರು. 8"ದೇವರು ಅವರಿಗೆ
ಜಡಸ್ವಭಾವವನ್ನು ಕೊಟ್ಟರು. ಇಂದಿನವರೆಗೂ ಅವರು ಕಣ್ಣಿದ್ದೂ ಕಾಣರು, ಕಿವಿಯಿದ್ದೂ ಕೇಳರು," ಎಂದು
ಲಿಖಿತವಾಗಿದೆ. ಇದಲ್ಲದೆ ದಾವೀದನು ಇಂತೆಂದಿದ್ದಾನೆ:
9"ಅವರ ಭೋಜನವೇ ಅವರಿಗೆ ಬಲೆಯೂ
ಜಾಲವೂ ಆಗಲಿ
ಯಾತನೆಯೂ ಪತನವೂ ಆಗಿ ಪರಿಣಮಿಸಲಿ.
10 ಅವರ ಕಣ್ಣು ಕುರುಡಾಗಲಿ
ನಿರಂತರ ಭಾರದಿಂದ ಬೆನ್ನು ಗೂನಾಗಲಿ."
11 ಹಾಗಾದರೆ ಇಸ್ರಯೇಲರು ಮೇಲೇಳದಂತೆ ಮುಗ್ಗರಿಸಿ ಬಿದ್ದರು ಎಂದು ಹೇಳೋಣವೆ?
ಎಂದಿಗೂ ಇಲ್ಲ. ಅವರ ಅಪರಾಧದ ನಿಮಿತ್ತ ಇತರರಿಗೆ ಉದ್ಧಾರ ಲಭಿಸುವಂತಾಯಿತು. ಹೀಗೆ ಇತರರನ್ನು
ನೋಡಿ ಅವರೇ ಅಸೂಯೆ ಪಡುವಂತಾಯಿತು. 12ಅವರ ಅಪರಾಧ ಜಗತ್ತಿಗೆಲ್ಲ ಸೌಭಾಗ್ಯವನ್ನೂ ಅವರ
ಅಪಜಯವು ಇತರರಿಗೆಲ್ಲಾ ಆಶೀರ್ವಾದವನ್ನೂ ತರಲು ಕಾರಣವಾದರೆ, ಅವರ ಸಂಪೂರ್ಣ ಪರಿವರ್ತನೆ
ಮತ್ತೆಷ್ಟೋ ಕಲ್ಯಾಣವನ್ನು ಉಂಟುಮಾಡಬೇಕಲ್ಲವೆ?

### ಕಸಿಮಾಡಲಾದ ಸಸಿಗಳು ನೀವು

13 ಈಗ ನಾನು ಇಸ್ರಯೇಲರಲ್ಲದ ನಿಮ್ಮನ್ನು ಉದ್ದೇಶಿಸಿ ಹೇಳುತ್ತೇನೆ: ನಾನು ನಿಮ್ಮಂಥ ಅನ್ಯ
ಜನರಿಗೆ ಪ್ರೇಷಿತನಾಗಿ ಕಳುಹಿಸಲ್ಪಟ್ಟವನು. ಇದರ ಬಗ್ಗೆ ಹೆಮ್ಮೆಪಡುತ್ತೇನೆ. 14ಆದರೂ ಈ ಸೇವೆಯ ಮೂಲಕ
ನನ್ನ ಸ್ವಜನರಲ್ಲಿ ಪ್ರೇಮಾಸೂಯೆಯನ್ನು ಮೂಡಿಸಿ ಅವರಲ್ಲಿ ಬಹುಶಃ ಕೆಲವರನ್ನಾದರೂ ಉದ್ಧಾರದ
ಮಾರ್ಗಕ್ಕೆ ತರಲು ಸಾಧ್ಯವಾದೀತೆಂದು ನಂಬುತ್ತೇನೆ. 15ಇಸ್ರಯೇಲರು ತಿರಸ್ಕೃತರಾದ್ದರಿಂದ ಜಗತ್ತು

ದೇವರೊಡನೆ ಸಂಧಾನವಾಗಲು ಸಾಧ್ಯವಾಯಿತಾದರೆ ಅವರು ಸ್ವೀಕೃತರಾಗುವಾಗ ಇನ್ನೇನು ತಾನೆ ಸಂಭವಿಸದು! ಸತ್ತವರು ಜೀವಕ್ಕೆ ಎದ್ದು ಬಂದಂತಾಗುವುದಲ್ಲವೆ?

16 ಹಿಟ್ಟಿನಲ್ಲಿ ಮೊದಲ ಹಿಡಿ ನೈವೇದ್ಯ ಆದಮೇಲೆ ಹಿಟ್ಟಿನ ರಾಶಿಯೆಲ್ಲಾ ನೈವೇದ್ಯ ಆದಂತೆಯೇ. ಅಂತೆಯೇ, ಬೇರು ದೇವರದಾಗಿದ್ದ ಮೇಲೆ ರೆಂಬೆಗಳೂ ದೇವರಿಗೆ ಸೇರಿದವು ಅಲ್ಲವೆ? [17]ಈಗ ಉತ್ತಮ ತಳಿಯ ಓಲಿವ್ ಮರದಿಂದ ಕೆಲವು ರೆಂಬೆಗಳನ್ನು ಕಡಿದು ಹಾಕಿ ಆ ತಾವಿನಲ್ಲಿ ಕಾಡು ಓಲಿವ್ ಮರದ ರೆಂಬೆಯನ್ನು ಕಸಿ ಮಾಡಲಾಗಿದೆ. ಅನ್ಯಜನರಾದ ನೀನು ಆ ಕಾಡುಮರದ ರೆಂಬೆಯಂತಿರುವೆ; ಕಸಿಮಾಡಿರುವುದರಿಂದ ರಸವತ್ತಾದ ಆ ಬೇರಿನಿಂದ ಈಗ ಪೋಷಣೆ ಪಡೆಯುತ್ತಿರುವೆ. [18]ಹೀಗಿರಲಾಗಿ, ಕಡಿದು ಹಾಕಿದ ರೆಂಬೆಗಳಂತಿರುವ ಇಸ್ರಯೇಲರನ್ನು ಕಡೆಗಣಿಸುತ್ತಾ ಹೆಮ್ಮೆಪಡಬೇಡ. ಹೆಮ್ಮೆಪಟ್ಟರೂ ನೀನು ಕೇವಲ ರೆಂಬೆ ಮಾತ್ರ, ಬೇರಿಗೆ ಆಧಾರ ನೀನಲ್ಲ. ನಿನಗೆ ಆಧಾರ ಬೇರು ಎಂಬುದನ್ನು ನೆನಪಿನಲ್ಲಿಡು.

19 ಒಂದು ವೇಳೆ, "ನಾನು ಕಸಿಕಟ್ಟಿಸಿಕೊಳ್ಳಬೇಕೆಂದೇ ರೆಂಬೆಗಳನ್ನು ಕಡಿದು ಹಾಕಲಾಗಿದೆ" ಎಂದು ನೀನು ಹೇಳಬಹುದು. [20]ಅದು ಸರಿಯೆ. ಅವರ ಅವಿಶ್ವಾಸದ ಕಾರಣದಿಂದ ಅವರನ್ನು ಕಡಿದುಹಾಕಲಾಯಿತು. ನೀನು ದೃಢವಾಗಿ ನಿಂತಿರುವುದಾದರೋ ವಿಶ್ವಾಸದ ಪ್ರಯುಕ್ತವೇ. ಆದ್ದರಿಂದ ಗರ್ವಪಡಬೇಡ. ಭಯಭಕ್ತಿಯಿಂದಿರು. [21]ದೇವರು ಹುಟ್ಟುರೆಂಬೆಗಳನ್ನೇ ಉಳಿಸಲಿಲ್ಲ ಎಂದಮೇಲೆ ನಿನ್ನನ್ನು ಉಳಿಸುವರೆಂದು ತಿಳಿಯುವೆಯಾ? [22]ಇಲ್ಲ, ದೇವರ ಕರುಣೆ ಹಾಗೂ ಕಠಿಣತೆಯನ್ನು ಗಮನಿಸು. ಬಿದ್ದವರತ್ತ ಕಾಠಿಣ್ಯವನ್ನೂ ನಿನ್ನತ್ತ ಕರುಣೆಯನ್ನೂ ತೋರಿಸಿದ್ದಾರೆ. ನೀನು ಅವರ ಕರುಣೆಯನ್ನು ಆಶ್ರಯಿಸಿ ನಡೆಯಬೇಕು. ಇಲ್ಲವಾದರೆ ನಿನ್ನನ್ನು ಆ ರೆಂಬೆಗಳಂತೆ ಕಡಿದುಹಾಕಲಾಗುತ್ತದೆ. [23]ಇಸ್ರಯೇಲರು ತಮ್ಮ ಅವಿಶ್ವಾಸವನ್ನು ತ್ಯಜಿಸಿದರೆ ಆಗ ಅವರನ್ನೂ ಕಸಿಮಾಡಲಾಗುವುದು. ಹಾಗೆ ಕಸಿಮಾಡಲು ದೇವರು ಸಮರ್ಥರು. [24]ನೀನು ಕಾಡು ಓಲಿವ್ ಮರದಿಂದ ಕಡಿದ ರೆಂಬೆ. ಉತ್ತಮ ತಳಿಯ ಓಲಿವ್ ಮರಕ್ಕೆ ಕೃತಕವಾಗಿ ಕಸಿಕಟ್ಟಲಾಗಿರುವೆ. ಇಸ್ರಯೇಲರಾದರೋ ಉತ್ತಮ ತಳಿಯ ಓಲಿವ್ ಮರದಲ್ಲೇ ಹುಟ್ಟಿ ಬೆಳೆದ ರೆಂಬೆಗಳು. ಅದೇ ಮರದಲ್ಲಿ ಹುಟ್ಟಿ ಬೆಳೆದ ರೆಂಬೆಗಳನ್ನು ಕಡಿದು ಮತ್ತೆ ಅದಕ್ಕೆ ಕಸಿಕಟ್ಟುವುದು ಎಷ್ಟೋ ಸುಲಭವಲ್ಲವೆ?

## ಸರ್ವರ ಮೇಲೂ ಸರ್ವೇಶ್ವರನ ಕರುಣೆ

25 ಪ್ರಿಯ ಸಹೋದರರೇ, ನೀವೇ ಬುದ್ಧಿವಂತರೆಂದು ಉಬ್ಬಿಹೋಗಬೇಡಿ. ನಿಮಗೊಂದು ನಿಗೂಢ ರಹಸ್ಯವನ್ನು ತಿಳಿಸಬಯಸುತ್ತೇನೆ. ಅದೇನೆಂದರೆ, ಇಸ್ರಯೇಲರ ಮೊಂಡುತನವು ತಾತ್ಕಾಲಿಕವಾದುದು. ಇಸ್ರಯೇಲರಲ್ಲದವರು ಪೂರ್ಣ ಸಂಖ್ಯೆಯಲ್ಲಿ ದೇವರ ಬಳಿಗೆ ಬರುವ ತನಕ ಮಾತ್ರ ಅದು ಇರುತ್ತದೆ. [26]ಅನಂತರ ಇಸ್ರಯೇಲ್ ಜನಾಂಗವೆಲ್ಲವೂ ಜೀವೋದ್ಧಾರವನ್ನು ಹೊಂದುವುದು. ಇದಕ್ಕೆ ಆಧಾರವಾಗಿ ಪವಿತ್ರಗ್ರಂಥದಲ್ಲಿ ಹೀಗೆ ಬರೆಯಲಾಗಿದೆ:

"ಲೋಕೋದ್ಧಾರಕನು ಬರುವನು
ಸಿಯೋನಿನಿಂದ;
ಅಧರ್ಮತೆಯನು ನೀಗಿಸುವನು
ಯಕೋಬ ವಂಶದಿಂದ.
[27] ನಾನು ಪರಿಹರಿಸುವೆನು ಅವರ ಪಾಪಗಳನು
ಅವರೊಡನೆ ಮಾಡಿಕೊಳ್ಳುವೆನಾಗ
ಒಡಂಬಡಿಕೆಯನು."

[28] ಶುಭಸಂದೇಶವನ್ನು ತಿರಸ್ಕರಿಸಿದ್ದರಿಂದ ಇಸ್ರಯೇಲರು ದೇವರಿಗೆ ಶತ್ರುಗಳಾದರು. ಹೀಗಾದುದು ನಿಮ್ಮ ಹಿತಕ್ಕೋಸ್ಕರವೆ. ದೇವರಿಂದ ಆಯ್ಕೆ ಆದವರಾದ್ದರಿಂದ, ಪಿತಾಮಹ ಅಬ್ರಹಾಮ್, ಇಸಾಕ್ ಮತ್ತು ಯಕೋಬರ ನಿಮಿತ್ತ ಅವರು ದೇವರಿಗೆ ಮಿತ್ರರಾದರು. [29]ದೇವರು ತಾವೇ ನೀಡುವ ವರಗಳನ್ನಾಗಲಿ, ಕೊಡುವ ಕರೆಯನ್ನಾಗಲಿ ಹಿಂತೆಗೆದುಕೊಳ್ಳುವವರಲ್ಲ. [30]ಇಸ್ರಯೇಲರಲ್ಲದ ನೀವು ಹಿಂದೊಮ್ಮೆ ದೇವರಿಗೆ ಅವಿಧೇಯರಾಗಿದ್ದಿರಿ. ಆದರೆ ಈಗ ಇಸ್ರಯೇಲರ ಅವಿಧೇಯತೆಯ ನಿಮಿತ್ತ ದೇವರ ದಯೆಯನ್ನು

ಹೊಂದಿದ್ದೀರಿ. [31]ಅದೇ ಪ್ರಕಾರ ಅವರು ಈಗ ಅವಿಧೇಯರಾಗಿದ್ದರೂ ನೀವು ಹೊಂದಿದ ಕರುಣೆಯ ನಿಮಿತ್ತ
ಅವರೂ ಕರುಣೆಯನ್ನು ಹೊಂದುವರು. [32]ಏಕೆಂದರೆ, ಸರ್ವರೂ ತಮ್ಮ ಕರುಣೆಯನ್ನು ಸವಿಯುವಂತೆ
ದೇವರು ಎಲ್ಲರನ್ನು ಅವಿಧೇಯತೆ ಎಂಬ ಬಂಧನಕ್ಕೆ ಒಳಪಡಿಸಿದ್ದಾರೆ.

**ಸರ್ವವೂ ಸರ್ವೇಶ್ವರನದೇ**

33 ದೇವರ ಸಿರಿಸಂಪತ್ತು, ಜ್ಞಾನವಿಜ್ಞಾನ ಎಷ್ಟು ಅಗಾಧ! ಪರಿಶೋಧನೆಗೂ ನಿಲುಕದ ಅವರ
ನಿರ್ಣಯ ಎಷ್ಟು ಅಗಮ್ಯ! ಅವರ ನಿಯೋಜನೆಗಳು ಗ್ರಹಿಕೆಗೂ ಎಷ್ಟು ಅಸಾಧ್ಯ!

[34] "ಪ್ರಭುವಿನ ಮನಸ್ಸನು ಅರಿತವರಾರು?
ಅವರಿಗೆ ಉಪದೇಶಿಸುವವರಾರು?
[35] ಮೊದಲೇ ಅವರ ಬಳಿ ಕೊಟ್ಟಿಟ್ಟವರಾರು?
ಹೀಗೆ ಅವರಿಂದ ಪ್ರತಿಫಲ ಪಡೆದವರಾರು?

[36]ಸಮಸ್ತವೂ ಉಂಟಾಗುವುದು ಅವರಿಂದಲೇ; ಮುಂದುವರಿಯುವುದೂ ಅವರ ಮುಖಾಂತರವೇ;
ಇರುವುದೂ ಅವರಿಗೋಸ್ಕರವೇ. ಆ ಪ್ರಭುವಿಗೆ ಯುಗಯುಗಾಂತರಕ್ಕೂ ಸ್ತುತಿಸ್ತೋತ್ರ ಸಲ್ಲಲಿ. ಆಮೆನ್.

**ಕ್ರಿಸ್ತಯೇಸುವಿನಲ್ಲಿ ನವಜೀವನ**

**12** ಆದುದರಿಂದ ಸಹೋದರರೇ, ದೇವರ ಅಪಾರ ಕೃಪೆಯನ್ನು ನಿನ್ನ ನೆನಪಿಗೆ ತಂದು ನಾನು
ಬೇಡಿಕೊಳ್ಳುವುದೇನೆಂದರೆ: ನಿಮ್ಮನ್ನೇ ದೇವರಿಗೆ ಮೀಸಲಾದ, ಮೆಚ್ಚುಗೆಯಾದ, ಸಜೀವವಾದ ಬಲಿಯಾಗಿ
ಸಮರ್ಪಿಸಿಕೊಳ್ಳಿರಿ. ಇದೇ ನೀವು ಸಲ್ಲಿಸಬೇಕಾದ ನಿಜವಾದ ಅರಾಧನೆ. [2]ಇಹಲೋಕದ ಆಚಾರವಿಚಾರಗಳಿಗೆ
ಮಾರುಹೋಗಬೇಡಿ. ಬದಲಿಗೆ, ಮಾನಸಾಂತರಗೊಂಡು ನೂತನ ಜೀವಿಗಳಾಗಿ ಬಾಳಿರಿ. ಆಗ ನೀವು
ದೇವರ ಚಿತ್ತಾನುಸಾರ ಯಾವುದು ಉತ್ತಮವಾದುದು, ಯಾವುದು ಉನ್ನತವಾದುದು, ಯಾವುದು
ಉತ್ಕೃಷ್ಟವಾದುದು ಎಂಬುದನ್ನು ಅರಿತುಕೊಳ್ಳುವಿರಿ.

3 ದೇವರು ನನಗೆ ದಯಪಾಲಿಸಿರುವ ಸೇವೆಯ ನಿಮಿತ್ತ ನಾನು ನಿಮಗೆ ಹೇಳುವ ಬುದ್ಧಿಮಾತಿದು:
ನಿಮ್ಮಲ್ಲಿ ಯಾರೂ ತನ್ನನ್ನೇ ಅತಿಯಾಗಿ ಭಾವಿಸಿಕೊಳ್ಳದಿರಲಿ. ದೇವರು ತನಗೆ ಇತ್ತಿರುವ ವಿಶ್ವಾಸದ
ಪರಿಮಾಣದ ಮೇರೆಗೆ ಪ್ರತಿಯೊಬ್ಬನೂ ತನ್ನ ಬಗ್ಗೆ ಸರಿಯಾದ ಅಭಿಪ್ರಾಯ ಹೊಂದಿರಲಿ. [4]ನಮಗಿರುವುದು
ಒಂದೇ ದೇಹ. ಆದರೂ ಅದರಲ್ಲಿ ಅನೇಕ ಅಂಗಗಳಿವೆ. ಈ ಅಂಗಗಳೆಲ್ಲವೂ ತಮ್ಮದೇ ಆದ ನಿರ್ದಿಷ್ಟ
ಕಾರ್ಯವನ್ನು ನಿರ್ವಹಿಸುತ್ತವೆ. [5]ಅಂತೆಯೇ, ನಾವು ಅನೇಕ ಮಂದಿ ಇದ್ದರೂ ಕ್ರಿಸ್ತಯೇಸುವಿನಲ್ಲಿ
ನಾವೆಲ್ಲರೂ ಒಂದೇ ದೇಹವಾಗಿದ್ದೇವೆ. ಒಬ್ಬರಿಗೊಬ್ಬರು ದೇಹದ ವಿವಿಧ ಅಂಗಗಳಂತೆ
ಹೊಂದಿಕೊಂಡಿದ್ದೇವೆ. [6]ದೇವರು ಅನುಗ್ರಹಿಸಿರುವ ಪ್ರಕಾರ ನಾವು ಬೇರೆ ಬೇರೆ ವರಗಳನ್ನು ಹೊಂದಿದ್ದೇವೆ.
ನಾವು ಹೊಂದಿರುವ ವರವು ಪ್ರವಾದನೆಯ ವರವಾಗಿದ್ದರೆ ನಮ್ಮ ವಿಶ್ವಾಸಕ್ಕೆ ಅನುಗುಣವಾಗಿ ಅದನ್ನು
ಉಪಯೋಗಿಸಬೇಕು. [7]ಸೇವಕನು ಸೇವೆಯಲ್ಲಿಯೂ ಬೋಧಕನು ಬೋಧಿಸುವುದರಲ್ಲಿಯೂ
[8]ಉಪದೇಶಕನು ಉಪದೇಶಿಸುವುದರಲ್ಲಿಯೂ ನಿರತನಾಗಿರಲಿ. ದಾನಮಾಡುವವನು ಧಾರಾಳವಾಗಿ ದಾನ
ಮಾಡಲಿ. ಅಧಿಕಾರ ನಡೆಸುವವನು ನಿಷ್ಠೆಯಿಂದ ನಡೆಸಲಿ. ಕರುಣಾಪೂರಿತ ಕಾರ್ಯಗಳನ್ನು
ಕೈಗೊಳ್ಳುವವನು ಹರ್ಷಚಿತ್ತನಾಗಿರಲಿ.

**ನವಜೀವನಕ್ಕೆ ತಕ್ಕ ನಡತೆ**

9 ನಿಮ್ಮ ಪ್ರೀತಿ ನಿಷ್ಕಪಟವಾಗಿರಲಿ. ಕೆಟ್ಟದ್ದನ್ನು ದ್ವೇಷಿಸಿರಿ. ಒಳ್ಳೆಯದನ್ನು ಕೈಬಿಡದಿರಿ.
[10]ಸೋದರಭಾವನೆಯಿಂದ ಒಬ್ಬರನ್ನೊಬ್ಬರು ಹೃತ್ಪೂರ್ವಕವಾಗಿ ಪ್ರೀತಿಸಿರಿ. ಗೌರವ ತೋರಿಸುವುದರಲ್ಲಿ
ಒಬ್ಬರಿಗಿಂತ ಒಬ್ಬರು ಮುಂದಾಗಿರಿ. [11]ಪ್ರಭುವಿನ ಸೇವೆಯಲ್ಲಿ ಆಲಸಿಗಳಾಗದೆ ಅತ್ಯಾಸಕ್ತರಾಗಿರಿ. [12]ನಂಬಿಕೆ

ನಿರೀಕ್ಷೆಯನ್ನು ಹೊಂದಿರುವ ನೀವು ಉಲ್ಲಾಸದಿಂದಿರಿ. ಸಂಕಟ ಬಂದಾಗ ಸಹನೆಯಿಂದಿರಿ. ಬೇಸರಗೊಳ್ಳದೆ
ಪ್ರಾರ್ಥನೆ ಮಾಡಿರಿ. [13]ಕೊರತೆಯಲ್ಲಿರುವ ದೇವಜನರಿಗೆ ನೆರವು ನೀಡಿರಿ. ಅತಿಥಿ ಸತ್ಕಾರದಲ್ಲಿ ತತ್ಪರರಾಗಿರಿ.
14 ನಿಮ್ಮನ್ನು ಹಿಂಸಿಸುವವರನ್ನು ಆಶೀರ್ವದಿಸಿರಿ. ಹೌದು, ಶಪಿಸದೆ ಆಶೀರ್ವದಿಸಿರಿ.
[15]ಸಂತೋಷಪಡುವವರೊಂದಿಗೆ ಸಂತೋಷಪಡಿರಿ; ದುಃಖಿಸುವವರೊಡನೆ ದುಃಖಿಸಿರಿ. [16]ನಿಮ್ಮ ನಿಮ್ಮಲ್ಲಿ
ಸಾಮರಸ್ಯವಿರಲಿ. ದೊಡ್ಡಸ್ತಿಕೆಯಿಂದ ವರ್ತಿಸಬೇಡಿ. ದೀನದಲಿತರೊಡನೆ ಗೆಳೆತನ ಬೆಳೆಸಿರಿ. ನೀವೇ
ಜಾಣರೆಂದು ಭಾವಿಸದಿರಿ. [17]ಕೇಡಿಗೆ ಪ್ರತಿಯಾಗಿ ಕೇಡನ್ನು ಮಾಡದಿರಿ. ಎಲ್ಲರ ದೃಷ್ಟಿಯಲ್ಲಿ ಯಾವುದು
ಮಾನ್ಯವೋ ಅದನ್ನೇ ಮಾಡಿರಿ. [18]ಸಾಧ್ಯವಾದ ಮಟ್ಟಿಗೆ ಸರ್ವರೊಂದಿಗೂ ಸಮಾಧಾನದಿಂದ ಬಾಳಿರಿ.
[19]ಪ್ರಿಯರೇ, ಮುಯ್ಯಿಗೆ ಮುಯ್ಯಿ ತೀರಿಸಬೇಡಿ. ಅದನ್ನು ದೇವರಿಗೇ ಬಿಟ್ಟುಬಿಡಿ. ಏಕೆಂದರೆ, "ಮುಯ್ಯಿಗೆ
ಮುಯ್ಯಿ ತೀರಿಸುವುದು ನನ್ನ ಕೆಲಸ, ಎಲ್ಲರಿಗೂ ತಕ್ಕ ಪ್ರತಿಫಲವನ್ನು ಕೊಡುವವನು ನಾನೇ," ಎಂಬ
ಪ್ರಭುವಿನ ವಾಕ್ಯ ಪವಿತ್ರಗ್ರಂಥದಲ್ಲಿ ಲಿಖಿತವಾಗಿದೆ. [20]ಅದಕ್ಕೆ ಬದಲು, ನಿನ್ನ ಶತ್ರು ಹಸಿದಿದ್ದರೆ ಊಣಲು
ಬಡಿಸು; ಬಾಯಾರಿದ್ದರೆ ಕುಡಿಯಲು ಕೊಡು. ಹೀಗೆ ಮಾಡುವುದರಿಂದ ಅವನ ತಲೆಯ ಮೇಲೆ
ಉರಿಯುವ ಕೆಂಡಗಳನ್ನು ಸುರಿಸಿದಂತಾಗುವುದು. [21]ಕೇಡಿಗೆ ಸೋಲದೆ, ಒಳಿತಿನಿಂದ ಕೇಡನ್ನು ಸೋಲಿಸು.

## ಸರ್ಕಾರಕ್ಕೆ ಸಲ್ಲತಕ್ಕ ಸೇವೆ

**13** ಪ್ರತಿಯೊಬ್ಬನು ತನ್ನ ಮೇಲಿನ ಅಧಿಕಾರಿಗಳಿಗೆ ಅಧೀನನಾಗಿರಬೇಕು. ಅಧಿಕಾರವೆಲ್ಲವೂ ಬರುವುದು
ದೇವರಿಂದಲೇ. ಈಗಿರುವ ಅಧಿಕಾರಿಗಳೂ ದೇವರಿಂದಲೇ ನೇಮಕಗೊಂಡವರು. [2]ಆದುದರಿಂದ
ಅಧಿಕಾರವನ್ನು ವಿರೋಧಿಸುವವರು ದೇವರ ಆ ನೇಮಕವನ್ನೇ ವಿರೋಧಿಸುತ್ತಾರೆ. ಅಂಥವರು ಶಿಕ್ಷೆಗೆ
ಗುರಿಯಾಗುತ್ತಾರೆ. [3]ಕೆಟ್ಟದ್ದನ್ನು ಮಾಡುವವನೇ ಹೊರತು ಒಳ್ಳೆಯದನ್ನು ಮಾಡುವವನು ಅಧಿಕಾರಿಗೆ
ಭಯಪಡಬೇಕಾಗಿಲ್ಲ. ಅಧಿಕಾರಿಯ ಮುಂದೆ ನಿರ್ಭಯನಾಗಿರಲು ನಿನಗೆ ಇಷ್ಟವಿದ್ದರೆ ಒಳ್ಳೆಯದನ್ನೇ
ಮಾಡುತ್ತಿರು. ಆಗ ಆತನು ನಿನ್ನನ್ನು ಪ್ರಶಂಸಿಸುವನು. [4]ಆತನು ನಿನ್ನ ಹಿತಕ್ಕಾಗಿ ದೇವರಿಂದ ನೇಮಕಗೊಂಡ
ದಾಸನಾಗಿದ್ದಾನೆ. ಆದರೆ ನೀನು ಕೆಟ್ಟದ್ದನ್ನು ಮಾಡಿದೆ ಆದರೆ ಭಯಪಡಲೇಬೇಕು. ಏಕೆಂದರೆ, ಆತನ
ಕೈಯಲ್ಲಿರುವ ಅಧಿಕಾರ ದಂಡವು ವ್ಯರ್ಥವಾದುದೇನೂ ಅಲ್ಲ. ದೇವರ ದಾಸನಾಗಿರುವ ಆತನು ಕೆಟ್ಟದ್ದನ್ನು
ಮಾಡುವವರಿಗೆ ದೇವರ ದಂಡನೆಯನ್ನು ವಿಧಿಸುತ್ತಾನೆ. [5]ಆದ್ದರಿಂದ ನಿಮ್ಮ ಅಧಿಕಾರಿಗಳಿಗೆ ಅಧೀನರಾಗಿರಿ.
ಕೇವಲ ದಂಡನೆಯನ್ನು ತಪ್ಪಿಸಿಕೊಳ್ಳುವ ಸಲುವಾಗಿ ಅಲ್ಲ, ನಿಮ್ಮ ಮನಸ್ಸಾಕ್ಷಿಯ ಸಲುವಾಗಿ.
6 ನೀವು ಕಂದಾಯವನ್ನು ಕಟ್ಟುತ್ತಿರುವುದೂ ಈ ಕಾರಣದಿಂದಲೇ. ಅಧಿಕಾರಿಗಳು ದೇವರ ದಾಸರು.
ಅವರು ತಮ್ಮ ಪ್ರಸ್ತುತ ಕಾರ್ಯಗಳನ್ನು ನಿರ್ವಹಿಸುವಾಗ ದೇವರ ಸೇವೆಯನ್ನು ಮಾಡುತ್ತಾರೆ. [7]ಆದ್ದರಿಂದ
ಸಲ್ಲಿಸಬೇಕಾದುದನ್ನು ಅವರಿಗೆ ಸಲ್ಲಿಸಿರಿ. ಯಾರಿಗೆ ಕಂದಾಯವೋ ಅವರಿಗೆ ಕಂದಾಯವನ್ನು, ಯಾರಿಗೆ
ಸುಂಕವೋ ಅವರಿಗೆ ಸುಂಕವನ್ನು, ಯಾರಿಗೆ ವಿಧೇಯತೆಯೋ ಅವರಿಗೆ ವಿಧೇಯತೆಯನ್ನು, ಯಾರಿಗೆ
ಗೌರವವೋ ಅವರಿಗೆ ಗೌರವವನ್ನು ಸಲ್ಲಿಸಿರಿ.

## ಕ್ರಿಸ್ತಂಬರರಾಗಿರಿ

8 ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬ ಋಣವೇ ಹೊರತು ಬೇರೆ ಯಾವ ವಿಧವಾದ ಋಣವೂ
ನಿಮಗಿರಬಾರದು. ಏಕೆಂದರೆ ಪರರನ್ನು ಪ್ರೀತಿಸುವವನು ಧರ್ಮಶಾಸ್ತ್ರವನ್ನು ಪೂರ್ಣವಾಗಿ
ನೆರವೇರಿಸಿದವನು. [9]"ವ್ಯಭಿಚಾರ ಮಾಡಬೇಡ, ಕೊಲಬೇಡ, ಕಳಬೇಡ, ದುರಾಶೆ ಪಡಬೇಡ," – ಈ
ಮುಂತಾದ ಆಜ್ಞೆಗಳೆಲ್ಲವೂ "ನೀನು ನಿನ್ನನ್ನೇ ಪ್ರೀತಿಸಿಕೊಳ್ಳುವಂತೆ ನಿನ್ನ ನೆರೆಯವರನ್ನೂ ಪ್ರೀತಿಸು," ಎಂಬ
ಒಂದೇ ಆಜ್ಞೆಯಲ್ಲಿ ಅಡಗಿವೆ. [10]ಪ್ರೀತಿಯು ಪರರಿಗೆ ಕೇಡು ಬಗೆಯದು. ಆದಕಾರಣ ಪ್ರೀತಿಯೇ
ಧರ್ಮಶಾಸ್ತ್ರದ ಪೂರೈಕೆ.

11 ಇದೆಂಥ ಕಾಲವೆಂದು ತಿಳಿದಿರುವ ನೀವು ಇದೆಲ್ಲವನ್ನು ಮಾಡಬೇಕು. ನಿದ್ರೆಯಿಂದ ಎಚ್ಚೆತ್ತುಕೊಳ್ಳುವ ವೇಳೆಯು ಸಮೀಪಿಸಿತು. ನಾವು ಕ್ರಿಸ್ತಯೇಸುವನ್ನು ವಿಶ್ವಾಸಿಸಲು ಆರಂಭಿಸಿದಾಗ ಇದ್ದುದಕ್ಕಿಂತಲೂ ಈಗ ನಮ್ಮ ಉದ್ಧಾರವು ಸಮೀಪವಾಗಿದೆ. [12]ಇರುಳು ಬಹುಮಟ್ಟಿಗೆ ಕಳೆಯಿತು. ಹಗಲು ಸಮೀಪಿಸಿತು. ಇನ್ನು ಅಂಧಕಾರಕ್ಕೆ ಅನುಗುಣವಾದ ದುಷ್ಕೃತ್ಯಗಳನ್ನು ತ್ಯಜಿಸಿಬಿಡೋಣ. ಬೆಳಕಿಗೆ ಅನುಗುಣವಾದ ಆಯುಧಗಳನ್ನು ಧರಿಸಿಕೊಳ್ಳೋಣ. [13]ದುಂದೌತಣ – ಕುಡಿತಗಳಲ್ಲಾಗಲೀ, ಕಾಮವಿಲಾಸ – ನಿರ್ಲಜ್ಜಾಕೃತ್ಯಗಳಲ್ಲಾಗಲೀ, ಕಲಹ – ಮತ್ಸರಗಳಲ್ಲಾಗಲೀ ಕಾಲಕಳೆಯದೆ ಬೆಳಕಿನಲ್ಲಿ ಬಾಳುವವರಂತೆ ಸಭ್ಯರಾಗಿ ವರ್ತಿಸೋಣ. [14]ದೇಹದ ದುರಿಚ್ಛೆಗಳಿಗೆ ಬಲಿಯಾಗದೆ ಕ್ರಿಸ್ತಂಬರರಾಗಿರಿ.

## ಊಟೋಪಚಾರದಲ್ಲಿ ತಾರತಮ್ಯವೇಕೆ?

**14** ವಿಶ್ವಾಸದಲ್ಲಿ ಸ್ಥಿರವಿಲ್ಲದವರನ್ನೂ ನಿಮ್ಮ ಸಂಗಡ ಸೇರಿಸಿಕೊಳ್ಳಿರಿ. ಆದರೆ ವೈಯಕ್ತಿಕ ಅಭಿಪ್ರಾಯಗಳ ಬಗ್ಗೆ ವಾಗ್ವಾದ ನಡೆಸಬೇಡಿ. [2]ಒಬ್ಬನು ಎಂಥ ಆಹಾರವನ್ನಾದರೂ ಭುಜಿಸಬಹುದೆಂದು ಭಾವಿಸುತ್ತಾನೆ. ವಿಶ್ವಾಸದಲ್ಲಿ ಸ್ಥಿರವಿಲ್ಲದವನು ಸಸ್ಯಾಹಾರಿ ಆಗಿಯೇ ಇರುತ್ತಾನೆ. [3]ಮಾಂಸಾಹಾರಿಯು ಸಸ್ಯಾಹಾರಿಯನ್ನು ಹೀನೈಸಬಾರದು; ಸಸ್ಯಾಹಾರಿಯು ಮಾಂಸಾಹಾರಿಯನ್ನು ದೋಷಿಯೆಂದು ತೀರ್ಪುಕೊಡಬಾರದು. ಏಕೆಂದರೆ, ಇಬ್ಬರೂ ದೇವರಿಂದ ಅಂಗೀಕೃತರು. [4]ಮತ್ತೊಬ್ಬನ ದಾಸನ ಮೇಲೆ ದಂಡನೆಯ ತೀರ್ಪು ಕೊಡಲು ನೀನು ಯಾರು? ಅವನು ಸಮರ್ಥನು ಅಥವಾ ಅಸಮರ್ಥನು ಎಂದು ತೀರ್ಪುಕೊಡುವುದು ಅವನ ಯಜಮಾನನಿಗೆ ಸೇರಿದ್ದು. ಅವನು ಸಮರ್ಥನಾಗುವಂತೆ ಮಾಡಲು ಪ್ರಭು ಶಕ್ತರು.

5 ಒಂದು ದಿನಕ್ಕಿಂತ ಮತ್ತೊಂದು ದಿನ ಮಂಗಳಕರವಾದುದು ಎಂದು ಒಬ್ಬನು ಭಾವಿಸಬಹುದು. ಮತ್ತೊಬ್ಬನು, ಎಲ್ಲಾ ದಿನಗಳು ಮಂಗಳಕರವಾದುವು ಎಂದು ಹೇಳಬಹುದು. ಈ ವಿಷಯದಲ್ಲಿ ಪ್ರತಿಯೊಬ್ಬನೂ ತನ್ನ ಮನಸ್ಸಿನಲ್ಲಿ ನಿಶ್ಚಯಿಸಿಕೊಂಡಂತೆ ನಡೆಯಲಿ. [6]ಒಂದು ದಿನವನ್ನು ಮಂಗಳಕರವೆಂದು ಭಾವಿಸುವವನು ಪ್ರಭುವಿಗಾಗಿಯೇ ಆ ರೀತಿ ಭಾವಿಸುತ್ತಾನೆ. ಮಾಂಸವನ್ನು ತಿನ್ನುವವನು ಪ್ರಭುವಿಗಾಗಿಯೇ ತಿನ್ನುತ್ತಾನೆ. ಹೇಗೆಂದರೆ, ತಿನ್ನುವ ಆ ಪದಾರ್ಥಕ್ಕಾಗಿ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತಾನೆ. ಸಸ್ಯಾಹಾರಿಯೂ ಪ್ರಭುವಿಗಾಗಿಯೇ ಮಾಂಸವನ್ನು ತಿನ್ನದೆ ದೇವರಿಗೆ ಕೃತಜ್ಞತೆಯನ್ನು ಸಲ್ಲಿಸುತ್ತಾನೆ. [7]ನಮ್ಮಲ್ಲಿ ಯಾರೂ ತನಗಾಗಿಯೇ ಬದುಕುವುದಿಲ್ಲ; ತನಗಾಗಿಯೇ ಸಾಯುವುದಿಲ್ಲ. ನಾವು ಬದುಕಿದರೂ ಪ್ರಭುವಿಗಾಗಿಯೇ; ಸತ್ತರೂ ಅವರಿಗಾಗಿಯೇ. [8]ನಾವು ಬದುಕಿದರೂ ಸತ್ತರೂ ಪ್ರಭುವಿಗೆ ಸೇರಿದವರು. [9]ಏಕೆಂದರೆ, ಸತ್ತವರಿಗೂ ಬದುಕುವವರಿಗೂ ಪ್ರಭುವಾಗಬೇಕೆಂಬ ಉದ್ದೇಶದಿಂದಲೇ ಕ್ರಿಸ್ತಯೇಸು ಸತ್ತು ಜೀವಂತರಾದದ್ದು. [10]ಹೀಗಿರುವಲ್ಲಿ ಸಸ್ಯಾಹಾರಿಯೇ, ನೀನು ನಿನ್ನ ಸಹೋದರನನ್ನು ದೋಷಿಯೆಂದು ತೀರ್ಪಿಡುವುದೇಕೆ? ಮಾಂಸಾಹಾರಿಯೇ, ನಿನ್ನ ಸಹೋದರನನ್ನು ಹೀನೈಸುವುದೇಕೆ? ನಾವೆಲ್ಲರೂ ದೇವರ ನ್ಯಾಯಸ್ಥಾನದ ಮುಂದೆ ನಿಲ್ಲಬೇಕಲ್ಲವೆ? [11]ಪವಿತ್ರ ಗ್ರಂಥದಲ್ಲಿ:

"ಎಲ್ಲರೂ ನನಗೆ ಸಾಷ್ಟಾಂಗವೆರಗುವರು
ಎಲ್ಲರೂ ನನ್ನನ್ನು ದೇವರೆಂದು ನಿವೇದಿಸುವರು
ಇದಕ್ಕೆ ಜೀವಸ್ವರೂಪನಾದ ನಾನೇ ಸಾಕ್ಷಿ,"

ಎಂದು ಸರ್ವೇಶ್ವರ ಸ್ವಾಮಿ ಹೇಳಿದ್ದಾರೆ. [12]ನಮ್ಮಲ್ಲಿ ಪ್ರತಿಯೊಬ್ಬನೂ ತನ್ನ ತನ್ನ ವಿಷಯವಾಗಿ ದೇವರಿಗೆ ಲೆಕ್ಕವನ್ನು ಒಪ್ಪಿಸಬೇಕು.

## ಯಾವ ಪದಾರ್ಥವು ಸ್ವತಃ ಅಶುದ್ಧವಲ್ಲ

13 ಆದಕಾರಣ ಒಬ್ಬರ ವಿಷಯದಲ್ಲಿ ಒಬ್ಬರು ತೀರ್ಪುಮಾಡದೆ ಇರೋಣ. ಬದಲಾಗಿ ಸಹೋದರನಿಗೆ ಯಾವ ರೀತಿಯ ಅಡ್ಡಿಯನ್ನಾಗಲೀ ಅಡಚಣೆಗಳನ್ನಾಗಲೀ ಉಂಟುಮಾಡುವುದಿಲ್ಲವೆಂದು ತೀರ್ಮಾನಿಸಿಕೊಳ್ಳಿ. [14]ಯಾವ ಪದಾರ್ಥವು ಸ್ವತಃ ಅಶುದ್ದವಲ್ಲವೆಂದು ಪ್ರಭು ಯೇಸುವಿನಲ್ಲಿ ನಾನು

ಖಚಿತವಾಗಿ ಹೇಳಬಲ್ಲೆ. ಆದರೆ, ಒಂದು ಪದಾರ್ಥವನ್ನು ಅಶುದ್ಧವೆಂದು ಯಾರಾದರೂ ಭಾವಿಸಿದರೆ ಅದು
ಅವನಿಗೆ ಅಶುದ್ಧವೇ ಆಗುತ್ತದೆ. [15]ನೀನು ಏನನ್ನಾದರೂ ತಿನ್ನುವುದರಿಂದ ನಿನ್ನ ಸಹೋದರನ ಮನಸ್ಸಿಗೆ
ನೋವುಂಟಾಗುವುದಾದರೆ ನಿನ್ನ ಆ ವರ್ತನೆ ಪ್ರೀತಿಪ್ರೇರಿತವಾದುದಲ್ಲ. ಯಾರಿಗೋಸ್ಕರ ಕ್ರಿಸ್ತಯೇಸು
ಪ್ರಾಣಾರ್ಪಣೆ ಮಾಡಿದರೋ ಅಂಥವನಿಗೆ ನೀನು ತಿನ್ನುವ ಆಹಾರದಿಂದಾಗಿ ನಾಶವನ್ನು ತರಬಾರದು.
[16]ನಿನಗೆ ರುಚಿಕರವಾದದ್ದು ಪರರಿಗೆ ದೂಷಣಾಸ್ಪದವಾಗದಿರಲಿ. [17]ಏಕೆಂದರೆ, ದೇವರ ಸಾಮ್ರಾಜ್ಯ
ತಿನ್ನುವುದರಲ್ಲಿ, ಕುಡಿಯುವುದರಲ್ಲಿ ಅಲ್ಲ, ಪವಿತ್ರಾತ್ಮ ಅವರಿಂದ ಬರುವ ಸತ್ಸಂಬಂಧ, ಶಾಂತಿಸಮಾಧಾನ
ಮತ್ತು ಸಂತೋಷ ಇವುಗಳಲ್ಲಿ ಅಡಗಿದೆ. [18]ಹೀಗೆ ಕ್ರಿಸ್ತಯೇಸುವಿಗೆ ಸೇವೆಮಾಡುವವನು, ದೇವರಿಂದ
ಮೆಚ್ಚುಗೆಯನ್ನು ಮತ್ತು ಮನುಷ್ಯರಿಂದ ಮಾನ್ಯತೆಯನ್ನು ಪಡೆಯುತ್ತಾನೆ.

19 ಆದ್ದರಿಂದ ಶಾಂತಿಸಮಾಧಾನಕ್ಕೂ ಪರಸ್ಪರ ಅಭ್ಯುದಯಕ್ಕೂ ಹಿತಕರವಾದವುಗಳನ್ನೇ
ಅರಸೋಣ. [20]ಕೇವಲ ಆಹಾರಕ್ಕಾಗಿ, ದೇವರು ಕಟ್ಟಿದ್ದನ್ನು ನೀನು ಕೆಡವಬೇಡ. ಆಹಾರ ಪದಾರ್ಥಗಳೆಲ್ಲಾ
ಒಳ್ಳೆಯವೇ. ಆದರೆ ಅವುಗಳಲ್ಲಿ ಯಾವುದಾದರೂ ಒಂದನ್ನು ತಿನ್ನುವುದರಿಂದ ಮತ್ತೊಬ್ಬನಿಗೆ ವಿಘ್ನವನ್ನು
ಒಡ್ಡುವುದಾದರೆ, ಅದು ತಪ್ಪು. [21]ಮಾಂಸವನ್ನು ತಿನ್ನುವುದಾಗಲಿ, ದ್ರಾಕ್ಷಾರಸವನ್ನು ಕುಡಿಯುವುದಾಗಲಿ,
ಅಥವಾ ಇನ್ನಾವುದೇ ಆಗಲಿ, ನಿನ್ನ ಸಹೋದರನಿಗೆ ಪಾಪಕ್ಕೆ ಕಾರಣವಾಗುವುದಾದರೆ ಅದನ್ನು
ಬಿಟ್ಟುಬಿಡುವುದೇ ಲೇಸು. [22]ಈ ವಿಷಯದಲ್ಲಿ ನಿನಗಿರುವ ವೈಯಕ್ತಿಕ ನಂಬಿಕೆ ದೇವರಿಗೆ ಮತ್ತು ನಿನಗೆ
ಮಾತ್ರ ತಿಳಿದಿರಲಿ. ತಾನು ಅನುಮೋದಿಸಿ ಮಾಡಿದುದರ ಬಗ್ಗೆ ಅನುಮಾನಪಡದವನು ಧನ್ಯನು.
[23]ಅನುಮಾನದಿಂದ ಊಟಮಾಡುವವನು ದೇವರ ಮುಂದೆ ಅಪರಾಧಿಯಾಗುತ್ತಾನೆ. ಏಕೆಂದರೆ, ಅವನು
ವಿಶ್ವಾಸದ ಆಧಾರದ ಮೇಲೆ ವರ್ತಿಸುತ್ತಿಲ್ಲ. ವಿಶ್ವಾಸದ ಆಧಾರವಿಲ್ಲದೆ ಮಾಡುವುದೆಲ್ಲವೂ ಪಾಪವೇ.

## ಸ್ವಹಿತವನ್ನಲ್ಲ, ಪರಹಿತವನ್ನೇ ಬಯಸು

**15** ವಿಶ್ವಾಸದಲ್ಲಿ ದೃಢವಾಗಿರುವ ನಾವು ನಮ್ಮ ಹಿತವನ್ನೇ ಬಯಸದೆ ವಿಶ್ವಾಸದಲ್ಲಿ ದೃಢವಲ್ಲದವರ
ಲೋಪದೋಷಗಳನ್ನು ಸಹಿಸಿಕೊಳ್ಳಬೇಕು. [2]ನಮ್ಮಲ್ಲಿ ಪ್ರತಿಯೊಬ್ಬನು ತನ್ನ ನೆರೆಯವನ ಹಿತವನ್ನೇ ಬಯಸಿ,
ವಿಶ್ವಾಸದಲ್ಲಿ ಅವನು ಮತ್ತಷ್ಟು ಪ್ರವರ್ಧಿಸುವಂತೆ ನೆರವಾಗಬೇಕು. [3]ಕ್ರಿಸ್ತಯೇಸು ತಮ್ಮ ಸ್ವಂತ ಹಿತವನ್ನು
ಎಂದಿಗೂ ಬಯಸಲಿಲ್ಲ, "ದೇವರೇ, ನಿಮ್ಮನ್ನು ದೂಷಿಸಿದವರ ದೂಷಣೆಗಳು ನನ್ನ ಮೇಲೆ ಎರಗಿವೆ,"
ಎಂದು ಲಿಖಿತವಾಗಿರುವ ವಾಕ್ಯ ಅವರಿಗೆ ಅನ್ವಯಿಸುತ್ತದೆ. [4]ಪ್ರಾಚೀನ ಗ್ರಂಥಗಳಲ್ಲಿ ಬರೆದಿರುವುದೆಲ್ಲವೂ
ನಮ್ಮ ಉಪದೇಶಕ್ಕಾಗಿಯೇ ಬರೆಯಲಾಗಿದೆ. ಪವಿತ್ರಗ್ರಂಥ ಪಠನದಿಂದ ದೊರಕುವ ಸ್ಥೈರ್ಯ ಮತ್ತು
ಉತ್ತೇಜನದಿಂದಾಗಿ ನಾವು ನಿರೀಕ್ಷೆಯುಳ್ಳವರಾಗಬೇಕೆಂದೇ ಇವೆಲ್ಲಾ ಬರೆಯಲಾಗಿದೆ. [5]ಆ ಸ್ಥೈರ್ಯ ಮತ್ತು
ಉತ್ತೇಜನದ ಮೂಲವಾಗಿರುವ ದೇವರು, ನೀವೆಲ್ಲರು ಕ್ರಿಸ್ತಯೇಸುವನ್ನು ಅನುಸರಿಸುತ್ತಾ ಒಮ್ಮನಸ್ಸಿನಿಂದ
ಬಾಳುವಂತೆ ಮಾಡಲಿ. [6]ಹೀಗೆ ಒಮ್ಮನಸ್ಸಿನಿಂದಲೂ ಒಕ್ಕೊರಲಿನಿಂದಲೂ ನಮ್ಮ ಪ್ರಭು ಯೇಸುಕ್ರಿಸ್ತರ
ತಂದೆಯಾದ ದೇವರನ್ನು ಕೊಂಡಾಡುವಂತಾಗಲಿ.

## ಅನ್ಯಧರ್ಮೀಯರಿಗೆ ಆನಂದ ಸಂದೇಶ

7 ಕ್ರಿಸ್ತಯೇಸು ನಿಮ್ಮನ್ನು ಅಂಗೀಕರಿಸಿದಂತೆ ದೇವರ ಮಹಿಮೆಗಾಗಿ ನೀವು ಸಹ ಒಬ್ಬರನ್ನು ಒಬ್ಬರು
ಅಂಗೀಕರಿಸಿರಿ. [8]ದೇವರು ನಮ್ಮ ಪಿತೃಗಳಿಗೆ ಮಾಡಿದ ವಾಗ್ದಾನಗಳನ್ನು ನೆರವೇರಿಸಿ ತಮ್ಮ
ಪ್ರಾಮಾಣಿಕತೆಯನ್ನು ವ್ಯಕ್ತಪಡಿಸುವಂತೆ [9]ಮತ್ತು ದೇವರು ತೋರಿದ ಕರುಣೆಗಾಗಿ ಅವರನ್ನು
ಯೆಹೂದ್ಯರಲ್ಲದವರು ಸಹ ಸ್ತುತಿಸಲು ಸಾಧ್ಯವಾಗುವಂತೆ ಕ್ರಿಸ್ತಯೇಸು ಯೆಹೂದ್ಯರಿಗೆ ಅಧೀನರಾದರು.
ಇದಕ್ಕೆ ಸಾದೃಶ್ಯವಾಗಿ ಪವಿತ್ರ ಗ್ರಂಥದಲ್ಲಿ ಹೀಗೆಂದು ಹೇಳಲಾಗಿದೆ:

"ಈ ಕಾರಣದಿಂದ ನಾನು
ಯೆಹೂದ್ಯರಲ್ಲದವರ ನಡುವೆ

ನಿಮ್ಮನ್ನು ಕೊಂಡಾಡುವೆನು
ನಿಮ್ಮ ನಾಮವನು ಸಂಕೀರ್ತಿಸುವೆನು.”
10 ಇನ್ನೊಂದು ಕಡೆ:
“ಅನ್ಯಧರ್ಮೀಯರೇ, ದೇವಜನರೊಡನೆ
ಸೇರಿ ಆನಂದಿಸಿರಿ.”
11 ಮತ್ತೊಂದು ಕಡೆ:
“ಅನ್ಯಧರ್ಮೀಯರೇ, ನೀವೆಲ್ಲರೂ
ಪ್ರಭುವನ್ನು ಸ್ತುತಿಸಿರಿ;
ಸರ್ವಜನಾಂಗಗಳೇ, ಅವರನ್ನು
ಹೊಗಳಿ ಹಾಡಿರಿ.”
12 ಮಗದೊಂದು ಕಡೆ ಯೆಶಾಯನು
ಹೀಗೆನ್ನುತ್ತಾನೆ:
“ಜೆಸ್ಸೆಯನ ವಂಶಜನು ಬರುವನು,
ಅನ್ಯ ಜನಾಂಗಗಳನ್ನು ಆಳುವವನು
ಉದಯಿಸುವನು;
ಆ ಜನಾಂಗಗಳು ಆತನಲ್ಲೇ
ಭರವಸೆಯನ್ನಿಡುವುವು.”

13 ಭರವಸೆಯ ಮೂಲವಾಗಿರುವ ದೇವರಲ್ಲಿರುವ ನಮ್ಮ ವಿಶ್ವಾಸದ ಮೂಲಕ ಲಭಿಸುವ ಆನಂದವನ್ನೂ ಶಾಂತಿಸಮಾಧಾನವನ್ನೂ ನಿಮಗೆ ಸಮೃದ್ಧಿಯಾಗಿ ದಯಪಾಲಿಸಲಿ. ನಿಮ್ಮ ಭರವಸೆ ಪವಿತ್ರಾತ್ಮ ಅವರ ಪ್ರಭಾವದಿಂದ ಪ್ರವರ್ಧಿಸುವಂತಾಗಲಿ.

## ಪೌಲನ ಅಧಿಕಾರಯುತ ಆದೇಶ

14 ಸಹೋದರರೇ, ನೀವು ಗುಣಸಂಪನ್ನರೂ ಜ್ಞಾನಸಂಪನ್ನರೂ ಒಬ್ಬರಿಗೊಬ್ಬರು ಬುದ್ಧಿ
ಹೇಳಿಕೊಳ್ಳಲು ಸಮರ್ಥರೂ ಆಗಿದ್ದೀರಿ ಎಂದು ನಾನು ಚೆನ್ನಾಗಿ ಬಲ್ಲೆ.
15 ಆದರೂ ಕೆಲವು ವಿಷಯಗಳತ್ತ
ನಿಮ್ಮ ಗಮನ ಸೆಳೆಯುವ ಉದ್ದೇಶದಿಂದ ಅಲ್ಲಲ್ಲಿ ಹೆಚ್ಚಿನ ಧೈರ್ಯವಹಿಸಿ ಬರೆದಿದ್ದೇನೆ. ದೇವರು ನನಗೆ
ದಯಪಾಲಿಸಿರುವ ವಿಶೇಷ ವರದಾನದಿಂದಾಗಿ ಈ ಪ್ರಕಾರ ಬರೆದಿದ್ದೇನೆ.
16 ಈ ವರದಿಂದಲೇ
ಯೆಹೂದ್ಯರಲ್ಲದ ಜನರಿಗೆ ನಾನು ಕ್ರಿಸ್ತಯೇಸುವಿನ ದಾಸನಾದೆ. ಯೆಹೂದ್ಯರಲ್ಲದವರು ಪವಿತ್ರಾತ್ಮರ ಮೂಲಕ
ಪರಿಶುದ್ಧರಾಗಿ, ದೇವರಿಗೆ ಸಮರ್ಪಕ ಕಾಣಿಕೆಯಾಗುವಂತೆ ದೇವರ ಶುಭಸಂದೇಶವನ್ನು ಸಾರುವುದೇ ನನ್ನ
ಪೂಜ್ಯಸೇವೆ, ಅದುವೇ ನನ್ನ ಯಾಜಕ ಸೇವೆ.
17 ದೇವರಿಗಾಗಿ ಸಲ್ಲಿಸುವ ಈ ಸೇವೆಯನ್ನು ಕುರಿತು ನಾನು
ಕ್ರಿಸ್ತಯೇಸುವಿನಲ್ಲಿ ಹೆಮ್ಮೆಪಡಲು ಕಾರಣ ಉಂಟು.
18 ಕ್ರಿಸ್ತಯೇಸು ನನ್ನ ಮುಖಾಂತರ ಅಂದರೆ, ನನ್ನ
ಬೋಧನೆ ಹಾಗು ಸಾಧನೆಗಳ ಮೂಲಕ, ಸೂಚಕ ಹಾಗೂ ಅದ್ಭುತ ಕಾರ್ಯಗಳ ಮೂಲಕ ಮತ್ತು
ಪವಿತ್ರಾತ್ಮರ ಶಕ್ತಿಯ ಮೂಲಕ ಯೆಹೂದ್ಯರಲ್ಲದವರನ್ನೂ ತಮ್ಮ ಶರಣರನ್ನಾಗಿಸಿಕೊಂಡಿದ್ದಾರೆ.
ಇದೊಂದನ್ನು ಬಿಟ್ಟು ಬೇರೆ ಯಾವುದನ್ನು ಕುರಿತು ಹೊಗಳಿಕೊಳ್ಳಲು ನಾನು ಧೈರ್ಯಗೊಳ್ಳುವುದಿಲ್ಲ.
19 ಜೆರುಸಲೇಮಿನಿಂದ ಪ್ರಾರಂಭಿಸಿ ಇಲ್ಲುರಿಕ ಪ್ರಾಂತ್ಯದವರೆಗೂ ಸುತ್ತಮುತ್ತಿನಲ್ಲೂ ನಾನು ಸಂಚಾರಮಾಡಿ,
ಕ್ರಿಸ್ತಯೇಸುವಿನ ಶುಭಸಂದೇಶವನ್ನು ಪೂರ್ತಿಯಾಗಿ ಪ್ರಚಾರಮಾಡಿದ್ದೇನೆ.
20 ಮತ್ತೊಬ್ಬನು ಹಾಕಿದ
ಅಸ್ತಿವಾರದ ಮೇಲೆ ನಾನು ಕಟ್ಟುವುದು ಸರಿ ಅಲ್ಲವೆಂಬುದು ನನ್ನ ಅಭಿಪ್ರಾಯ. ಆದಕಾರಣ ಕ್ರಿಸ್ತಯೇಸುವಿನ
ನಾಮವು ಪ್ರಚಾರವಾಗದಕಡೆ ಹೋಗಿ ಶುಭಸಂದೇಶವನ್ನು ಸಾರಬೇಕೆಂಬುದೇ ನನ್ನ ಆಕಾಂಕ್ಷೆ.
21 “ಯಾರಿಗೆ ಆತನ ಸುದ್ದಿ ಮುಟ್ಟಿಲ್ಲವೋ
ಅವರು ಆತನನು ನೋಡುವರು;
ಯಾರು ಆತನ ವರ್ತಮಾನ ಕೇಳಿಲ್ಲವೋ

ಅವರು ಆತನನು ಗ್ರಹಿಸಿಕೊಳ್ಳುವರು,"
ಎಂಬುದಾಗಿ ಪವಿತ್ರಗ್ರಂಥದಲ್ಲಿ ಬರೆದಿರುವ ಪ್ರಕಾರ ನನ್ನ ಕಾರ್ಯವನ್ನು ನಡೆಸಿದ್ದೇನೆ.

### ಪೌಲನ ಪ್ರಯಾಣದ ಯೋಜನೆ

22 ಈ ಕಾರಣದಿಂದಲೇ ನಾನು ನಿಮ್ಮ ಬಳಿಗೆ ಬರಲು ಅನೇಕ ಸಾರಿ ಮಾಡಿದ ಪ್ರಯತ್ನಗಳು
ವಿಫಲವಾದವು. 23ಆದರೆ ಈಗ ಈ ಪಾಂತ್ಯಗಳಲ್ಲಿ ನಾನು ಮಾಡಬೇಕಾಗಿದ್ದ ಸೇವೆಯನ್ನು ಮುಗಿಸಿದ್ದೇನೆ.
ಅನೇಕ ವರ್ಷಗಳಿಂದ ನಿಮ್ಮ ಬಳಿಗೆ ಬರಬೇಕೆಂದಿದ್ದ ನನ್ನ ಹಂಬಲವು ಈಗ ಕೈಗೂಡಲಿದೆ. 24ನಾನು
ಸ್ಪೇಯಿನ್ ದೇಶಕ್ಕೆ ಹೋಗುವ ಮಾರ್ಗದಲ್ಲಿ ಮೊದಲು ನಿಮ್ಮನ್ನು ಕಾಣಬೇಕೆಂದಿದ್ದೇನೆ. ಸ್ವಲ್ಪಕಾಲ ನಿಮ್ಮೊಡನೆ
ಸಂತೋಷವಾಗಿ ತಂಗಿದ್ದು ಬಳಿಕ ನಿಮ್ಮ ಸಹಾಯದಿಂದ ಆ ದೇಶಕ್ಕೆ ಪ್ರಯಾಣವನ್ನು ಮುಂದುವರಿಸುತ್ತೇನೆ.
25ಸದ್ಯಕ್ಕೆ ನಾನು ಜೆರುಸಲೇಮಿನಲ್ಲಿರುವ ದೇವಜನರಿಗೆ ಸಹಾಯಧನವನ್ನು ಕೊಂಡೊಯ್ಯಬೇಕಾಗಿದೆ.
26ಅಲ್ಲಿನ ದೇವಜನರಲ್ಲಿ ಬಡವರಾದವರಿಗೆ ಸಹಾಯ ನೀಡಲು ಮಕೆದೋನಿಯ ಮತ್ತು ಅಖಾಯದ
ಸಹೋದರರು ಮುಂದೆ ಬಂದಿದ್ದಾರೆ. 27ಅವರ ಸ್ವಂತ ಇಷ್ಟದಿಂದಲೇ ಮುಂದೆ ಬಂದಿದ್ದಾರೆ. ಹಾಗೆ
ಮಾಡುವುದು ಅವರ ಕರ್ತವ್ಯವೂ ಹೌದು. ಏಕೆಂದರೆ, ಯೆಹೂದ್ಯರ ಆಧ್ಯಾತ್ಮಿಕ ಸಂಪತ್ತಿನಲ್ಲಿ
ಪಾಲುಗಾರರಾಗಿರುವ ಅನ್ಯಧರ್ಮೀಯರು ತಮ್ಮ ಐಹಿಕ ಸಂಪತ್ತಿನಲ್ಲಿ ಅವರಿಗೆ ಪಾಲು ನೀಡಲು
ಕರ್ತವ್ಯಬದ್ಧರಾಗಿದ್ದಾರೆ. 28ದೇವಜನರಿಗೆ ಸಂಗ್ರಹಿಸಲಾದ ಧನಸಹಾಯವನ್ನು ಸುರಕ್ಷಿತವಾಗಿ ಅವರಿಗೆ
ತಲುಪಿಸಿದ ಮೇಲೆ ನನ್ನ ಈ ಕಾರ್ಯವನ್ನು ಮುಗಿಸಿಕೊಂಡು ಸ್ಪೇಯಿನ್ ದೇಶಕ್ಕೆ ಹೋಗುವ ಮಾರ್ಗದಲ್ಲಿ
ನಿಮ್ಮ ಬಳಿಗೆ ಬರುತ್ತೇನೆ. 29ಹಾಗೆ ಬರುವಾಗ ನಿಮಗೆ ಕ್ರಿಸ್ತಯೇಸುವಿನ ಅಮೂಲ್ಯ ಆಶೀರ್ವಾದವನ್ನು
ಹೇರಳವಾಗಿ ತರುತ್ತೇನೆಂಬ ಭರವಸೆ ನನಗಿದೆ.

30 ಸಹೋದರರೇ, ನಮ್ಮ ಪ್ರಭು ಯೇಸುಕ್ರಿಸ್ತರ ಹೆಸರಿನಲ್ಲೂ ಪವಿತ್ರಾತ್ಮ ಪ್ರೇರಿತವಾದ
ಪ್ರೀತಿಯಿಂದಲೂ ನಾನು ನಿಮ್ಮಲ್ಲಿ ಕೇಳಿಕೊಳ್ಳುವುದೇನೆಂದರೆ: ನೀವು ನನಗೋಸ್ಕರ ದೇವರಲ್ಲಿ ಪ್ರಾರ್ಥಿಸಿ
ನನ್ನ ಹೋರಾಟದಲ್ಲಿ ಸಹಕರಿಸಿರಿ. 31ಜುದೇಯದಲ್ಲಿರುವ ಅವಿಶ್ವಾಸಿಗಳ ಕೈಯಿಂದ ನಾನು ಪಾರಾಗುವಂತೆ
ಪ್ರಾರ್ಥಿಸಿರಿ; ಜೆರುಸಲೇಮಿನ ದೇವಜನರು ನನ್ನ ಸೇವೆಯನ್ನು ಸಂತೋಷದಿಂದ ಸ್ವೀಕರಿಸುವಂತೆ
ಪ್ರಾರ್ಥಿಸಿರಿ. 32ಅನಂತರ ದೇವರ ಚಿತ್ತವಾದಲ್ಲಿ ನಾನು ಸಂತೋಷದಿಂದ ನಿಮ್ಮಲ್ಲಿ ಬರುತ್ತೇನೆ. ನಿಮ್ಮ
ಸಂಗಡವಿದ್ದು ವಿಶ್ರಾಂತಿ ಪಡೆಯುತ್ತೇನೆ. 33ಶಾಂತಿದಾತ ದೇವರು ನಿಮ್ಮೆಲ್ಲರೊಡನೆ ಇರಲಿ! ಆಮೆನ್.

### ವೈಯಕ್ತಿಕ ಶುಭಾಶಯಗಳು

**16** ನಾನು ನಿಮ್ಮ ಬಳಿಗೆ ಕಳುಹಿಸುತ್ತಿರುವ ಸಹೋದರಿ ಫೊಯಿಬೆಯನ್ನು ಪ್ರೀತಿಯಿಂದ ಸ್ವಾಗತಿಸಿರಿ. ಈಕೆ
ಕೆಂಕ್ರೆಯ ಪಟ್ಟಣದ ಸಭಾಸೇವಕಳು. 2ದೇವಜನರ ಯೋಗ್ಯತೆಗೆ ತಕ್ಕಂತೆ ಈಕೆಯನ್ನು ಪ್ರಭುವಿನ ಹೆಸರಿನಲ್ಲಿ
ಬರಮಾಡಿಕೊಳ್ಳಿ. ನನಗೂ ಅನೇಕರಿಗೂ ನೆರವು ನೀಡಿರುವ ಈಕೆಗೆ ನಿಮ್ಮಿಂದಾದ ಎಲ್ಲಾ ಸಹಾಯವನ್ನು
ಮಾಡಿ.

3 ಕ್ರಿಸ್ತಯೇಸುವಿನ ಸೇವೆಯಲ್ಲಿ ನನ್ನ ಸಹೋದ್ಯೋಗಿಗಳಾದ ಪ್ರಿಸಿಲ್ಲಳಿಗೂ ಅಕ್ವಿಲನಿಗೂ ನನ್ನ
ವಂದನೆಗಳನ್ನು ತಿಳಿಸಿರಿ. 4ಅವರು ನನ್ನ ಪ್ರಾಣರಕ್ಷಣೆಗಾಗಿ ತಮ್ಮ ಪ್ರಾಣಗಳನ್ನೇ ಅಪಾಯಕ್ಕೆ
ಈಡಾಗಿಸಿದವರು. ಅದಕ್ಕಾಗಿ ನಾನು ಅವರಿಗೆ ಚಿರಋಣಿ. ನಾನು ಮಾತ್ರವಲ್ಲ, ಯೆಹೂದ್ಯೇತರ ಸಭೆಗಳ
ಎಲ್ಲರೂ ಅವರು ಮಾಡಿದ ಉಪಕಾರಕ್ಕೆ ಚಿರಋಣಿಗಳಾಗಿದ್ದಾರೆ.

5 ಅವರ ಮನೆಯಲ್ಲಿ ಸೇರುವ ಸಭೆಗೂ ನನ್ನ ಶುಭಾಶಯಗಳು. ನನ್ನ ಆಪ್ತ ಗೆಳೆಯ ಎಪ್ಪೈನೆತನಿಗೆ
ನನ್ನ ಪ್ರಣಾಮಗಳು; ಏಷ್ಯ ಸೀಮೆಯಲ್ಲಿ ಮೊತ್ತಮೊದಲಿಗೆ ಕ್ರಿಸ್ತಯೇಸುವನ್ನು ವಿಶ್ವಾಸಿಸಿದವನು ಆತನೇ.
6ನಿಮಗಾಗಿ ಬಹಳ ಶ್ರಮವಹಿಸಿದ ಮರಿಯಳಿಗೂ ನನ್ನ ನಮಸ್ಕಾರಗಳು. 7ನನ್ನ ಸ್ವದೇಶೀಯರೂ ನನ್ನೊಡನೆ

ಸೆರೆಯಲ್ಲಿ ಇದ್ದವರೂ ಅಂದ್ರೋನಿಕನಿಗೂ ಯೂನ್ಯನಿಗೂ ನನ್ನ ನಮನಗಳು. ಅವರು ಪ್ರೇಷಿತರಂತೆ ಸನ್ಮಾನಿತರು; ಕ್ರಿಸ್ತಯೇಸುವನ್ನು ವಿಶ್ವಾಸಿಸುವುದರಲ್ಲಿ ನನಗಿಂತಲೂ ಮೊದಲಿಗರು.

8 ಪ್ರಭುವಿನಲ್ಲಿ ನನ್ನ ಆಪ್ತಗೆಳೆಯನಾದ ಅಂಪ್ಲಿಯಾತನಿಗೆ ನನ್ನ ವಂದನೆಗಳು. [9]ಯೇಸುಕ್ರಿಸ್ತರ ಸೇವೆಯಲ್ಲಿ ನನ್ನ ಸಹೋದ್ಯೋಗಿಯಾದ ಉರ್ಬಾನನಿಗೂ ನನ್ನ ಮಿತ್ರ ಸ್ತಾಕುನಿಗೂ ವಂದನೆಗಳು. [10]ಕ್ರಿಸ್ತಯೇಸುವಿನ ಸೇವೆಯಲ್ಲಿ ಪರಿಷ್ಕೃತನಾದ ಅಪೆಲ್ಲನಿಗೆ ಮತ್ತು ಅರಿಸ್ಟೊಬೂಲನ ಕುಟುಂಬದವರಿಗೆ ನನ್ನ ನೆನಪುಗಳು. [11]ನನ್ನ ಸ್ವದೇಶೀಯರಾದ ಹೆರೋಡಿಯೊನನಿಗೂ ನಾರ್ಕಿಸ್ಸನ ಕುಟುಂಬದವರಲ್ಲಿ ಕ್ರೈಸ್ತರಾದವರಿಗೂ ನನ್ನ ವಂದನೆಗಳು.

12 ಪ್ರಭು ಸೇವೆಯಲ್ಲಿ ನಿರತರಾದ ತ್ರುಫೈನಳಿಗೂ ತ್ರುಫೋಸಳಿಗೂ ಮತ್ತು ಪ್ರಭುವಿಗಾಗಿ ಶ್ರದ್ಧೆಯಿಂದ ಸೇವೆಸಲ್ಲಿಸಿದ ಪ್ರಿಯ ಪೆರ್ಸಿಸಳಿಗೂ ನನ್ನ ನೆನಕೆಗಳು. [13]ಪ್ರಭುವಿನ ಭಕ್ತರಲ್ಲಿ ಹೆಸರುವಾಸಿಯಾದ ರೂಫನಿಗೂ ನನ್ನನ್ನು ಸ್ವಂತ ಮಗನಂತೆ ನೋಡಿಕೊಂಡ ಅವನ ತಾಯಿಗೂ ನನ್ನ ವಂದನೆಗಳು. [14]ಅಸುಂಕ್ರಿತನಿಗೂ ಫ್ಲೆಗೋನನಿಗೂ ಹೆರ್ಮೇಯನಿಗೂ ಪತ್ರೊಬನಿಗೂ ಹೆರ್ಮಾನನಿಗೂ ಮತ್ತು ಅವರೊಡನಿರುವ ಸಹೋದರರೆಲ್ಲರಿಗೂ ನನ್ನ ವಂದನೆಗಳು. [15]ಫಿಲೊಲೋಗನಿಗೂ ಯೂಲ್ಯಳಿಗೂ ನೇರ್ಯನಿಗೂ ಅವನ ತಂಗಿಗೂ ಒಲುಂಪನಿಗೂ ಮತ್ತು ಇವರೊಂದಿಗೆ ಇರುವ ದೇವಜನರೆಲ್ಲರಿಗೂ ನನ್ನ ವಂದನೆಗಳು.

16 ಪವಿತ್ರವಾದ ಮುದ್ದನ್ನಿಟ್ಟು ಒಬ್ಬರನ್ನೊಬ್ಬರು ವಂದಿಸಿರಿ. ಎಲ್ಲಾ ಕ್ರೈಸ್ತ ಸಭೆಗಳವರು ನಿಮಗೆ ತಮ್ಮ ವಂದನೆಗಳನ್ನು ಕಳುಹಿಸಿದ್ದಾರೆ.

### ವಿದಾಯ ವಂದನೆ

17 ಸಹೋದರರೇ, ನೀವು ಪಡೆದ ಉಪದೇಶಕ್ಕೆ ವಿರುದ್ಧವಾಗಿ ಬೇಧಗಳನ್ನೂ ವಿಘ್ನಗಳನ್ನೂ ನಿಮ್ಮಲ್ಲಿ ಉಂಟುಮಾಡುವವರ ಬಗ್ಗೆ ಎಚ್ಚರಿಕೆಯಿಂದಿರಿ. ಅಂಥವರ ಸಹವಾಸವನ್ನೇ ಮಾಡಬೇಡಿರೆಂದು ನಿಮ್ಮನ್ನು ಕೇಳಿಕೊಳ್ಳುತ್ತೇನೆ. [18]ಅಂಥವರು ಮಾಡುವುದು ತಮ್ಮ ಉದರ ಸೇವೆಯನ್ನೇ ಹೊರತು ಪ್ರಭುವಿನ ಸೇವೆಯನ್ನಲ್ಲ. ತಮ್ಮ ನಯನಾಜೂಕಿನ ನುಡಿಗಳಿಂದಲೂ ಮುಖಸ್ತುತಿಯ ಮಾತುಗಳಿಂದಲೂ ನಿಷ್ಕಪಟ ಮನಸ್ಕರನ್ನು ಮರುಳುಗೊಳಿಸುತ್ತಾರೆ. [19]ನೀವು ಶುಭಸಂದೇಶಕ್ಕೆ ವಿಧೇಯರಾಗಿ ನಡೆಯುವವರೆಂಬ ಸಮಾಚಾರ ಎಲ್ಲೆಲ್ಲೂ ಹರಡಿದೆ. ಇದರಿಂದಾಗಿ ನಾನು ನಿಮ್ಮ ವಿಷಯದಲ್ಲಿ ಸಂತೋಷಪಡುತ್ತೇನೆ. ನೀವು ಒಳ್ಳೆಯ ವಿಷಯದಲ್ಲಿ ಜಾಣರೂ ಕೆಟ್ಟ ವಿಷಯದಲ್ಲಿ ಕಳಂಕರಹಿತರೂ ಆಗಿರಬೇಕು. [20]ಆಗ ಶಾಂತಿದಾತ ದೇವರು ಶೀಘ್ರವಾಗಿ ಸೈತಾನನನ್ನು ನಿಮ್ಮ ಪಾದದಡಿಯಲ್ಲಿ ನಸುಕಿಬಿಡುವರು.

ನಮ್ಮ ಪ್ರಭು ಯೇಸುಕ್ರಿಸ್ತರ ಅನುಗ್ರಹವು ನಿಮ್ಮೊಡನೆ ಇರಲಿ !

21 ನನ್ನ ಸಹೋದ್ಯೋಗಿಯಾದ ತಿಮೊಥೇಯನು ಮತ್ತು ನನ್ನ ಸ್ವದೇಶೀಯರಾದ ಲೂಕ್ಯ, ಯಾಸೋನನು, ಸೋಸಿಪತ್ರನು ಇವರುಗಳು ನಿಮಗೆ ವಂದನೆಗಳನ್ನು ತಿಳಿಸಿದ್ದಾರೆ.

22 ಈ ಪತ್ರವನ್ನು ಬರೆದುಕೊಟ್ಟ ತೆರ್ತ್ಯನೆಂಬ ನಾನೂ ನಿಮ್ಮನ್ನು ಪ್ರಭುವಿನಲ್ಲಿ ವಂದಿಸುತ್ತೇನೆ.

23 ನನಗೂ ಸಮಸ್ತ ಸಭೆಗೂ ಅತಿಥಿ ಸತ್ಕಾರ ನೀಡುತ್ತಿರುವ ಗಾಯನು ನಿಮ್ಮನ್ನು ವಂದಿಸುತ್ತಾನೆ. ಈ ಪಟ್ಟಣದ ಖಜಾಂಚಿ ಎರಸ್ತನೂ ಸಹೋದರ ಕ್ವರ್ತನೂ ನಿಮಗೆ ವಂದನೆಗಳನ್ನು ಹೇಳಿದ್ದಾರೆ. [24]ನಮ್ಮ ಪ್ರಭು ಯೇಸುಕ್ರಿಸ್ತರ ಅನುಗ್ರಹವು ನಿಮ್ಮೆಲ್ಲರೊಡನೆ ಇರಲಿ! ಆಮೆನ್.

### ಆಶೀರ್ವಚನ

25-[26]ಅನಾದಿಯಿಂದಲೂ ಗುಪ್ತವಾಗಿದ್ದ ರಹಸ್ಯವು ಈಗ ಪ್ರಕಟವಾಗಿದೆ. ಶಾಶ್ವತ ದೇವರ ಆಜ್ಞೆಯ ಮೇರೆಗೆ ಅನ್ಯಧರ್ಮೀಯರೂ ವಿಧೇಯರಾಗಿ ವಿಶ್ವಾಸಿಸುವಂತೆ ಪ್ರವಾದನಾ ಗ್ರಂಥಗಳ ಮೂಲಕ ಆ ರಹಸ್ಯವನ್ನು ಈಗ ಅವರಿಗೆ ತಿಳಿಸಲಾಗುತ್ತಿದೆ. ಇದನ್ನು ಬೆಳಕಿಗೆ ತರುವ ನನ್ನ ಸಂದೇಶದ ಮೂಲಕ ಮತ್ತು ಯೇಸುಕ್ರಿಸ್ತರನ್ನು ಕುರಿತ ಬೋಧನೆಯ ಮೂಲಕ ದೇವರು ನಿಮ್ಮನ್ನು ವಿಶ್ವಾಸದಲ್ಲಿ ದೃಢಪಡಿಸಲು ಶಕ್ತರು.

27 ಜ್ಞಾನಾಂಬುದಿಯಾದ ಆ ಏಕೈಕ ದೇವರಿಗೆ ಯೇಸುಕ್ರಿಸ್ತರ ಮುಖಾಂತರ ಯುಗಯುಗಾಂತರಕ್ಕೂ ಮಹಿಮೆ ಸಲ್ಲಲಿ ! ಆಮೆನ್.